ಸಂಪುಟ: 22, ಸಂಚಿಕೆ: 75, ಪುಟಗಳು: 8, ಬುಧವಾರ, 25 ಡಿಸೆಂಬರ್ 2024 RNI NO. KARKAN/2002/08054
epaper: www.sanjemugilu.com




ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

**ಸುಭಾಷಿತ**

ಅವಶ್ಯಕತೆ ಇದ್ದಾಗ ಮೋಸಗಾರರು ಕೂಡ ಒಳ್ಳೆಯವರಂತೆ ನಟಿಸುತ್ತಾರೆ.

**ಪಂಚಾಂಗ**

(ಬುಧವಾರ 25, ಡಿಸೆಂಬರ್-2024)

- ರಾಹುಕಾಲ : 12:23 ರಿಂದ 01:48
- ಗುಳಿಕಕಾಲ : 10:57 ರಿಂದ 12:23
- ಯಮಗಂಡಕಾಲ : 8:06 ರಿಂದ 9:32
- ಬುಧವಾರ, ದಶಮಿ, ಚಿತ್ತ ನಕ್ಷತ್ರ
- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಹಿಮಂತ ಋತು,
- ಮಾರ್ಗಶಿರ ಮಾಸ, ಕೃಷ್ಣ ಪಕ್ಷ




## ಬೆಂಗಳೂರು- ದೆಹಲಿ ವಿಮಾನ ಹಾರಾಟದ ಮಧ್ಯೆ ಮಾಜಿ ಸೈನಿಕ ಅಸ್ವಸ್ಥ

# ವಿಮಾನದಲ್ಲೇ ಚಿಕಿತ್ಸೆ ನೀಡಿ ರಕ್ಷಿಸಿದ ಡಾಕ್ಟರ್!

**ಬೆಂಗಳೂರು:** ಬೆಂಗಳೂರುನಿಂದ ದೆಹಲಿಗೆ ತೆರಳುತ್ತಿದ್ದ ಇಂಡಿಗೋ ವಿಮಾನ ಹಾರಾಟದ ಮಧ್ಯೆ ಅಸ್ವಸ್ಥಗೊಂಡಿದ್ದ 44 ವರ್ಷದ ಮಾಜಿ ಸೈನಿಕರೊಬ್ಬರಿಗೆ ಡಾಕ್ಟರ್ ಒಬ್ಬರು ವಿಮಾನದಲ್ಲಿಯೇ ಚಿಕಿತ್ಸೆ ನೀಡಿ ರಕ್ಷಿಸಿದ್ದಾರೆ. ಭಾನುವಾರ ಬೆಳಗ್ಗೆ 5-45ಕ್ಕೆ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಟೇಕಾಫ್ ಆಗಿದ್ದ ವಿಮಾನದಲ್ಲಿ (ಸಂಖ್ಯೆ 6ಇ 6021) ಈ ಘಟನೆ ನಡೆದಿದೆ. ವಿಮಾನ ಟೇಕಾಫ್ ಆದ 45 ನಿಮಿಷಗಳಲ್ಲಿ ಪ್ರಯಾಣಿಕರೊಬ್ಬರಿಗೆ ನೆರವಾಗಲು ಯಾರಾದರೂ ವೈದ್ಯರು ಮುಂದೆ ಬರ್ತಿರಾ ಎಂದು ಕ್ಯಾಬಿನ್ ಸಿಬ್ಬಂದಿ ಘೋಷಣೆ ಮಾಡಿದ್ದು, ತಕ್ಷಣ ಅವರನ್ನು ಸಂಪರ್ಕಿಸಿದ ಚಂಡೀಗಢದ ಪಿಜಿಐಎಂಇಆರ್‌ನಲ್ಲಿ (ಸ್ನಾತಕೋತ್ತರ ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ)ಯ ಎಮರ್ಜೆನ್ಸಿ ಮೆಡಿಸಿನ್ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಮೊಹಿಂದ್ರಾ ಪ್ರಯಾಣಿಕನಿಗೆ ಏನಾಗಿದೆ ಎಂಬುದನ್ನು ಅರಿತು ಚಿಕಿತ್ಸೆ ನೀಡಿದ್ದಾರೆ. ಕ್ಯಾಬಿನ್ ಸಿಬ್ಬಂದಿಗೆ ನೀರಿನಲ್ಲಿ ಸಕ್ಕರೆಯನ್ನು ಬೆರೆಸಿ ಹೇಳಿದ್ದಾರೆ.




ಪುಟ 2

## ಬೆಳಗಾವಿಯಲ್ಲಿ ಹಾಡಹಗಲೇ 24 ಬಾರಿ ಕೊಚ್ಚಿ ಕೊಲೆ ಮಾಡಲು ಯತ್ನ

# ಸಂತ್ರಸ್ತ ಬದುಕಿದ್ದೇ ಪವಾಡ!

**ಬೆಳಗಾವಿ:** ಅನೈತಿಕ ಸಂಬಂಧ ಆರೋಪ ಹಿನ್ನೆಲೆಯಲ್ಲಿ ವ್ಯಕ್ತಿಯೊಬ್ಬನನ್ನು ಹಾಡಹಗಲೇ ಕುಡುಗೋಲಿನಿಂದ 24 ಬಾರಿ ಕೊಚ್ಚಿ ಕೊಲೆ ಮಾಡಲು ಯತ್ನಿಸಿರುವ ಘಟನೆ ಬೆಳಗಾವಿ ಜಿಲ್ಲೆ ಮಲ್ಲಮ್ಮನ ಬೆಳವಡಿ ಗ್ರಾಮದಲ್ಲಿ ನಡೆದಿದೆ. ಅರವಳ್ಳಿ ಗ್ರಾಮದ ಮಕ್ತುಮ್ ತಟಗಾರ್ ಹಲ್ಲೆಗೊಳಗಾದ ವ್ಯಕ್ತಿ. ಮುತ್ತು ಗಣಾಚಾರಿ ಹಲ್ಲೆ ಮಾಡಿದ ಆರೋಪಿ.

ಪುಟ 2



## ಸಂಕ್ಷಿಪ್ತ ಸುದ್ದಿ

### ಮಕ್ಕಳನ್ನು ಅಪಹರಿಸಿ ಲಾಡ್ಜ್‌ನಲ್ಲಿಟ್ಟ!

**ಕೋಲಾರ:** ಜಿಲ್ಲೆಯಲ್ಲಿ ಮಕ್ಕಳ ಅಪಹರಣದ ಪ್ರಕರಣ ಬೆಳಕಿಗೆ ಬಂದಿದ್ದು, ಕಾರ್ಯಾಚರಣೆ ನಡೆಸಿದ ಪೊಲೀಸರು ಆರೋಪಿಯನ್ನು ಬಂಧಿಸಿ, ಮಕ್ಕಳನ್ನು ರಕ್ಷಣೆ ಮಾಡಿದ್ದಾರೆ. ಬಂಗಾರಪೇಟೆ ಪೊಲೀಸರ ಕ್ಷಿಪ್ರ ಕಾರ್ಯಾಚರಣೆಯಿಂದಾಗಿ ಅಪಹರಣಗೊಂಡಿದ್ದ ಮಕ್ಕಳನ್ನು ರಕ್ಷಿಸಲಾಗಿದ್ದು, ರಾಯಚೂರು ಮೂಲದ ಜ್ಯೋತಿಷಿ ವಿಷ್ಣು ರಾವ್ ಎಂಬಾತನನ್ನು ಬಂಧಿಸಲಾಗಿದೆ.

ಪುಟ 2



### ಅವೈಜ್ಞಾನಿಕ ಡಿವೈಡರ್

**ಚಿತ್ರದುರ್ಗ:** ಅಪಘಾತಗಳಿಗೆ ಬ್ರೇಕ್ ಹಾಕಲು ರಸ್ತೆ ಅಗಲೀಕರಣಕ್ಕಾಗಿ ಸರ್ಕಾರ ಅನುದಾನ ನೀಡಿತ್ತು. ಆದರೆ ರಸ್ತೆ ಅಗಲೀಕರಣ ಮಾಡದೇ ರಸ್ತೆ ಮಧ್ಯೆ ಅವೈಜ್ಞಾನಿಕವಾಗಿ ಡಿವೈಡರ್ ಅಳವಡಿಸಿದ ಪರಿಣಾಮ ಅವಘಡಗಳು ಮಿತಿಮೀರಿದ ಬೆನ್ನಲ್ಲೇ ಎಚ್ಚೆತ್ತ ಚಿತ್ರದುರ್ಗ ಜಿಲ್ಲಾಡಳಿತ ರಸ್ತೆ ಅಗಲೀಕರಣಕ್ಕೆ ಮುಂದಾಗಿದೆ. ಐತಿಹಾಸಿಕ ಹಿನ್ನೆಲೆಯ ಕೋಟೆನಾಡು ಚಿತ್ರದುರ್ಗ ಹೇಳಿಕೇಳಿ ರಾಜ್ಯದ ಪ್ರಮುಖ ಪ್ರವಾಸಿತಾಣ. ಈ ತಾಣದ ಅಭಿವೃದ್ಧಿಗೆ ಸರ್ಕಾರ ಕೋಟ್ಯಂತರ ರೂ. ಅನುದಾನ ನೀಡಿದೆ.

ಪುಟ 2




### ಬೀದಿ ನಾಯಿಗಳಿಗೆ ಆಹಾರ ನೀಡುತ್ತಿದ್ದ ಮಾಡೆಲ್‌ಗೆ ಕಿರುಕುಳ

ಬೆಂಗಳೂರು: ನಗರದಲ್ಲಿ ಬೀದಿ ನಾಯಿಗಳಿಗೆ ಆಹಾರ ನೀಡುತ್ತಿದ್ದ ಮಾಡೆಲ್‌ಗೆ ಕಿರುಕುಳ ನೀಡುತ್ತಿರುವ ಆರೋಪ ಕೇಳಿಬಂದಿದೆ. ಹಲವು ವರ್ಷಗಳಿಂದ ಶ್ವಾನಗಳಿಗೆ ಆಹಾರ ನೀಡುತ್ತಿರುವ ನನಗೆ ಸ್ಥಳೀಯ ನಿವಾಸಿಗಳು ಕಿರುಕುಳ ನೀಡುತ್ತಿದ್ದಾರೆ ಎಂದು ಪ್ರಿಯಾ ಎಂಬ ಮಾಡೆಲ್‌ಗೆ ಆರೋಪ ಮಾಡಿದ್ದಾರೆ.

ಪುಟ 2

## ರಾಹುಲ್ ಗಾಂಧಿ ಹೆಸರು ಬಳಸಬೇಡಿ | ರಾಜ್ಯ ನಾಯಕರಿಗೆ ಕಾಂಗ್ರೆಸ್

# ಹೈಕಮಾಂಡ್ ಖಡಕ್ ಎಚ್ಚರಿಕೆ

**ಬೆಂಗಳೂರು:** ಬಿಜೆಪಿ ಎಂಎಲ್‌ಸಿ ಸಿಟಿ ರವಿ ಹಾಗೂ ಲಕ್ಷ್ಮೀ ಹೆಬ್ಬಾಳಕರ್ ನಡುವಣ ಪ್ರಕರಣದಲ್ಲಿ ರಾಹುಲ್ ಗಾಂಧಿ ಹೆಸರು ತಳಕು ಹಾಕದಂತೆ ಕಾಂಗ್ರೆಸ್ ಹೈಕಮಾಂಡ್ ರಾಜ್ಯ ನಾಯಕರಿಗೆ ಖಡಕ್ ಎಚ್ಚರಿಕೆ ನೀಡಿದೆ. ಈ ವಿಚಾರವಾಗಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆಸಿ ವೇಣುಗೋಪಾಲ್ ದೂರವಾಣಿ ಕರೆ ಮಾಡಿ ಸೂಚನೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ರಾಹುಲ್ ಗಾಂಧಿ ಡ್ರಗ್ ಅಡಿಕ್ಟ್ ಎಂದು ಸಿಟಿ ರವಿ ಹೇಳಿದ್ದಕ್ಕೆ ಕೊಲೆಗಾರ ಪದ ಬಳಸಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸಮರ್ಥನೆ ಮಾಡಿಕೊಂಡಿದ್ದರು. ಈ ಘಟನೆ ನಡೆದ ಸಂದರ್ಭದಲ್ಲೇ ಕಾಂಗ್ರೆಸ್ ನಾಯಕರೊಬ್ಬರು ಹೈಕಮಾಂಡ್‌ಗೆ ಮಾಹಿತಿ ನೀಡಿದ್ದರುನ ಎನ್ನಲಾಗಿದೆ. ಹಿರಿಯ ಪರಿಷತ್ ಸದಸ್ಯ ಕೆಸಿ ವೇಣುಗೋಪಾಲ್‌ಗೆ ಕರೆ ಮಾಡಿ ಮಾಹಿತಿ ನೀಡಿದ್ದರು. ತಕ್ಷಣವೇ ರಾಹುಲ್ ಗಾಂಧಿಗೆ ಕೆಸಿ ವೇಣುಗೋಪಾಲ್ ವಿಚಾರ ತಿಳಿಸಿದ್ದರು. ಇದೇ ವೇಳೆ, ಘಟನೆಯಲ್ಲಿ ತಮ್ಮ ಹೆಸರು ಪ್ರಸ್ತಾಪ ಮಾಡ್ತಿರುವುದಕ್ಕೆ ರಾಹುಲ್ ಗಾಂಧಿ ಗರಂ ಆಗಿದ್ದರು ಎನ್ನಲಾಗಿದೆ.



### ಸಿಟ್ಟಾದ ರಾಹುಲ್ ಗಾಂಧಿ: ಪ್ರಭಾವಿ ಸಚಿವರಿಗೇ ಎಚ್ಚರಿಕೆ

ರಾಹುಲ್ ಗಾಂಧಿ ಸಿಟ್ಟಾಗುತ್ತಿದ್ದಂತೆಯೇ ಪರಿಷತ್ ಸದಸ್ಯನಿಗೆ ವೇಣುಗೋಪಾಲ್ ವಾಪಸ್ ಕರೆ ಮಾಡಿದ್ದಾರೆ. ಸಭಾಪತಿ ಕೊಠಡಿಯಲ್ಲಿ ಇದ್ದಾಗಲೇ ಪರಿಷತ್ ಸದಸ್ಯನಿಗೆ ದೆಹಲಿಯಿಂದ ಕರೆ ಬಂದಿದೆ. ಈ ವೇಳೆ ಕರೆ ಸ್ವೀಕರಿಸಿದ ಪರಿಷತ್ ಸದಸ್ಯ, ಪ್ರಭಾವಿ ಸಚಿವರಿಗೆ ಫೋನ್ ಕೊಟ್ಟಿದ್ದಾರೆ. ಇದೇ ವೇಳೆ, ರಾಹುಲ್ ಗಾಂಧಿ ಹೆಸರು ಈ ವಿಚಾರದಲ್ಲಿ ತಳಕು ಹಾಕಬೇಡಿ ಎಂದು ಸಚಿವರಿಗೆ ಎಚ್ಚರಿಕೆ ನೀಡಲಾಗಿದೆ. ಅಲ್ಲದೆ, ರಾಹುಲ್ ಗಾಂಧಿ ಹೆಸರು ಯಾಕೆ ಪ್ರಸ್ತಾಪ ಮಾಡುತ್ತಿದ್ದೀರಿ ಎಂದು ಪ್ರಶ್ನೆ ಮಾಡಿದ್ದಾರೆ. ಇದೇ ಕಾರಣಕ್ಕೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ನೀಡಿರುವ ದೂರಿನಲ್ಲಿಯೂ ರಾಹುಲ್ ಗಾಂಧಿ ವಿಚಾರ ಪ್ರಸ್ತಾಪ ಇಲ್ಲ. ದೂರಿನಲ್ಲಿ, ಕೇವಲ ರಾಷ್ಟ್ರೀಯ ನಾಯಕರು ಎಂದಷ್ಟೇ ಉಲ್ಲೇಖಿಸಲಾಗಿದೆ. ಫೋನ್‌ನಲ್ಲಿ ವೇಣುಗೋಪಾಲ್ ಮಾತು ಮುಗಿಸುತ್ತಿದ್ದಂತೆಯೇ ಪರಿಷತ್ ಸದಸ್ಯನ ವಿರುದ್ಧ ಪ್ರಭಾವೀ ಸಚಿವರು ಕೆಂಡಾಮಂಡಲವಾಗಿದ್ದರು ಎಂಬುದೂ ಗೊತ್ತಾಗಿದೆ. ವೇಣುಗೋಪಾಲ್ ಕರೆ ಸ್ವೀಕರಿಸಿ ಸಚಿವರಿಗೆ ಫೋನ್ ನೀಡಿದ್ದಕ್ಕೆ ಸಚಿವರು ಅವರನ್ನು ತರಾಟೆಗೆ ತೆಗೆದುಕೊಂಡಿದ್ದರು ಎನ್ನಲಾಗಿದೆ. ಕೆಸಿ ವೇಣುಗೋಪಾಲ್ ಸೂಚನೆ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಆಪ್ತರು ರಾಹುಲ್ ಗಾಂಧಿ ಬಗ್ಗೆ ಯಾವುದೇ ವಿಷಯ ಪ್ರಸ್ತಾಪ ಮಾಡಿಲ್ಲ. ರಾಹುಲ್ ಗಾಂಧಿ ಡ್ರಗ್ ಅಡಿಕ್ಟ್ ಎಂಬ ಹೇಳಿಕೆಗೆ ಅಗ್ರೆಸಿವ್ ತಿರುಗೇಟು ನೀಡಿಲ್ಲ ಎಂದು ಮೂಲಗಳು ಹೇಳಿವೆ.

## ಟ್ರಾಫಿಕ್ ನಿಯಂತ್ರಣಕ್ಕೆ ಪಾಲಿಕೆ ಪ್ಲ್ಯಾನ್

**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಟ್ರಾಫಿಕ್ ಸಮಸ್ಯೆ ಜನರನ್ನೂ ಬಿಟ್ಟೂಬಿಡದೆ ಕಾಡುತ್ತಿದೆ. ಬೆಂಗಳೂರಿಗರ ಅರ್ಧಜೀವನ ಟ್ರಾಫಿಕ್‌ನಲ್ಲೇ ಕಳೆದುಹೋಗುತ್ತಿದ್ದು, ಇತ್ತ ಬ್ರ್ಯಾಂಡ್ ಬೆಂಗಳೂರಿನ ಟ್ರಾಫಿಕ್ ಕಿರಿಕಿರಿಗೆ ಬ್ರೇಕ್ ಹಾಕಲು ಪಾಲಿಕೆ ಹೊಸ ಯೋಜನೆ ರೂಪಿಸಲು ಸಜ್ಜಾಗಿದೆ. ಸದ್ಯ ದೆಹಲಿ ಮೂಲದ ಖಾಸಗಿ ಕಂಪನಿ ಜೊತೆ ಕೈಜೋಡಿಸಿರುವ ಪಾಲಿಕೆ ಹೊಸ ಡಿಪಿಆರ್ ಸಿದ್ಧಪಡಿಸಿದ್ದು, ಇದರಲ್ಲಿ ರಾಜಧಾನಿಯ ಸಂಚಾರ ವ್ಯವಸ್ಥೆ ಹಾಗೂ ಟ್ರಾಫಿಕ್ ಕಂಟ್ರೋಲ್‌ಗೆ ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ವರದಿ ಸಿದ್ಧವಾಗಿದೆ. ಸದ್ಯ ಈ ವರದಿಯನ್ನು ಬಿಬಿಎಂಪಿಯ ಮುಖ್ಯ ಆಯುಕ್ತರಿಗೆ ಸಲ್ಲಿಸಲಾಗಿದೆ.



ಪುಟ 2

## ಜನವರಿಯಲ್ಲಿ ನಮ್ಮ ಮೆಟ್ರೋಗೆ ಬರಲಿವೆ ಎರಡು ಹೊಸ ರೈಲು

**ಬೆಂಗಳೂರು:** ನಮ್ಮ ಮೆಟ್ರೋ ಹಸಿರು ಮತ್ತು ನೇರಳೆ ಎರಡು ಮಾರ್ಗದಲ್ಲಿ ಪ್ರತಿದಿನ 9 ಲಕ್ಷಕ್ಕೂ ಹೆಚ್ಚು ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ. ಸದ್ಯ ಹಸಿರು ಮಾರ್ಗದಲ್ಲಿ 22 ರೈಲುಗಳು, ನೇರಳೆ ಮಾರ್ಗದಲ್ಲಿ 32 ರೈಲುಗಳು ಕಾರ್ಯಾಚರಣೆ ಮಾಡುತ್ತಿದ್ದರೆ, ಸ್ಪೇರ್ ಆಗಿ 3 ರೈಲುಗಳಿವೆ. ಒಟ್ಟು ಎರಡು ಮಾರ್ಗದಲ್ಲಿ 57 ರೈಲುಗಳಿವೆ. ಆದರೆ ರೈಲಿನಲ್ಲಿ ಪ್ರಯಾಣಿಕರಿಗೆ ಜಾಗ ಸಾಲುತ್ತಿಲ್ಲ. ಕಾಲಿಡಲು ಜಾಗವಿಲ್ಲದಷ್ಟು ರಷ್ ಆಗುತ್ತಿವೆ. ಇದರಿಂದ ಮೆಟ್ರೋ 21 ಹೊಸ ರೈಲುಗಳ ಖರೀದಿಗೆ ಆರ್ಡರ್ ಮಾಡಿದ್ದು, ಮೊದಲ ಹಂತದಲ್ಲಿ ಜನವರಿ 10 ರಂದು ಮೊದಲ ರೈಲು ಪೀಣ್ಯ ಡಿಪೋ ತಲುಪಲಿದೆ. ನಂತರ ಪ್ರತಿ ಒಂದು, ಎರಡು ತಿಂಗಳಿಗೆ ಒಂದೊಂದು ರೈಲುಗಳು ಸೇರ್ಪಡೆ ಆಗಲಿದೆ ಎಂದು ಬಿಎಂಆರ್‌ಸಿಎಲ್ ಸಾರ್ವಜನಿಕ ಮುಖ್ಯ ಸಂಪರ್ಕಾಧಿಕಾರಿ ಯಶ್ವಂತ್ ಚೌವ್ಹಾಣ್ ತಿಳಿಸಿದ್ದಾರೆ. ಇತ್ತ ಬಹು ನಿರೀಕ್ಷಿತ ಆರ್‌ವಿ ರೋಡ್- ಬೊಮ್ಮಸಂದ್ರ ಹಳದಿ ಮಾರ್ಗದ ಮೆಟ್ರೋ ಮಾರ್ಗದಲ್ಲಿ ಸದ್ಯ ಒಂದು ಚಾಲಕರಹಿತ ರೈಲಿದ್ದು, ಹೊಸ ವರ್ಷಕ್ಕೆ ಅಂದರೆ ಜನವರಿ 15 ಕ್ಕೆ ಚೀನಾದಿಂದ ನಮ್ಮ ಮೆಟ್ರೋಗೆ ಎರಡನೇ ರೈಲು ಬರಲಿದೆ.




ಪುಟ 2

## ಬೆಂಕಿಗೆ ಮೂರು ಅಂಗಡಿ ಭಸ್ಮ



**ಬಳ್ಳಾರಿ:** ಆಕಸ್ಮಿಕ ಬೆಂಕಿ ತಗುಲಿ ಮೂರು ಅಂಗಡಿಗಳು ಸುಟ್ಟು ಕರಕಲಾಗಿರುವ ಘಟನೆ ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ತೋರಣಗಲ್‌ನ ಜಿಂದಾಲ್ ಕಾರ್ಖಾನೆ ಬೈಪಾಸ್ ಬಳಿ ನಡೆದಿದೆ.

ಘಟನೆಯಲ್ಲಿ ಆಟೋಮೊಬೈಲ್ ಶಾಪ್, ಎಲೆಕ್ಟ್ರಿಕಲ್ ಹಾಗೂ ಹೋಟೆಲ್ ಬೆಂಕಿಗಾಹುತಿಯಾಗಿದ್ದು, ಬೆಂಕಿಯ ಕೆನ್ನಾಲೆಗೆ ಸಿಕ್ಕು ಅಂಗಡಿಯಲ್ಲಿನ ವಸ್ತುಗಳೆಲ್ಲವೂ ಸುಟ್ಟು ಕರಕಲಾಗಿವೆ. ಎಲೆಕ್ಟ್ರಿಕ್ ಬ್ಯಾಟರಿಗಳು, ಎಲೆಕ್ಟ್ರಿಕ್ ವಸ್ತುಗಳು ಹಾಗೂ ಹೋಟೆಲ್‌ನ ಫ್ರಿಜ್, ಟೇಬಲ್, ಚೇರ್ ಸೇರಿ ಅಂದಾಜು 30 ಲಕ್ಷದ ವಸ್ತುಗಳು ಬೆಂಕಿಗಾಹುತಿಯಾಗಿವೆ.

ಇನ್ನೂ ಬೆಂಕಿ ತಗುಲಿ ದಟ್ಟ ಹೊಗೆ ಆವರಿಸಿದರಿಂದ ಸ್ಥಳೀಯರು ಆತಂಕಕ್ಕೆ ಒಳಗಾಗಿದ್ದರು. ಮಾಹಿತಿ ತಿಳಿದು ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಬರುವಷ್ಟರಲ್ಲಿ ಮೂರೂ ಅಂಗಡಿಗಳು ಸುಟ್ಟು ಕರಕಲಾಗಿದ್ದವು. ಘಟನೆ ಸಂಬಂಧ ತೋರಣಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೆಳ್ಳಂಬೆಳಗ್ಗೆ ಮ್ಯಾಕ್ಸ್ ದರ್ಶನ



ಬಹಳ ಅದ್ದೂರಿಯಾಗಿ 'ಮ್ಯಾಕ್ಸ್' ಸಿನಿಮಾವನ್ನು ಬಿಡುಗಡೆ ಮಾಡಲಾಗಿದೆ. ಇಂದು (ಡಿ.25) ಕಿಚ್ಚ ಸುದೀಪ್ ಅವರ ಅಭಿಮಾನಿಗಳಿಗೆ ಹಬ್ಬ. ಟ್ರೇಲರ್ ನೋಡಿ ಥ್ರಿಲ್ ಆಗಿದ್ದ ಅಭಿಮಾನಿಗಳು ಇಂದು ಬೆಳ್ಳಂಬೆಳಗ್ಗೆಯೇ ದೊಡ್ಡ ಪರದೆಯಲ್ಲಿ 'ಮ್ಯಾಕ್ಸ್' ಸಿನಿಮಾವನ್ನು ವೀಕ್ಷಿಸಿದ್ದಾರೆ. ಸುದೀಪ್ ಜೊತೆ ಸುನಿಲ್, ಉಗ್ರಂ ಮಂಜು, ಶರತ್ ಲೋಹಿತಾಶ್ವ, ಸುಕೃತಾ ವಾಗ್ಲೆ, ವರಲಕ್ಷ್ಮಿ ಶರತ್ ಕುಮಾರ್?, ಸಂಯುಕ್ತಾ ಹೊರನಾಡು, ಪ್ರಮೋದ್ ಶೆಟ್ಟಿ ಮುಂತಾದವರು ಈ ಸಿನಿಮಾದಲ್ಲಿ ನಟಿಸಿದ್ದಾರೆ. ವಿಜಯ್ ಕಾರ್ತಿಕೇಯ ನಿರ್ದೇಶನ ಮಾಡಿದ 'ಮ್ಯಾಕ್ಸ್' ಸಿನಿಮಾಗೆ ಕಲೈಪುಲಿ ಎಸ್?. ಥಾನು ಅವರು ಬಂಡವಾಳ ಹೂಡಿದ್ದಾರೆ.

## 'ಮೈಸೂರ್‌ಪಾಕ್' ಖೆಡ್ಡಾಕ್ಕೆ ಕೆಡವಲು ಶ್ವೇತಾ ಪ್ಲ್ಯಾನ್!

**ಬೆಂಗಳೂರು:** ವಂಚನೆ ಪ್ರಕರಣದಲ್ಲಿ ಬಂಧನಕ್ಕೆ ಒಳಗಾದ ವರ್ತೂರ್ ಪ್ರಕಾಶ್ ಆಪ್ತೆ ಶ್ವೇತಾ ಗೌಡಗೆ ಕೋಲಾರದ ಪ್ರಮುಖ ರಾಜಕೀಯ ವ್ಯಕ್ತಿ ಜೊತೆ ಸಂಬಂಧ ಹೊಂದಿದ್ದ ವಿಚಾರ ಈಗ ತನಿಖೆಯಿಂದ ಬಯಲಾಗಿದೆ. ಪೊಲೀಸರ ತನಿಖೆಯಲ್ಲಿ ಸ್ಫೋಟಕ ಮಾಹಿತಿಗಳು ಒಂದೊಂದಾಗಿ ಬಯಲಾಗುತ್ತಿದ್ದು ಕೋಲಾರ ರಾಜಕೀಯ ನಾಯಕನೊಬ್ಬನನ್ನು ಇತ್ತೀಚೆಗಷ್ಟೇ ಶ್ವೇತಾಗೌಡ ಪರಿಚಯ ಮಾಡಿಕೊಂಡಿದ್ದಳು. ಫೇಸ್‌ಬುಕ್ ಮೂಲಕ ಪರಿಚವಾಗಿ ಕೋಲಾರದಲ್ಲೇ ಶ್ವೇತಾಗೌಡ ಭೇಟಿಯಾಗಿದ್ದಳು.

» **ಕೋಲಾರದ ರಾಜಕೀಯ ವ್ಯಕ್ತಿಯಿಂದ ಥಾರ್ ಗಿಫ್ಟ್**

ಈ ವೇಳೆ ಕೋಲಾರದ ವೆಂಕಟೇಶ್ವರ ಸ್ವೀಟ್‌ನಲ್ಲಿ ರಾಜಕೀಯ ಮುಖಂಡ ಮೈಸೂರು ಪಾಕ್ ತಂದು ಕೊಟ್ಟಿದ್ದ.



# ಉತ್ತಮ ಆಡಳಿತ ನೀಡುವುದೇ 'ಸುಶಾಸನ' ಉದ್ದೇಶ



**ಕೋಲಾರ:** ತಳಮಟ್ಟದಿಂದ ಆಡಳಿತವನ್ನು ಬಲಪಡಿಸುವ ಮತ್ತು ಸಾಮಾನ್ಯ ಜನರಿಗೆ ಸರ್ಕಾರಿ ಸೇವೆಗಳನ್ನು ಪರಿಣಾಮಕಾರಿಯಾಗಿ ತಲುಪಿಸುವುದು 'ಸುಶಾಸನ ಸಪ್ತಾಹ ಅಭಿಯಾನ'ದ ಮುಖ್ಯ ಗುರಿ ಎಂದುಅಪರ ಜಿಲ್ಲಾಧಿಕಾರಿ ಮಂಗಳ ಅಭಿಪ್ರಾಯ ಪಟ್ಟರು.

ಇಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ನಡೆದ ಸುಶಾಸನ ಸಪ್ತಾಹ -ಪ್ರಶಾಸನ ಗ್ರಾಮಗಳ ಕಡೆಗೆ 2024ರ ಉತ್ತಮ ಆಡಳಿತ ವಾರ ಕಾರ್ಯಕ್ರಮದ ಜಿಲ್ಲಾ ಮಟ್ಟದ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

**ಉತ್ತಮ ಆಡಳಿತ ವ್ಯವಸ್ಥೆ:** ಉತ್ತಮ ಆಡಳಿತ ನೀಡುವುದು ಪ್ರಜಾಪ್ರಭುತ್ವ ವ್ಯವಸ್ಥೆಯ ಪ್ರಮುಖ ಧ್ಯೇಯ. ದಕ್ಷ ಆಡಳಿತದಿಂದ ದೇಶದ ಸಾಮಾಜಿಕ-ಆರ್ಥಿಕ-ರಾಜಕೀಯ ಹಾಗೂ ಶೈಕ್ಷಣಿಕ ಪ್ರಗತಿ ಸಾಧ್ಯ. ಸಾಮಾಜಿಕ ಹಕ್ಕುಗಳೆಂದರೆ ಕೇವಲ ವಸತಿ, ಆಹಾರ ಮತ್ತು ಶಿಕ್ಷಣ ನೀಡುವುದಷ್ಟೆ? ಅಲ್ಲ, ವೈಯಕ್ತಿಕ ಭದ್ರತೆ ನೀಡಿ, ಹಕ್ಕುಗಳನ್ನು ರಕ್ಷಿಸುವುದು ಆಗಿದೆ. ತಳಮಟ್ಟದಿಂದ ಮೇಲ್ಮಟ್ಟದವರೆಗೂ ಉತ್ತಮ ಆಡಳಿತ ನೀಡಿದಾಗ ಜನರ ಕ?ಗಳು ದೂರವಾಗುತ್ತದೆ ಎಂದರು.

ತಂತ್ರಜ್ಞಾನದ ಬಳಕೆಯಿಂದ ಭ್ರಷ್ಟಾಚಾರ ಇಳಿಮುಖವಾಗಲಿದೆ ಆದ್ದರಿಂದ ಯೋಜನೆಗಳ ಜಾರಿಯಲ್ಲಿ ಎಲ್ಲೆಲ್ಲಿ ಸಾಧ್ಯವೋ ಅಲ್ಲಿ ತಂತ್ರಜ್ಞಾನ ಬಳಕೆ ಮಾಡಿಕೊಳ್ಳಬೇಕು. ಸರ್ಕಾರದ ಆಶಯದಂತೆ ಆನ್‌ಲೈನ್ ಹಾಗೂ ಇ-ಆಡಳಿತದ ಮೂಲಕವೇ ಬಹುತೇಕ ಸಾರ್ವಜನಿಕ ಸೇವೆಗಳನ್ನು ಒದಗಿಸಲಾಗುತ್ತಿದೆ. ಸಾರ್ವಜನಿಕರ ಕುಂದುಕೊರತೆಗಳನ್ನು ನಿವಾರಿಸುವುದು. ಸಕಾಲ ಯೋಜನೆ ಮೂಲಕ ದೂರುಗಳನ್ನು ಸ್ವೀಕರಿಸಿ ತ್ವರಿತವಾಗಿ ಪರಿಹರಿಸಲಾಗುತ್ತಿದೆ ಎಂದರು.ಮಾನವ ಹಕ್ಕುಗಳ ರಕ್ಷಣೆಉತ್ತಮ ಆಡಳಿತದಿಂದ ಮಾತ್ರ ಮಾನವ ಹಕ್ಕುಗಳ ರಕ್ಷಣೆ ಸಾಧ್ಯವಾಗಲಿದೆ.ಅದಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಉತ್ತಮ ಆಡಳಿತದ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ದೇಶಾದ್ಯಂತ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಸರ್ಕಾರಿ ಸೇವೆ ದೇಶ ಸೇವೆಯಾಗಿದೆ. ಶಿಕ್ಷಣ, ತಂತ್ರಜ್ಞಾನ, ಕೌಶಲ್ಯ, ಆರೋಗ್ಯದ ಸವಲತ್ತುಗಳನ್ನು ಪ್ರತಿಯೊಬ್ಬರು ಪಡೆದುಕೊಳ್ಳಬೇಕು. ಉತ್ತಮ ಆಡಳಿತ ಸಪ್ತಾಹ (ಸುಶಾಸನ್ ಸಪ್ತಾಹ)ವು ಜಿಲ್ಲಾ ಮತ್ತು ತಾಲೂಕು ಕೇಂದ್ರಗಳ ಮೂಲಕ ಹಳ್ಳಿಗಳಿಗೆ ರವಾನಿಸುವುದು ಮತ್ತು ಇಡೀ ವ್ಯವಸ್ಥೆಯನ್ನು ಉತ್ತಮ ಆಡಳಿತ ಪರಿಕಲ್ಪನೆ ಸಾಕಾರಗೊಳಿಸುವುದು ಆಡಳಿತ ವರ್ಗದ ಮೇಲಿದೆ ಅದನ್ನು ಸಮರ್ಥವಾಗಿ ನಿಭಾಯಿಸಲು ಅಧಿಕಾರಿಗಳಿಗೆ ತಿಳಿಸಿದರು. ಆಡಳಿತದಲ್ಲಿ ದಕ್ಷತೆ ಮುಖ್ಯ

ಸಂಪನ್ಮೂಲ ವ್ಯಕ್ತಿ ಸೋಮೇಗೌಡ ಮಾತನಾಡಿ ಒಂದು ದೇಶದ ಪ್ರಗತಿ ಸಾಧಿಸಲು ಇಲಾಖೆ ಡಿ. ದರ್ಜೆ ನೌಕರ, ಸಹಾಯಕರಿಂದ ಮುಖ್ಯ ಅಧಿಕಾರಿಯವರೆಗೂ ಜರುಗುವ ದಕ್ಷ ಕಾರ್ಯದಿಂದ ಮಾತ್ರ ಸಾಧ್ಯವಾಗುತ್ತದೆ.ಪ್ರತಿಯೊಬ್ಬ ಅಧಿಕಾರಿ ನಿಷ್ಠೆ ಹಾಗೂ ಪಾರದರ್ಶಕತೆಯಿಂದ ಕಾರ್ಯನಿರ್ವಹಿಸಬೇಕು. ಕಚೇರಿಗಳಿಗೆ ಬರುವ ಜನರೊಂದಿಗೆ ಉತ್ತಮವಾಗಿ ಸ್ಪಂದಿಸಿ ಅವರಿಗೆ ಅವರ ಸಮಸ್ಯೆಗಳನ್ನು ಕಾನೂನು ರೀತ್ಯಾ ಪರಿಹರಿಸಬೇಕು. ಅಧಿಕಾರಿಗಳು ಕಚೇರಿ ಕರ್ತವ್ಯದ ಬಗ್ಗೆ ಸಮಯ ಪ್ರಜ್ಞೆ ಹೊಂದಿರಬೇಕು. ಸಕಾಲದಿಂದ ಬರುವ ಅರ್ಜಿಗಳಿಗೆ ಅಧಿಕಾರಿಗಳು ತ್ವರಿತವಾಗಿ ಪರಿಹಾರ ನೀಡಬೇಕು ಎಂದು ತಿಳಿಸಿದರು. ಕಾರ್ಯಾಗಾರದಲ್ಲಿ ಜಿಲ್ಲಾ ಪಂಚಾಯತ್ ನ ವೆಂಕಟಾಚಲಪತಿ ,ಉಪವಿಭಾಗಾಧಿಕಾರಿ ಡಾ. ಮೈತ್ರಿ, ಸಮಾಜಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸ್, ತೋಟಗಾರಿಕೆ ಉಪನಿರ್ದೇಶಕ ಕುಮಾರಸ್ವಾಮಿ, ಎನ್ ಐಸಿಯ ಅಧಿಕಾರಿ ಸ್ವಾಮಿ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ರಾಮಮೂರ್ತಿ,ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ತಹಸಿಲ್ದಾರ್ ಗಳು, ವಿವಿಧ ಇಲಾಖೆಗಳ ಅಧಿಕಾರಿಗಳು,ಸಿಬ್ಬಂದಿ ಇದ್ದರು.

# ಉಚಿತ ಆರೋಗ್ಯ ಶಿಬಿರ



**ಚಿಕ್ಕನಾಯಕನಹಳ್ಳಿ ಆರ್ಥಿಕ ಸಾಕ್ಷರತಾ ಕೇಂದ್ರ, ಹಾಗೂ ಮತ್ತಿಘಟ್ಟದ ಕರ್ನಾಟಕ ಗ್ರಾಮೀಣ ಬ್ಯಾಂಕ್ ಜಂಟಿಯಾಗಿ ಮಲ್ಲಿಗೆರೆ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕಾಮಲಾಪುರ ಗ್ರಾಮದಲ್ಲಿ ಜನ ಸುರಕ್ಷಾ ಅಭಿಯಾನದ ಅಂಗವಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿತ್ತು.**

**ಹುಳಿಯಾರು:** ಚಿಕ್ಕನಾಯಕನಹಳ್ಳಿ ಆರ್ಥಿಕ ಸಾಕ್ಷರತಾ ಕೇಂದ್ರ ಹಾಗೂ ಮತ್ತಿಘಟ್ಟದ ಕರ್ನಾಟಕ ಗ್ರಾಮೀಣ ಬ್ಯಾಂಕ್ ಜಂಟಿಯಾಗಿ ಮಲ್ಲಿಗೆರೆ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕಾಮಲಾಪುರ ಗ್ರಾಮದಲ್ಲಿ ಜನ ಸುರಕ್ಷಾ ಅಭಿಯಾನದ ಅಂಗವಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಸೋಮವಾರ ಏರ್ಪಡಿಸಲಾಗಿತ್ತು.

ಈ ಸಂದರ್ಭದಲ್ಲಿ ಕರ್ನಾಟಕ ಗ್ರಾಮೀಣ ಬ್ಯಾಂಕಿನ ವ್ಯವಸ್ಥಾಪಕರಾದ ಮಂಜುನಾಥ ಮಾತನಾಡಿ ಹುಟ್ಟು ಸಹಜ, ಸಾವು ಆಕಸ್ಮಿಕ. ಹುಟ್ಟು ಸಾವಿನ ನಡುವೆ ಆರೋಗ್ಯಕರ ಜೀವನ ನಡೆಸಲು ಒತ್ತು ನೀಡಬೇಕು. ಈ ನಿಟ್ಟಿನಲ್ಲಿ ಆಗಾಗ ದೇಹ ತಪಾಸಣೆ ಮಾಡಿಸುವ, ವೈದ್ಯರ ಸಲಹೆ ಮೇರೆಗೆ ಔಷಧಿ ಬಳಸುವ ಹಾಗೂ ನಿತ್ಯ ವ್ಯಾಯಾಮ, ವಾಕಿಂಗ್, ಸಮಯಕ್ಕೆ ಸರಿಯಾಗಿ ಮಿತ ಆಹಾರ ಸೇವನೆಯ ಹವ್ಯಾಸ ರೂಢಿಸಿಕೊಳ್ಳಬೇಕು ಎಂದರು.

ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಆರ್.ಎಂ.ಕುಮಾರಸ್ವಾಮಿ ಡಿಜಿಟಲ್ ಬ್ಯಾಂಕಿಂಗ್ ಬಗ್ಗೆ ಮಾತನಾಡುತ್ತಾ ಇತ್ತೀಚೆಗೆ ಸೈಬರ್ ಕಳ್ಳರು ಬ್ಯಾಂಕಿನ ಖಾತೆಯಲ್ಲಿರುವ ಹಣವನ್ನು ಕದಿಯಲು ವಿವಿಧ ಉಪಾಯಗಳನ್ನು ಮಾಡುತ್ತಿದ್ದು ಸಾರ್ವಜನಿಕರು ಎಚ್ಚರವಾಗಿರಬೇಕೆಂದು ಮಾಹಿತಿ ನೀಡಿದರು.

ಬೆಂಗಳೂರಿನ ಭಗವಾನ್ ಮಹಾವೀರ ಜೈ ಹಿಂದ್ ಇನ್ಸ್ಟಿಟ್ಯೂಟ್ ಆಫ್ ವಾಸ್ಕ್ಯುಲರ್ ಸಂಸ್ಥೆಯ ಜೈನ ಆಸ್ಪತ್ರೆಯ ಮಂಜುನಾಥ್ ಮಾತನಾಡುತ್ತಾ ಗ್ರಾಮೀಣ ಪ್ರದೇಶದಲ್ಲಿ ಇತ್ತೀಚೆಗೆ ಡಯಾಬಿಟಿಸ್ ಕಾಯಿಲೆ ಹೆಚ್ಚಾಗುತ್ತಿದ್ದು ಜಾಗೃತಿ ವಹಿಸಬೇಕೆಂದರು. ಗ್ರಾಮೀಣ ಪ್ರದೇಶಗಳಲ್ಲಿ ಹಳ್ಳಿಗರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಇಂತಹ ಶಿಬಿರಗಳನ್ನು ಉಚಿತವಾಗಿ ಹಮ್ಮಿಕೊಳ್ಳುತ್ತಿದ್ದು ಜನರು ಪ್ರಯೋಜನ ಪಡೆದುಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ಮತ್ತಿಘಟ್ಟ ಶಾಖೆಯಿಂದ ಮೂರು ಸ್ವಸಹಾಯ ಸಂಘಗಳಿಗೆ 20 ಲಕ್ಷ ಹಾಗೂ ಇಬ್ಬರು ರೈತರಿಗೆ ಕಿಸಾನ್ ಕ್ರೆಡಿಟ್ ಕಾರ್ಡ್ ಸಾಲ ರೂ 4 ಲಕ್ಷ ಮಂಜೂರಾತಿ ಪತ್ರ ನೀಡಲಾಯಿತು.

ಈ ಶಿಬಿರದಲ್ಲಿ ಬ್ಯಾಂಕ್ ಮಿತ್ರ ಸುದರ್ಶನ್, ಸಂಘದ ಪ್ರತಿನಿಧಿಗಳಾದ ನೇತ್ರಾವತಿ, ಲತಾ, ಜೈನ್ ಆಸ್ಪತ್ರೆಯ ಲೋಹಿತ್, ಆರಾಧ್ಯ, ಲೋಕೇಶ್ ಮುಂತಾದವರು ಉಪಸ್ಥಿತರಿದ್ದರು.70 ಕ್ಕೂ ಹೆಚ್ಚು ಹಿರಿಯ ನಾಗರಿಕರು, ಮಹಿಳೆಯರು ಆರೋಗ್ಯ ಶಿಬಿರದ ಪ್ರಯೋಜನ ಪಡೆದುಕೊಂಡರು.

### ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಶ್ರೀನಿಧಿ

# ಗ್ರಾಹಕರ ಕಾನೂನು ಅರಿವು ಅವಶ್ಯ



**ಚಾಮರಾಜನಗರ:** ದೈನಂದಿನ ಜೀವನದಲ್ಲಿ ಪ್ರತಿಯೊಬ್ಬರು ಗ್ರಾಹಕರೇ ಆಗಿರುವುದರಿಂದ ಗ್ರಾಹಕರ ಹಕ್ಕುಗಳ ಅರಿವು ಎಲ್ಲರಿಗೂ ಅವಶ್ಯವಾಗಿದೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಹೆಚ್.ಎನ್. ಶ್ರೀನಿಧಿ ಅವರು ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಳೇ ಕೆಡಿಪಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಹಾಗೂ ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರ, ಸಹಯೋಗದಲ್ಲಿ ಆಯೋಜಿಸಲಾಗಿದ್ದ 'ರಾಷ್ಟ್ರೀಯ ಗ್ರಾಹಕ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಹಕರು ವಸ್ತುವನ್ನು ಖರೀದಿಸಿದಾಗ ರಶೀದಿಯನ್ನು ತೆಗೆದುಕೊಳ್ಳಬೇಕು. ಬಳಿಕ ಖರೀದಿಸಿದ ವಸ್ತು ಗುಣಮಟ್ಟದಿಂದ ಕೂಡಿಲ್ಲವೆಂಬುದು ಕಂಡುಬಂದಾಗ ಅಥವಾ ಯಾವುದಾದರೂ ನ?ಟ ಹಾಗೂ ತೊಂದರೆ ಉಂಟಾದಲ್ಲಿ ರಶೀದಿ ಮೂಲಕ ಗ್ರಾಹಕರ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿ ಪರಿಹಾರ ಪಡೆಯಬಹುದಾಗಿದೆ. ಯಾವುದೇ ವಸ್ತುವನ್ನು ಖರೀದಿಸುವಾಗ ಅದರ ಗುಣಮಟ್ಟವನ್ನು ಸೂಕ್ಷ್ಮವಾಗಿ ಪರಿಶೀಲಿಸಿ ತೆಗೆದುಕೊಳ್ಳಿ ಎಂದು ಸಲಹೆ ಮಾಡಿದರು.

ಗ್ರಾಹಕರಿಗೆ ಹೆಚ್ಚಿನ ಅರಿವು ಮೂಡಿಸಲು ಹಾಗೂ ಗ್ರಾಹಕರ ಕುಂದುಕೊರತೆಗಳನ್ನು ಜಿಲ್ಲಾ ಗ್ರಾಹಕ ನ್ಯಾಯಾಲಯದಲ್ಲಿ ಗ್ರಾಹಕ ಆಯೋಗಗಳಿಂದ ಪರಿಹರಿಸಿಕೊಳ್ಳುವ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಗ್ರಾಹಕರ ದಿನವನ್ನು ಆಚರಿಸಲಾಗುತ್ತದೆ. ಈ ನಿಟ್ಟಿನಲ್ಲಿ ವಸ್ತುವನ್ನು ಖರೀದಿಸಿದಾಗ ತಪ್ಪದೆ ಸಂಬಂಧಿಸಿದ ರಶೀದಿಯನ್ನು ಪಡೆದುಕೊಳ್ಳಬೇಕು. ಅದೇ ರೀತಿ ಇತ್ತೀಚಿಗೆ ಹೆಚ್ಚುತ್ತಿರುವ ಆನ್‌ಲೈನ್ ಖರೀದಿ ವ್ಯವಹಾರಗಳ ಬಗ್ಗೆಯೂ ಎಚ್ಚರವಹಿಸುವಂತೆ ಶ್ರೀನಿಧಿ ಅವರು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಈಶ್ವರ್ ಅವರು ಮಾತನಾಡಿ ಕಾನೂನಿನ ಅಡಿಯಲ್ಲಿ ಎಲ್ಲರೂ ಸಮಾನರು. ಯಾರೇ ತಪ್ಪು ಮಾಡಿದರೂ ಕ್ಷಮೆ ಇರುವುದಿಲ್ಲ. ಸಂವಿಧಾನವು ನಮಗೆ ಮೂಲಭೂತ ಹಕ್ಕು ಮತ್ತು ಕರ್ತವ್ಯಗಳನ್ನು ನೀಡಿದೆ. ನಮ್ಮ ಹಕ್ಕುಗಳನ್ನು ರಕ್ಷಿಸಿಕೊಳ್ಳಲು ಹಾಗೂ ಮತ್ತ?ಟ ಜನರಿಗೆ ಗ್ರಾಹಕರ ಕಾನೂನುಗಳ ಕುರಿತು ಅರಿವು ಮೂಡಿಸಲು ಕಾನೂನನ್ನು ಕನಿ? ಮಟ್ಟಿಗೆ ತಿಳಿದುಕೊಂಡಿರಬೇಕು ಎಂದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ಭಾರತಿ ಅವರು ಮಾತನಾಡಿ ಪ್ರಕರಣಗಳಲ್ಲಿ ಸತ್ಯತೆ ಇದ್ದರೆ ಮಾತ್ರ ಆಯೋಗದ ಮುಂದೆ ದೂರು ಸಲ್ಲಿಸಬೇಕು. ಪ್ರಸ್ತುತ ವಿದ್ಯಾರ್ಥಿಗಳಿಗೆ ಕಾಲೇಜುಗಳಲ್ಲಿ ಕೋರ್ಸು ವ್ಯಾಸಂಗ ಮಾಡಿದರೆ ಕೆಲಸ ಕೊಡಿಸುವುದಾಗಿ ಮೋಸ ಮಾಡುವುದು, ಅಂಕಪಟ್ಟಿ ಕೊಡಲು ತಡ ಮಾಡುವುದು, ಪದವಿ ಪ್ರಮಾಣ ಪತ್ರ ನೀಡದೆ ತಡ ಮಾಡಿ ತೊಂದರೆ ನೀಡಿದರೆ ಗ್ರಾಹಕರ ನ್ಯಾಯಾಲಯದಲ್ಲಿ ದೂರು ದಾಖಲಿಸಬಹುದು ಎಂದರು. ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ಎನ್ .ಶ್ರೀಧರ್ ಅವರು ತೂಕ ಮತ್ತು ಅಳತೆ ಕುರಿತು ಕಾರ್ಯಕ್ರಮದಲ್ಲಿ ಮಾತನಾಡಿದರು.

ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ಯೋಗಾನಂದ ಅವರು ಮಾತನಾಡಿ ಪ್ರಾಸ್ತಾವಿಕವಾಗಿ ಮಾತನಾಡಿ ಭಾರತದಲ್ಲಿ 1986 ಡಿಸೆಂಬರ್ 24ರಂದು ಗ್ರಾಹಕರ ಸಂರಕ್ಷಣಾ ಕಾಯ್ದೆ ಜಾರಿಗೊಳಿಸಲಾಯಿತು. ಪ್ರತಿವರ್ಷ ಡಿಸೆಂಬರ್ 24ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರದ ಶಿವರಾಜಮ್ಮ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ರೈತರಿಗೆ ರೇಷ್ಮೆ ಕೃಷಿ ಬಗ್ಗೆ ಅರಿವು

**ಮಾಲೂರು:** ಪಟ್ಟಣದ ಕೃಷಿ ಇಲಾಖೆ ಆವರಣದಲ್ಲಿ ರಾಷ್ಟ್ರೀಯ ರೈತರ ದಿನಾಚರಣೆಯ ಕಾರ್ಯಕ್ರಮದಲ್ಲಿ ರೈತ ಮುಖಂಡರೊಂದಿಗೆ ರೇಷ್ಮೆ ಇಲಾಖೆಯ ವತಿಯಿಂದ ದೊರಕುವ ಸವಲತ್ತುಗಳ ಬಗ್ಗೆ ಹಾಗೂ ಪಸ್ತುತ ಘಟದಲ್ಲಿ ರೇಷ್ಮೆ ಹುಳುಗೆ ಹಾಕುವ ಕಂಬಳಿ ಸೊಪ್ಪುಗೆ ಬರುತ್ತಿರುವ ರೋಗಗಳ ಬಗ್ಗೆ ರೈತರಿಗೆ ಹಾಗೂ ದ್ವಿತಳಿ ಮೊಟ್ಟೆ ಬೇಡಿಕೆ ಬಗ್ಗೆ ರೇಷ್ಮೆ ನಿರೀಕ್ಷಕರು ಎನ್. ಆನಂದ್ ರೈತ ಮುಖಂಡರುಗಳಿಗೆ ಅರಿವು ಮೂಡಿಸಿದರು. ಈ ಸಂದರ್ಭದಲ್ಲಿ ರೈತರಾದ ಸಂಪಂಗಿರಾಮಯ್ಯ, ಎಂ.ಹೊಸಹಳ್ಳಿ ವೆಂಕಟೇಶ್, ವಿನೋದ್ ಸೇರಿದಂತೆ ಹಲವಾರು ರೈತರು ಭಾಗವಹಿಸಿದ್ದರು.




# ಜಾನಪದದಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ

**ಹುಳಿಯಾರು:** ತುಮಕೂರಿನಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಹುಳಿಯಾರಿನ ವಿದ್ಯಾವಾರಿಧಿ ಇಂಟರ್ ನ್ಯಾಷನಲ್ ಸ್ಕೂಲ್ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಈ ಶಾಲೆಯ ವಿದ್ಯಾರ್ಥಿಗಳಾದ ಲೇಪನ, ಪುಷ್ಪಿತ, ಯಶಿಕ ಮಾಧುರ್ಯ, ಪೂರ್ವಿಕ ಮಾನ್ಯತಾ, ವಂಶಿರಾಜ್, ಲಿಖಿತ್, ಮಹಾನ್ ಬಾಲಾಜಿ, ಜೀವನ್ ಜಾನಪದ ನೃತ್ಯದಲ್ಲಿ ಪ್ರಥಮ ಸ್ಥಾನಗಳಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಅಲ್ಲದೆ ಕನ್ನಡ ಭಾಷಣ ಸ್ಪರ್ಧೆಯಲ್ಲಿ ರೋಹಿಣಿ ದ್ವಿತೀಯ ಸ್ಥಾನ, ಕವನ/ಪದ್ಯವಾಚನ ಸ್ಪರ್ಧೆಯಲ್ಲಿ ಪೃಥ್ವಿ ದ್ವಿತೀಯ ಸ್ಥಾನ ಹಾಗೂ ಇಂಗ್ಲಿಷ್ ಭಾಷಣ ಕೌಶಿಕ ತೃತೀಯ ಸ್ಥಾನವನ್ನು ಗಳಿಸಿದ್ದಾರೆ.

ಮಕ್ಕಳ ಈ ಸಾಧನೆಗೆ ಶಾಲೆಯ ಆಡಳಿತ ಮಂಡಳಿ ಅಧ್ಯಕ್ಷ ಕೆ.ಎಸ್.ಕಿರಣ್‌ಕುಮಾರ್, ಕಾರ್ಯದರ್ಶಿ ಕವಿತಾಕಿರಣ್ ಹರ್ಷ ವ್ಯಕ್ತಪಡಿಸಿ ಮಕ್ಕಳನ್ನು ಅಭಿನಂದಿಸಿದ್ದಾರೆ.



# ದಲಿತ ಸಂಘಟನೆಗಳ ಒಕ್ಕೂಟದ ಬೃಹತ್ ಪ್ರತಿಭಟನೆ



**ಚಾಮರಾಜನಗರ:** ಕೇಂದ್ರ ಗೃಹ ಸಚಿವ ಅಮಿತ್ ಅವರು ಸಂಸತ್ನಲ್ಲಿ ಅಂಬೇಡ್ಕರ್ ಕುರಿತು ಅವಹೇಳನಕಾರಿ ಹೇಳಿಕೆ ನೀಡಿರುವುದನ್ನು ಖಂಡಿಸಿ ಚಾಮರಾಜನಗರ ತಾಲೂಕು ಆದಿಕರ್ನಾಟಕ ಜನಾಂಗದ ಗಡಿಮನೆ, ಕಟ್ಟಮನೆ, ಅಂಬೇಡ್ಕರ್ ಸಂಘಗಳು ಹಾಗೂ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಚಾಮರಾಜನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ಚಾಮರಾಜನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದ ಮುಂಭಾಗ ಜಮಾಯಿಸಿದಪ್ರತಿಭಟನಾಕಾರರು ಅಂಬೇಡ್ಕರ್ ಪ್ರತಿಮೆಯೊಂದಿಗೆ ಮೆರವಣಿಗೆಯಲ್ಲಿ ಸತ್ತಿ ರಸ್ತೆ, ಡಿವಿಯೇಷನ್ ರಸ್ತೆ, ಪಚ್ಚಪ್ಪ ಸರ್ಕಲ್, ಬಿ.ರಾಚಯ್ಯ ಜೋಡಿರಸ್ತೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಪ್ರತಿಭಟನೆ ನಡೆಸಿದರು. ಅಮಿತ್ ಶಾ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರು ಡಿ.17 ರಂದು ಸಂಸತ್ನಲ್ಲಿ ಅಂಬೇಡ್ಕರ್ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ್ದು ಅಂಬೇಡ್ಕರ್ ಅಂಬೇಡ್ಕರ್ ಅಂಬೇಡ್ಕರ್ ಎನ್ನುತ್ತಿರುವುದು ಇದೊಂದು ಫ್ಯಾಷನ್ ಆಗಿದೆ ಎಂದು ಅವಮಾನಿಸಿ ಇಷ್ಟು ಭಾರಿ ಇವರ ಹೆಸರನ್ನು ಹೇಳುವ ಬದಲು ದೇವರ ಹೆಸರನ್ನು ಸ್ಮರಣೆ ಮಾಡಿದ್ದೇ ಆಗಿದ್ದರೆ 7 ಜನ್ಮಗಳವರೆವಿಗೂ ಸ್ವರ್ಗ ಮತ್ತು ಮುಕ್ತಿ ಪ್ರಾಪ್ತಿಯಾಗುತ್ತಿತ್ತು ಎಂದು ಹೇಳಿರುವುದು ಖಂಡನೀಯ. ಹಗುರವಾಗಿ ನಾಲಿಗೆಯನ್ನು ಹರಿಬಿಟ್ಟಿರುವುದು ಆರ್.ಎಸ್.ಎಸ್ ಸಂಘಟನೆಯ ಕೋಮುವಾದಿ, ದೇಶದ್ರೋಹಿಗಳ ನಿಜವಾದ ಬಣ್ಣ ಬಯಲಾಗಿದೆ. ಅಂಬೇಡ್ಕರ್ ಅವರ ಬಗ್ಗೆ ಪಾರ್ಲಿಮೆಂಟ್ನಲ್ಲಿ ಈ ರೀತಿ ಮಾತಾನಾಡಿರುವುದು ಸಂವಿಧಾನ ಹಾಗೂ ಅಂಬೇಡ್ಕರ್ ಅವರಿಗೆ ಅಗೌರವವಾಗಿದ್ದು ದೇಶದ ಪ್ರತಿಯೊಬ್ಬ ಪ್ರಜೆಗೂ ತಲೆ ತಗ್ಗಿಸುವಂತಹ ಮಾತಾನಾಡಿರುತ್ತಾರೆ ಎಂದು ದೂರಿದರು. ಅಲ್ಲದೇ ಅಂಬೇಡ್ಕರ್ ಅವರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವ ಅಮಿತ್ ಶಾ ಪರವಾಗಿ ಪ್ರಧಾನಿ ನರೇಂದ್ರಮೋದಿ ನಿಂತಿರುವುದು ಖಂಡನೀಯ. ಕೂಡಲೇ ಅಮಿತ್ ಶಾ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕು. ಜೊತೆಗೆ ಎಸ್ಸಿ, ಎಸ್ಟಿ ದೌರ್ಜನ್ಯ ಕಾಯ್ದೆಯಡಿ ಮೊಕದ್ದಮೆ ಹೂಡಿ ದೇಶದಿಂದ ಗಡಿಪಾರು ಮಾಡಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಸಂಸದ ಸುನೀಲ್ಬೋಸ್, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್.ಕೃಷ್ಣಮೂರ್ತಿ, ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಲರ್ ಸೇರಿದಂತೆ ತಾಲೂಕು ಆದಿ ಕರ್ನಾಟಕ ಜನಾಂಗದ ಗಡಿಮನೆ, ಕಟ್ಟೆಮನೆ ಯಜಮಾನರು ಇದ್ದರು.

## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಕೋಲಾರ:** ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ 2024-25ನೇ ಸಾಲಿಗೆ ನೀರಿನಲ್ಲಿ ಕರಗುವ ರಸಗೊಬ್ಬರ ಕಾರ್ಯಕ್ರಮದಡಿ ರಸಗೊಬ್ಬರಗಳಾದ 13:0:45, 12:61:0 ಮತ್ತು 19:19:19 ಗಳಿಗೆ ರೈತರ ವಂತಿಗೆಯೊಂದಿಗೆ ಶೇ. 40/50 ರಷ್ಟು ಸಹಾಯಧನದಲ್ಲಿ ಇಲಾಖೆಯಿಂದ ಅನುಮೋದಿತ ಸರಬರಾಜುದಾರರಿಂದ ವಿತರಿಸಲು ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ರೈತರು ಸಂಬಂಧಪಟ್ಟ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಗಳಿಗೆ ಪಹಣಿ, ಬ್ಯಾಂಕ್ ಖಾತೆ ಮತ್ತು ಇತರೆ ದಾಖಲೆಗಳೊಂದಿಗೆ ಸಂಪರ್ಕಿಬಹುದೆಂದು ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇರ ಸಂದರ್ಶನ

**ಕೋಲಾರ:** ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಕೋಲಾರ ಜಿಲ್ಲೆಯ ಎಸ್.ಡಿ.ಯು. ಎಂ.ಸಿ ಮೆಡಿಕಲ್ ಕಾಲೇಜಿನ ಆರ್.ಎಲ್.ಜಾಲಪ್ಪ ಆಸ್ಪತ್ರೆಯ ಎನ್.ಟಿ.ಇ.ಪಿ ವಿಭಾಗದಲ್ಲಿ ಒಂದು ಖಾಲಿಯಿರುವ ವೈದ್ಯಾಧಿಕಾರಿ Medical Officer–NTEP ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ನೇರ ಸಂದರ್ಶನ ಆಯೋಜಿಸಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ಅಂಗೀಕೃತ ವಿಶ್ವವಿದ್ಯಾಲಯದಿಂದ ಎಂ.ಬಿ.ಬಿ.ಎಸ್ ಪದವಿ ಪಡೆದಿರಬೇಕು ಮತ್ತು ಕೆ.ಎಂ.ಸಿನಲ್ಲಿ ನೋಂದಣಿಯಾಗಿ ಅಸ್ತಿತ್ವದಲ್ಲಿರಬೇಕು. ವಯೋಮಿತಿ 45 ವರ್ಷದೊಳಗಿರಬೇಕು. ನೇರ ಸಂದರ್ಶನಕ್ಕೆ ಜನವರಿ 03 ರಂದು ಬೆಳಿಗ್ಗೆ 10.00 ಗಂಟೆಗೆ ತಮ್ಮ ಮೂಲ ದಾಖಲಾತಿಗಳೊಂದಿಗೆ 01 ಸೆಟ್ ಜೆರಾಕ್ಸ್ ಪ್ರತಿಗಳೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಹಾಜರಾಗಬಹುದು ಎಂದು ಜಿಲ್ಲಾ ಕ್ಷಯರೋಗ ನಿವಾರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೋಷಕರ ಪತ್ತೆಗಾಗಿ ಮನವಿ

**ಕೋಲಾರ:** ಕೋಲಾರ ಜಿಲ್ಲೆಯ ಮಕ್ಕಳ ರಕ್ಷಣಾ ಘಟಕ ಆದೇಶದ ಮೇರೆಗೆ, ಪಾಲನಾ ಮತ್ತು ರಕ್ಷಣೆಯ ಹಿತದೃಷ್ಟಿಯಿಂದ ಸರ್ಕಾರಿ ಬಾಲಕಿಯರ ಬಾಲಮಂದಿರದಲ್ಲಿ ಮತ್ತು ಮಕ್ಕಳ ಪಾಲನಾ ಸಂಸ್ಥೆಗೆ ದಾಖಲಾಗಿದೆ. ಹೆಸರು: ಸತ್ಯವೇಲು, 13 ವರ್ಷ ತಂದೆ: ರವಿ, ಕನ್ನಡ, ತೆಲಗು, ತಮಿಳು ಭಾಷೆ ಮಾತನಾಡುತ್ತಾರೆ. ಹುಟ್ಟಿದ ಸ್ಥಳ ಹಾಗೂ ಮಗು ದೊರೆತ ಸ್ಥಳ: ಮುಳಬಾಗಿಲು ಟೌನ್, ಕೋಲು ಮುಖ, ಗೋಧಿ ಮೈಬಣ್ಣ, ಎತ್ತರ 151 ಸೆ.ಮೀ, ಮಾನಸಿಕವಾಗಿ ಮತ್ತು ದೈಹಿಕವಾಗಿ ಉತ್ತಮವಾಗಿರುತ್ತಾರೆ. ಹೆಸರು: ಪ್ರಿಯದರ್ಶಿನಿ, ವಯಸ್ಸು: 14 ವರ್ಷ, ತಂದೆ: ಪ್ರದೀಪ್, ಹುಟ್ಟಿದ ಸ್ಥಳ: ಬಂಗಾರಪೇಟೆ ತಾಲ್ಲೂಕಿನ ಸೂಲಿಕುಂಟೆ ಅಂಚೆ ಮುಗಳಬೆಲೆ ಗ್ರಾಮ. ಗುಂಡು ಮುಖ, ಗೋಧಿ ಮೈಬಣ್ಣ, ಎತ್ತರ 120 ಸೆಂ.ಮೀ, ಕನ್ನಡ, ತಮಿಳು ಭಾಷೆ ಮಾತನಾಡುತ್ತಾರೆ. ಮಾನಸಿಕವಾಗಿ ಮತ್ತು ದೈಹಿಕವಾಗಿ ಉತ್ತಮವಾಗಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸರ್ಕಾರಿ ಬಾಲಕರ ಬಾಲಮಂದಿರ, ಮಸ್ಕಂ, ಕೆ.ಜಿ.ಎಫ್, ಕೋಲಾರ ಜಿಲ್ಲೆ-563113 ಕಚೇರಿ ದೂರವಾಣಿ ಸಂ: 08153-2740174, 8618288408, 8971717576 ಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 26ರಂದು ವಿದ್ಯುತ್ ವ್ಯತ್ಯಯ

**ರಾಮನಗರ:** 66/11ಕೆವಿ ಉರಗಹಳ್ಳಿ ವಿದ್ಯುತ್ ಉಪಕೇಂದ್ರಗಳ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಹಮ್ಮಿಕೊಳ್ಳಲಾಗಿದೆ. ಸುತ್ತಮುತ್ತಲಿನ ಪ್ರದೇಶನದಲ್ಲಿ ಡಿ. 26ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

## ಅಂಗಡಿ ಮುಂಗಟು ಮೇಲ್ಚಾವಣೆ ತೆರವುಗೊಳಿಸಿ

**ಚಾಮರಾಜನಗರ:** ಗುಂಡ್ಲುಪೇಟೆ ಪುರಸಭೆ ವ್ಯಾಪ್ತಿಯ ಮುಖ್ಯ ರಸ್ತೆಗಳಲ್ಲಿ ಪಾದಚಾರಿ ಮಾರ್ಗಗಳಿಗೆ ಹೊಂದಿಕೊಂಡಿರುವ ಸ್ವತ್ತುಗಳಲ್ಲಿ ಅಂಗಡಿ ಮುಂಗಟ್ಟುಗಳ ಮೇಲ್ಚಾವಣೆ ಮುಂಚಾಚಿಕೊಂಡಿರುವುದರಿಂದ ಸಾರ್ವಜನಿಕರ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಇದನ್ನು ತೆರವುಗೊಳಿಸುವಂತೆ ಪುರಸಭೆ ತಿಳಿಸಿದೆ. ಅಂಗಡಿ ಮಾಲೀಕರು ತಮ್ಮ ಸ್ವತ್ತಿನ ಅಳತೆ ವ್ಯಾಪ್ತಿಯಲ್ಲಿ ಅಂಗಡಿ ಮುಂಗಟ್ಟುಗಳ ಮೇಲ್ಚಾವಣೆ ನಿರ್ಮಿಸಿಕೊಳ್ಳದೇ ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿ ಮೇಲ್ಚಾವಣೆ ಮುಂಚಾಚಿಕೊಂಡಿರುವುದು ಹಾಗೂ ಮುಂಗಟ್ಟುಗಳನ್ನು ಪಾದಚಾರಿ ಮಾರ್ಗದಲ್ಲಿ ಇಟ್ಟುಕೊಂಡಿರುವುದು ಕಂಡು ಬಂದಿದೆ. ಇದರಿಂದ ಸಾರ್ವಜನಿಕರ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಒತ್ತುವರಿ ಮಾಡಿರುವ ಪಾದಚಾರಿ ಮಾರ್ಗವನ್ನು ಹಾಗೂ ಮೇಲ್ಚಾವಣೆ ಮುಂಚಾಚಿಕೊಂಡಿರುವುದನ್ನು ಡಿಸೆಂಬರ್ 30ರೊಳಗೆ ತಾವೇ ಸ್ವತಃ ತೆರವುಗೊಳಿಸಿಕೊಂಡು ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು. ಒಂದು ವೇಳೆ ತೆರವು ಮಾಡುವುದನ್ನು ನಿರ್ಲಕ್ಷಿಸಿದಲ್ಲಿ ಆಸ್ತಿ ಮಾಲೀಕರ ವಿರುದ್ಧ ಪುರಸಭೆ ಕಾಯ್ದೆ 1964ರಂತೆ ಕ್ರಮವಹಿಸಲಾಗುವುದು ಎಂದು ಪುರಸಭೆ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

## ಸಮೀಕ್ಷೆ-ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**ಚಾಮರಾಜನಗರ:** ಚಾಮರಾಜನಗರ ನಗರಸಭಾ ವ್ಯಾಪ್ತಿಯಲ್ಲಿ ಅನೈರ್ಮಲ್ಯ ಶೌಚಾಲಯ ಹಾಗೂ ಮ್ಯಾನ್ಯುವೆಲ್ ಸ್ಕ್ಯಾವೆಂಜರ್‌ಗಳ ವಿಶೇಷ ಸಮೀಕ್ಷೆಯಲ್ಲಿ 46 ಅರ್ಜಿಗಳು ಸ್ವೀಕೃತವಾಗಿದೆ. ಅರ್ಜಿದಾರರು ಸಲ್ಲಿಸಿರುವ ದಾಖಲೆಗಳು ಮತ್ತು ಸ್ಥಳ ಪರಿಶೀಲಿಸಲಾಗಿ ಪ್ರಸ್ತುತ ಯಾವುದೇ ವ್ಯಕ್ತಿಯೂ ಮ್ಯಾನ್ಯುವಲ್ ಸ್ಕ್ಯಾವೆಂಜರ್ ಆಗಿ ಕೆಲಸ ನಿರ್ವಹಿಸುತ್ತಿರುವುದು ಕಂಡು ಬಂದಿರುವುದಿಲ್ಲ ಹಾಗೂ ಯಾವುದೇ ಅನೈರ್ಮಲ್ಯ ಶೌಚಾಲಯ ಇರುವುದಿಲ್ಲ. ಆದುದರಿಂದ ಚಾಮರಾಜನಗರ ನಗರಸಭಾ ವ್ಯಾಪ್ತಿಯಲ್ಲಿ ಯಾವುದೇ ವ್ಯಕ್ತಿಯೂ ಪ್ರಸ್ತುತ ಮ್ಯಾನ್ಯುವಲ್ ಸ್ಕ್ಯಾವೆಂಜರ್ ವೃತ್ತಿಯಲ್ಲಿ ತೊಡಗಿಲ್ಲ ಎಂಬುದು ಸಮೀಕ್ಷೆ ವೇಳೆಯಲ್ಲಿ ಕಂಡು ಬಂದಿದೆ. ಆಕ್ಷೇಪಣೆಗಳು ಇದ್ದಲ್ಲಿ ಡಿಸೆಂಬರ್ 30ರ ಸಂಜೆ 5 ಗಂಟೆಯೊಳಗಾಗಿ ನಗರಸಭಾ ಕಚೇರಿಗೆ ಲಿಖಿತವಾಗಿ ಸಲ್ಲಿಸಬಹುದು.

# ಡಿ.28 ರಿಂದ 4 ನೇ ವೈಜ್ಞಾನಿಕ ಸಮ್ಮೇಳನ





**ಹುಳಿಯಾರು:** ಡಿಸಂಬರ್ 28 ಮತ್ತು 29 ರಂದು ಬೆಂಗಳೂರಿನ ಬಾಗಲೂರಿನ ವಿ.ಜೆ.ಇಂಟರ್ ನ್ಯಾಷನಲ್ ಶಾಲಾ ಮೈದಾನದಲ್ಲಿ ರಾಜ್ಯ ಮಟ್ಟದ 4 ನೇ ವೈಜ್ಞಾನಿಕ ಸಮ್ಮೇಳನ ನಡೆಯಲಿದೆ ಎಂದು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ತುಮಕೂರು ಜಿಲ್ಲಾಧ್ಯಕ್ಷೆ ಹುಳಿಯಾರು ಸಮೀಪದ ದೊಡ್ಡಎಣ್ಣೇಗೆರೆಯ ಅನಿತಾ ಪ್ರಶಾಂತ್ ತಿಳಿಸಿದರು.

ಈ ಸಂಬಂಧ ಮಂಗಳವಾರ ಪತ್ರಿಕಾ ಹೇಳಿಕೆ ನೀಡಿರುವ ಅವರು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನ ಪರಿಷತ್ತು ದೊಡ್ಡಬಳ್ಳಾಪುರ-ಬೆಂಗಳೂರು ಉತ್ತರ ಶೈಕ್ಷಣಿಕ ಜಿಲ್ಲೆ. ಕರ್ನಾಟಕ ರಾಜ್ಯ ಖಾಸಗಿ ಶಾಲಾ ಕಾಲೇಜುಗಳ ಒಕ್ಕೂಟ ಕರ್ನಾಟಕ ರಾಜ್ಯ ಮಾನವ ಬಂಧುತ್ವ ವೇದಿಕೆ ಹಾಗೂ ಕರ್ನಾಟಕ ಸರ್ಕಾರದ ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆ ಇವುಗಳ ಸಹಯೋಗದಿಂದಿಗೆ ಈ ಕಾರ್ಯಕ್ರಮ ನಡೆಯಲಿದೆ. ಸಮ್ಮೇಳನದ ಸರ್ವಾಧ್ಯಕ್ಷರಾಗಿ ರಂಗಭೂಮಿ ಕಲಾವಿದೆ ಚಲನಚಿತ್ರ ನಟಿ ಉಮಾಶ್ರೀ ಆಯ್ಕೆಯಾಗಿದ್ದಾರೆ ಎಂದು ತಿಳಿಸಿದ್ದಾರೆ.

ಸಮ್ಮೇಳನವನ್ನು ಉದ್ಘಾಟಿಸಲು ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಆಹ್ವಾನಿಸಲಾಗಿದೆ. ಸಮ್ಮೇಳನದಲ್ಲಿ ವಿಜ್ಞಾನ ವಸ್ತು ಪ್ರದರ್ಶನ, ವೈವಿದ್ಯಮಯವಾದ ಆಹಾರ, ಕರಕುಶಲ ಮೇಳ, ಆಕರ್ಷಕ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಅಲ್ಲದೆ ಈ ಸಂದರ್ಭದಲ್ಲಿ ವಿಜ್ಞಾನ ಅಕಾಡೆಮಿಗೆ ಡಾ.ಹುಲಿಕಲ್ ನಟರಾಜ್ ರನ್ನು ನೇಮಕ ಮಾಡುವಂತೆ ಸರ್ಕಾರಕ್ಕೆ ಒತ್ತಾಯಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಪ್ರಸ್ತುತ ನಾಲ್ಕನೇ ವೈಜ್ಞಾನಿಕ ಸಮ್ಮೇಳನದಲ್ಲಿ ತುಮಕೂರು ಜಿಲ್ಲೆಯಿಂದ ತುರುವೇಕೆರೆಯ ಡಾ.ನಂಜಪ್ಪ ಬಿ ಅವರಿಗೆ ರಾಜ್ಯ ಮಟ್ಟದ ಹೆಚ್.ಎನ್.ಪ್ರಶಸ್ತಿ ನೀಡಲಾಗುವುದು. ವಿಶೇಷವಾಗಿ ರಾಜ್ಯ ಮಟ್ಟದಲ್ಲಿ ಮಹಿಳೆಯರಿಗಾಗಿ ನೀಡುತ್ತಿರುವ ಚೈತನ್ಯ ಶ್ರೀ ಪ್ರಶಸ್ತಿಗೆ ಹುಳಿಯಾರಿನ ವಿದ್ಯಾ ವಾರಧಿ ಇಂಟರ್ ನ್ಯಾಷನಲ್ ಸಂಸ್ಥೆಯ ಕಾರ್ಯದರ್ಶಿಗಳಾದ ಕವಿತಾಕಿರಣ್ ಮತ್ತು ಚಿಕ್ಕನಾಯಕನಹಳ್ಳಿ ಕುರುಬರಹಳ್ಳಿ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕರಾದ ರೂಪ ಆಯ್ಕೆಯಾಗಿದ್ದಾರೆ ಎಂದು ವಿವರಿಸಿದ್ದಾರೆ. ಸಮ್ಮೇಳನದಲ್ಲಿ ಭಾಗವಹಿಸುವವರಿಗೆ ಊಟ, ಉಪಹಾರ ವ್ಯವಸ್ಥೆಯನ್ನು ಮಾಡಲಾಗಿದೆ. ಹಾಗೂ ಹೊರಗಿನಿಂದ ಬರುವವರಿಗೆ ವಸತಿ ವ್ಯವಸ್ಥೆಯನ್ನು ಕಲ್ಪಿಸಲಾಗುವುದು. ಈ ಸಮ್ಮೇಳನಕ್ಕೆ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮ್ಮೇಳನದಲ್ಲಿ ಯಶಸ್ಸಿಗೆ ಸಹಹಕರಿಸುವಂತೆ ಅನಿತಾಪ್ರಶಾಂತ್ ಮನವಿ ಮಾಡಿದ್ದಾರೆ.

# ಮ.ಬೆಟ್ಟ ಕಲುಷಿತಗೊಂಡ ಕಲ್ಯಾಣಿ ಕೊಳ



**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಹನೂರು ಮಲೆ ಮಹದೇಶ್ವರ ಬೆಟ್ಟ ಅಭಿವೃದ್ಧಿ ಪ್ರಾಧಿಕಾರದ ದುರಾಡಳಿತದಿಂದ ಕೋಟಿ ಕೋಟಿ ಆದಾಯ ತರುವ ಭಕ್ತರಿಗೆ ಕನಿಷ್ಠ ಮೂಲಸೌಕರ್ಯ ಕಾಣದೆ ಕಂಗಾಲಾಗಿದ್ದಾರೆ.

ಮಲೆ ಮಹದೇಶ್ವರ ಬೆಟ್ಟದ ಕಲ್ಯಾಣಿ ಕೊಳ ಕಲುಷಿತಗೊಂಡಿದ್ದರೆ ಅಂತರಗಂಗೆ ಅಲಕ್ಷ್ಯಕ್ಕೊಳಗಾಗಿ ಗಬ್ಬೆದ್ದು ನಾರಿ ಕಲ್ಯಾಣಿ ಕೊಳದಲ್ಲಿ ಪಾಚಿ ಕಟ್ಟಿರುವ ಪರಿಣಾಮ ಮಲೆ ಮಾದಪ್ಪನ ದರ್ಶನವನ್ನು ಪಡೆಯಲು ಬಂದಿದ್ದ ಹಲವಾರು ಭಕ್ತರು ಸೋಮವಾರ ಕೊಳದಲ್ಲಿ ಸ್ನಾನಕ್ಕಿಳಿದಾಗ ಜಾರಿ ಬಿದ್ದು ಪೆಟ್ಟಾಗಿ ಆಸ್ಪತ್ರೆಗೆ ದಾಖಲಾಗಿರುವ ಘಟನೆ ನಡೆದಿದೆ.

ಪ್ರಸಿದ್ಧ ಧಾರ್ಮಿಕ ಯಾತ್ರಾ ಸ್ಥಳಗಳಲ್ಲಿ ಒಂದಾದ ಮಲೆ ಮಹದೇಶ್ವರ ಸ್ವಾಮಿ ದೇವಾಲಯವು ಇತ್ತೀಚಿನ ದಿನಗಳಲ್ಲಿ ಅತೀ ಹೆಚ್ಚು ಪ್ರಚಲಿತವನ್ನು ಹೊಂದುತಿದ್ದು, ಈ ಪವಾಡ ಪುರುಷನ ಪುಣ್ಯಸ್ಥಳಕ್ಕೆ ಪಾಪ ಕಳೆಯಲೆಂದು ಬರುವವರೆಷ್ಟೋ? ಅಲ್ಲದೆ ಪ್ರತಿ ನಿತ್ಯಾ ಸಹಸ್ರಾರು ಸಂಖ್ಯೆಯಲ್ಲಿ ತಮ್ಮ ಜೀವನ ಪಾವನವಾಗಲಿ ಎಂದು ಅಂತರಗಂಗೆ ಕಲ್ಯಾಣಿ ಕೊಳದಲ್ಲಿ ಮುಳುಗಿ ಸ್ನಾನ ಮಾಡುವವರೆಷ್ಟೋ..?

ಭಕ್ತರು ದೇವರಲ್ಲಿ ಪ್ರಾರ್ಥಿಸುತ್ತಾ ಯಾವುದೇ ರೀತಿಯಾದ ಸಂಕಷ್ಟಗಳು ಬಾರದೆ ಆರೋಗ್ಯದ ಜೀವನವನ್ನು ಕರುಣಿಸು ಎಂದು ಬಂದವರು ಸೋಮವಾರ ಅಂತರಗಂಗೆಯಲ್ಲಿರುವ ಕಲ್ಯಾಣಿ ಕೊಳದಲ್ಲಿ ಸ್ನಾನಕ್ಕೆ ತೆರುಳುವ ಸಂದರ್ಭದಲ್ಲಿ ಕಾಲುಜಾರಿ ಬಿದ್ದು ಪೆಟ್ಟು ತಿಂದು ಆಸ್ಪತ್ರೆಗೆ ತೆರಳಿ ಚಿಕಿತ್ಸೆಯನ್ನು ಪಡೆದು ಸ್ವಗ್ರಾಮಕ್ಕೆ ತೆರಳಿದ್ದಾರೆ. ಮೈಸೂರಿನಿಂದ ಮಲೆ ಮಹದೇಶ್ವರ ಸ್ವಾಮಿ ದೇವಾಲಯಕ್ಕೆ ಬಂದಿದ್ದ ಭಕ್ತರು ಹಾಗೂ ತಮಿಳುನಾಡಿನಿಂದ ಬಂದಿದ್ದ ಭಕ್ತರು ಸೋಮವಾರ ಬೆಳಿಗ್ಗೆ 10 ಗಂಟೆಯ ಸಂದರ್ಭದಲ್ಲಿ ಅಂತರ ಗಂಗೆಯ ಬಳಿ ಇರುವ ಕಲ್ಯಾಣಿಕೊಳದಲ್ಲಿ ಸ್ನಾನಕ್ಕೆಂದು ತೆರಳುವಾಗ ಕಲ್ಯಾಣಿ ಕೊಳದ ಸುತ್ತಲೂ ಇರುವ ಮೆಟ್ಟಿಲಿನಲ್ಲಿ ಪಾಚಿ ಕಟ್ಟಿದ್ದು ಇದರ ಮೇಲೆ ಕಾಲಿಟ್ಟ ಸಂದರ್ಭದಲ್ಲಿ ಕಾಲು ಜಾರಿ ಬಿದ್ದಿದ್ದಾರೆ. ಇವರಲ್ಲಿ ಒಬ್ಬರಿಗೆ ತಲೆಗೆ ಪೆಟ್ಟಾದರೆ ಮತ್ತೊಬ್ಬರಿಗೆ ಕಾಲಿಗೆ ಪೆಟ್ಟಾಗಿ ಸ್ಥಳೀಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆಯನ್ನು ಪಡೆದಿದ್ದಾರೆ. ಅಲ್ಲದೆ ಹುಣಸೂರು ತಾಲೂಕಿನ ಹೆಮ್ಮಿಗೆಯಿಂದ ಶಬರಿಮಲೆಗೆ ತೆರಳಿದ್ದ ತಂಡ ಮಾಲೆ ಬಿಚ್ಚಲು ಮಹದೇಶ್ವರ ಬೆಟ್ಟಕ್ಕೆ ಬಂದು ಸ್ನಾನಕ್ಕೆಂದು ಇಳಿಯುವಾಗ ಕುಮಾರ್ ಎಂಬುವವರು ಕಾಲು ಜಾರಿ ಬಿದ್ದು ತಲೆಗೆ ತೀವ್ರಪೆಟ್ಟು ಬಿದ್ದು ಪ್ರಥಮ ಚಿಕಿತ್ಸೆಯನ್ನು ಪಡೆದು ಸ್ವಗ್ರಾಮಕ್ಕೆ ತೆರಳಿರುವ ಘಟನೆ ಜರುಗಿದೆ. ಇದರಿಂದ ನಮ್ಮ ಮನಸ್ಸಿಗೆ ಅಶಾಂತಿ ಉಂಟಾಗುವುದರ ಜತೆಗೆ ದೈಹಿಕವಾಗಿಯೂ ಪೆಟ್ಟು ಬಿದ್ದಿದ್ದು ಆಘಾತವಾಗಿದೆ. ಅಲ್ಲದೆ ಕಲ್ಯಾಣಿ ಕೊಳದಲ್ಲಿ ಇರುವ ನೀರು ಅಶುಚಿತ್ವದಿಂದ ಕೂಡಿದ್ದು, ಸ್ನಾನ ಮಾಡಲು ಕೂಡ ಯೋಗ್ಯವಿಲ್ಲ ಈ ನೀರಿನಲ್ಲಿ ಸ್ನಾನ ಮಾಡಿದರೆ ಸಾಂಕ್ರಾಮಿಕ ರೋಗಗಳು ಬರುವುದು ಶತಸಿದ್ಧ ಸ್ವ ಗ್ರಾಮದಿಂದ ಮಹದೇಶ್ವರ ಬೆಟ್ಟದವರೆಗೆ ಶಬರಿ ಮಲೆ ಯಾತ್ರೆಯಲ್ಲಿ ಕೊನೆಯದಿನ ಈ ರೀತಿ ಪೆಟ್ಟಾಗಿದೆ. ಸದ್ಯ ಪ್ರಾಣಾಪಾಯದಿಂದ ಪಾರಾಗಿದ್ದು, ಪ್ರಾಣಹಾನಿ ಏನಾದರು ಸಂಭವಿಸಿದ್ದರೆ ಯಾರು ಹೊಣೆಗಾರರಾಗುತ್ತಾರೆ. ಮಹದೇಶ್ವರ ಬೆಟ್ಟದ ಪ್ರಾಧಿಕಾರದ ಅಧಿಕಾರಿಗಳು ಇತ್ತಕಡೆ ಗಮನವನ್ನರಿಸಿ ದೇವಾಲಯಕ್ಕೆ ಬರುವ ಭಕ್ತರ ಹಿತದೃಷ್ಟಿಯಿಂದ ಸ್ನಾನ ಘಟ್ಟ ಹಾಗೂ ಇನ್ನಿತರ ಮೂಲಬೂತ ಸೌಲಭ್ಯವನ್ನು ಕಲ್ಪಿಸುವುದರ ಜೊತೆಗೆ ಅವರ ಹಿತ ದೃಷ್ಟಿಗೆ ಧಕ್ಕೆಯಾಗದಂತೆ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದು ಹರಿಹಾಯ್ದಿದ್ದಾರೆ.

### ಕರ್ನಾಟಕ ರಾಜ್ಯ ಆಹಾರ ಆಯೋಗ ಅಧ್ಯಕ್ಷ ಡಾ.ಎಚ್.ಕೃಷ್ಣ ಅನಿಸಿಕೆ

# ಗ್ರಾಹಕನಿಗೆ ಹಕ್ಕಿನ ಜೊತೆಗೆ ಜವಾಬ್ದಾರಿಯೂ ಇದೆ

**ಬೆಂಗಳೂರು:** ಗ್ರಾಹಕನಿಗೆ ಹಕ್ಕಿನ ಜೊತೆಗೆ ಜವಾಬ್ದಾರಿಯೂ ಇದೆ. ಗ್ರಾಹಕನ ಹಕ್ಕು ಮತ್ತು ಜವಾಬ್ದಾರಿ ಒಂದೇ ನಾಣ್ಯದ ಎರಡು ಮುಖಗಳು ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗ ಅಧ್ಯಕ್ಷರಾದ ಡಾ.ಎಚ್.ಕೃಷ್ಣ ಅವರು ತಿಳಿಸಿದರು.

ಇಂದು ಕರ್ನಾಟಕ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆ ವತಿಯಿಂದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ-2024 ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಹಕರಿಗೆ ಸುರಕ್ಷತೆಯ ಹಕ್ಕು, ಮಾಹಿತಿ ಪಡೆಯುವ ಹಕ್ಕು, ಆಯ್ಕೆಯ ಹಕ್ಕು, ಆಲಿಸುವ ಹಕ್ಕು, ಕುಂದುಕೊರತೆಗಳನ್ನು ನಿವಾರಿಸಿಕೊಳ್ಳುವ ಹಕ್ಕು, ಗ್ರಾಹಕರ ಶಿಕ್ಷಣದ ಹಕ್ಕಿನ ಜೊತೆಗೆ ಮೂಲಭೂತ ಅಶ್ಯಕತೆಗಳನ್ನು ಪಡೆಯುವ ಹಕ್ಕು, ಮಾಲಿನ್ಯ ಮುಕ್ತ ಪರಿಸರವನ್ನು ಪಡೆಯುವ ಹಕ್ಕುಗಳನ್ನು ಗ್ರಾಹಕರು ಪಡೆದಿರುತ್ತಾರೆ ಎಂದು ಗ್ರಾಹಕರ ಹಕ್ಕುಗಳ ಕುರಿತು ವಿವರಿಸಿದರು.

ಜಿಲ್ಲಾ ಗ್ರಾಹಕರ ದೂರುಗಳ ಪರಿಹಾರ ಸಂಸ್ಥೆ, ರಾಜ್ಯ ಗ್ರಾಹಕರ ದೂರುಗಳ ಪರಿಹಾರ ಸಂಸ್ಥೆ, ರಾಷ್ಟ್ರೀಯ ಗ್ರಾಹಕರ ವಿವಾದಗಳ ಪರಿಹಾರ ಸಂಸ್ಥೆಗಳಿವೆ. ಗ್ರಾಹಕರ ದೂರನ್ನು ದಾಖಲಿಸಬಹುದು. ದೂರುದಾರರ ಹೆಸರು, ವಿಳಾಸ ಮತ್ತು ದೂರಿನ ವಿವರ, ಕಕ್ಷಿದಾರನ ಹೆಸರು, ವಿಳಾಸ ಮತ್ತು ವಿವರ, ನ್ಯೂನತೆಯ ಕುರಿತ ಮಾಹಿತಿ, ದಾಖಲೆಗಳನ್ನು ನೀಡಬೇಕು ಎಂದರು.

ಹಣವನ್ನು ಕೊಟ್ಟು ಸರಕು ಅಥವಾ ಸೇವೆಗಳನ್ನು ಸ್ವಂತ ಅಥವಾ ಅನ್ಯರ ಉಪಯೋಗಕ್ಕಾಗಿ ಖರೀದಿಸುವವರನ್ನು ಗ್ರಾಹಕ ಎಂದು ಕರೆಯುತ್ತಾರೆ. ಆಧುನಿಕ ಮಾರುಕಟ್ಟೆ ಸಿದ್ಧಾಂತವು ಗ್ರಾಹಕರನ್ನು ಮಾರುಕಟ್ಟೆಯ ರಾಜನೆಂದು ಪರಿಗಣಿಸಿದೆ. ಮಾರುಕಟ್ಟೆಯ ಎಲ್ಲಾ ಕಾರ್ಯ ಚಟುವಟಿಕೆಗಳು ಗ್ರಾಹಕನ ಅವಶ್ಯಕತೆಗಳು ಮತ್ತು ಅಭಿಲಾಷೆಗಳನ್ನು ತೃಪ್ತಿಪಡಿಸುವ ಉದ್ದೇಶವನ್ನು ಹೊಂದಿದೆ. ಆದರೆ, ವ್ಯವಹಾರ ಸಂಘಟನೆಗಳು ಹೆಚ್ಚುತ್ತಿರುವ ಪೈಪೋಟಿ, ಮಾರಾಟದ ಪ್ರಮಾಣವನ್ನು ಹೆಚ್ಚಿಸಿಕೊಳ್ಳುವ ಹಾಗೂ ಮಾರುಕಟ್ಟೆಯಲ್ಲಿ ತಮ್ಮ ಪಾಲನ್ನು ವೃದ್ಧಿಸಿಕೊಳ್ಳುವ ಉದ್ದೇಶದಿಂದ ಅನುಚಿತ ವ್ಯಾಪಾರ ಪದ್ಧತಿಗಳಾದ ಕಲಬೆರಕೆ, ಕಾಳಸಂತೆ ವ್ಯಾಪಾರ, ತಪ್ಪು ಮಾಹಿತಿ ನೀಡುವ ಜಾಹೀರಾತು, ಮುಂತಾದವುಗಳಿಂದ ಗ್ರಾಹಕರನ್ನು ವಂಚಿಸುತ್ತಿದ್ದು, ಅವನ ರಕ್ಷಣೆ ಅತ್ಯಗತ್ಯವಾಗಿದೆ. ಗ್ರಾಹಕನೇ ಎಚ್ಚರ ಎಂಬ ಸಿದ್ಧಾಂತಕ್ಕೆ ಬದಲಾಗಿ ಮಾರಾಟಗಾರನೇ ಎಚ್ಚರ ಎಂಬ ಸಿದ್ಧಾಂತವನ್ನು ಅಳವಡಿಸಿಕೊಳ್ಳಲಾಗಿದೆ. ಈ ಸಿದ್ಧಾಂತವು ಗ್ರಾಹಕನನ್ನು ವ್ಯವಹಾರ ಸಂಸ್ಥೆಗಳ ಅನುಚಿತ ವ್ಯಾಪಾರೀ ಪದ್ಧತಿಗಳಿಂದ ಹೇಗೆ ರಕ್ಷಿಸುತ್ತದೆ ಎಂಬುದರ ಬಗ್ಗೆ ಬೆಳಕನ್ನು ಚೆಲ್ಲುತ್ತದೆ ಎಂದರು.

ಗ್ರಾಹಕ ಸಂರಕ್ಷಣಾ ಕಾಯ್ದೆ 2019 ಗ್ರಾಹಕರ ಹಿತಾಸಕ್ತಿಗಳನ್ನು ರಕ್ಷಿಸುವ ಕಾನೂನಾಗಿದೆ. ದೋಷಪೂರಿತ ಉತ್ಪನ್ನಗಳು, ಅತೃಪ್ತಿಕರ ಸೇವೆಗಳ ಕುರಿತು ಗ್ರಾಹಕರಿಗೆ ಈ ಕಾಯಿದೆ ಸುರಕ್ಷತೆಯನ್ನು ಒದಗಿಸುತ್ತದೆ. ಗುಣಮಟ್ಟದ ಆಹಾರ, ಔಷಧಗಳು ಗ್ರಾಹಕರಿಗೆ ಒದಗಿಸುವುದು ರಾಜ್ಯ ಹಾಗೂ ಕೇಂದ್ರ ಸರ್ಕಾರದ ಜವಾಬ್ದಾರಿಯಾಗಿದೆ. ಸರ್ಕಾರವು ಕಾಲಕಾಲಕ್ಕೆ ಶಾಸನಗಳನ್ನು ರಚಿಸುವುದರ ಮೂಲಕ ಗ್ರಾಹಕರ ಹಿತಾಸಕ್ತಿ ಕಾಪಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಬಸವಭವನದ ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ನ್ಯಾಯಾಂಗ ಸದಸ್ಯರಾದ ರವಿ ಶಂಕರ್ ಅವರು ಮಾತನಾಡಿ, ತೂಕದಲ್ಲಿ ಮೋಸ, ನಿಗಧಿತ ದರಕ್ಕಿಂತ ಹೆಚ್ಚಿನ ಬೆಲೆ ವಸೂಲಿ, ಕಳಪೆ ಗುಣಮಟ್ಟದ ವಸ್ತುವಿಗೆ ಹೆಚ್ಚಿನ ಬೆಲೆ ವಸೂಲಿ ಹೀಗೆ ಗ್ರಾಹಕರಿಗೆ ಸಂಬಂಧಿಸಿದಂತೆ ನಾನಾ ದೂರುಗಳು ಇರುತ್ತವೆ. ಗ್ರಾಹಕರು ಉತ್ಪನ್ನಗಳು ಅಥವಾ ಸೇವೆಗಳು ಅಥವಾ ಬ್ರ್ಯಾಂಡ್ ಗುಣಮಟ್ಟದ ಬಗ್ಗೆ ಅಹವಾಲುಗಳಿದ್ದಲ್ಲಿ ದೂರು ಸಲ್ಲಿಸಬಹುದು ಮತ್ತು ಅದಕ್ಕೆ ಪರಿಹಾರವನ್ನು ಪಡೆಯಹುದು. ಗ್ರಾಹಕ ನ್ಯಾಯಾಲಯಗಳಿಗೆ ಭೇಟಿ ನೀಡಿ, ದೂರು ಸಲ್ಲಿಸಬಹುದು. ಅದಕ್ಕೆ ಅಗತ್ಯ ದಾಖಲೆಗಳನ್ನು ಒದಗಿಸಬೇಕಾಗುತ್ತದೆ. ಆನ್‌ಲೈನ್ ಮೂಲಕವೂ ದೂರುಗಳನ್ನು ಸಲ್ಲಿಸಬಹುದು ಎಂದರು.

ಸಕ್ಷಮ ದಳ ಮತ್ತು ಐ.ಟಿ. ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಅಪರ ನಿರ್ದೇಶಕರು ಹಾಗೂ ಕರ್ನಾಟಕ ಆಹಾರ ಮತ್ತು ನಾಗಾರಿಕ ಸರಬರಾಜು ನಿಗಮ ನಿಯಮಿತ ವ್ಯವಸ್ಥಾಪಕ ನಿರ್ದೇಶಕರು ಚಂದ್ರಕಾಂತ ಎಂ.ವಿ. ಅವರು ಮಾತನಾಡಿ, ಗ್ರಾಹಕ ಸಹಾಯವಾಣಿಯಲ್ಲಿ ಗ್ರಾಹಕರು ಯಾವುದೇ ಉತ್ಪನ್ನ ಅಥವಾ ಸೇವೆಯು ವಿರುದ್ಧ ತಮ್ಮ ದೂರುಗಳನ್ನು ಸುಲಭವಾಗಿ ಸಲ್ಲಿಸಲು ಅವಕಾಶ ಮಾಡಿಕೊಡುತ್ತದೆ. ಇಲಾಖೆಯು ಶಾಲಾ ಮಕ್ಕಳಿಗೆ ಗ್ರಾಹಕ ಹಕ್ಕುಗಳ ಕುರಿತ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಕುಟುಂಬದ ಹಿರಿಯರು ಗ್ರಾಹಕರ ಹಕ್ಕುಗಳ ಕುರಿತು ಮಕ್ಕಳಿಗೆ ತಿಳಿಸಿಕೊಡಬೇಕು. ಗ್ರಾಹಕರು ಸರಕುಗಳನ್ನು ಖರೀದಿಸುವಾಗ ಸೀಮಿತ ಜ್ಞಾನದಲ್ಲಿ ನಕಲಿ, ಅಸಲಿಯ ಕುರಿತ ಜ್ಞಾನ, ಸಹನೆ ತಾಳ್ಮೆಯಿಂದ ಪರಿಶೀಲಿಸಿ ಖರೀದಿಸಬೇಕು ಎಂದರು.

## 2025ರಲ್ಲಿ ಜರುಗಲಿರುವ ನೀರಾವರಿ ಗಣತಿಗಳಿಗಾಗಿ ಪ್ರಾದೇಶಿಕ ತರಬೇತಿ

**ಬೆಂಗಳೂರು:** ನೀರು ನೈಸರ್ಗಿಕ ಸಂಪನ್ಮೂಲವಾಗಿದೆ. ಆದ್ದರಿಂದ ಅದರ ಪರಿಣಾಮಕಾರಿ ಬಳಕೆ ಮತ್ತು ನೀರಿನ ಸಂಪನ್ಮೂಲಗಳ ನಿರ್ವಹಣೆ ಅತ್ಯಗತ್ಯ, ಭಾರತದ ನೈಋತ್ಯ ಭಾಗದಲ್ಲಿರುವ ಕರ್ನಾಟಕವು ಹೇರಳವಾದ ಮತ್ತು ವಿರಳವಾದ ನೀರಿನ ಸಂಪನ್ಮೂಲಗಳನ್ನು ಹೊಂದಿವೆ. ರಾಜ್ಯದ ಸಂಕೀರ್ಣ ಸ್ಥಳಾಕೃತಿ, ಋತುವಾರು ವ್ಯತ್ಯಾಸ ಮತ್ತು ತ್ತು ಬೆಳೆಯುತ್ತಿರುವ ಜನಸಂಖ್ಯೆಯು ಅದರ ನೀರಿನ ಸಂಪನ್ಮೂಲಗಳನ್ನು ನಿರ್ವಹಿಸುವಲ್ಲಿ ವಿಶಿಷ್ಟ ಸವಾಲುಗಳನ್ನು ಪ್ರಸ್ತುತಪಡಿಸುತ್ತದೆ.

ನೀರಿನಾಸರೆಗಳ ಮತ್ತು ನೀರಾವರಿ ಯೋಜನೆಗಳ ಸಮಗ್ರ ದತ್ತಾಂಶಗಳನ್ನು ಸಂಗ್ರಹಿಸಬೇಕಾದುದು ಈಗಿನ ಅಗತ್ಯತೆಯಾಗಿದೆ. ಈ ಹಿನ್ನಲೆಯಲ್ಲಿ ಜಲ ಶಕ್ತಿ ಮಂತ್ರಾಲಯದ ಜಲಸಂಪನ್ಮೂಲ, ನದಿ ವಿಕಾಸ ಮತ್ತು ಗಂಗಾ ಸಂಸ್ಕರಣ ಇಲಾಖೆಯ, ಸಣ್ಣ ನೀರಾವರಿ ಅಂಕಿ-ಅಂಶಗಳ ವಿಭಾಗವು ಪ್ರತಿ 5 ವರ್ಷಗಳಿಗೊಮ್ಮೆ ಕರ್ನಾಟಕವೂ ಸೇರಿ ರಾಷ್ಟ್ರಾದ್ಯಂತ ವಿವಿಧ ನೀರಾವರಿ ಮತ್ತು ನೀರಿನಾಸರೆಗಳ ಗಣತಿಗಳನ್ನು ಹಮ್ಮಿಕೊಳ್ಳಲಾಯಿತು. ಸದರಿ ಗಣತಿಗಳ ದತ್ತಾಂಶಗಳು ನೀರಾವರಿ ಇಲಾಖೆಯ ವಿವಿಧ ಯೋಜನೆಗಳ ಮೇಲ್ವಿಚಾರಣೆ ಮತ್ತು ಮೌಲ್ಯ ಮಾಪನಕ್ಕೆ ಸಾಧನಗಳಾಗಿ ಕಾರ್ಯನಿರ್ವಹಿಸುತ್ತವೆ.

ನೀರಾವರಿ ಗಣತಿಗಳಿಗಾಗಿ ಜರುಗಲಿರುವ ಪ್ರಾದೇಶಿಕ ತರಬೇತಿ ಕಾರ್ಯಾಗಾರದಲ್ಲಿ ದಕ್ಷಿಣ ಭಾಗವಹಿಸಿದ್ದು, ಇದನ್ನು ಭಾರತದ ಎಲ್ಲಾ ರಾಜ್ಯಗಳು ಶಕ್ತಿ ಮಂತ್ರಾಲಯದ ಜಲಸಂಪನ್ಮೂಲ, ನದಿ ವಿಕಾಸ ಮತ್ತು ಗಂಗಾ ಸಂಸ್ಕರಣ ಇಲಾಖೆಯ, ಸಣ್ಣ ನೀರಾವರಿ ಅಂಕಿ-ಅಂಶಗಳ ವಿಭಾಗವು ನಡೆಸಿಕೊಟ್ಟಿತು.

ಪ್ರಾದೇಶಿಕ ತರಬೇತಿ ಕಾರ್ಯಾಗಾರವು ಬೆಂಗಳೂರಿನಲ್ಲಿ ಡಿಸೆಂಬರ್ 11 ರಿಂದ 13 ರ ವರೆಗೆ 3 ದಿನಗಳ ಕಾಲ ಜರುಗಿ, ಇದರಲ್ಲಿ ಮೊಬೈಲ್ ಅಪ್ಲಿಕೇಶನ್ ಮೂಲಕ ಗಣತಿ ಪ್ರಪತ್ರಗಳನ್ನು ತುಂಬುವ ಕುರಿತು ವಿಸ್ತತವಾದ ತರಬೇತಿಯನ್ನು ನೀಡಲಾಯಿತು.

ಕರ್ನಾಟಕವೂ ಸೇರಿ ರಾಷ್ಟ್ರಾದ್ಯಂತ ನಾಲ್ಕು ರೀತಿಯ ಗಣತಿಗಳನ್ನು ನಡೆಸಲಾಗುತ್ತದೆ. ಅವುಗಳೆಂದರೆ 7ನೇ ಸಣ್ಣ ನೀರಾವರಿ ಗಣತಿ, 2ನೇ ನೀರಿನಾಸರೆಗಳ ಗಣತಿ, 1ನೇ ಮಧ್ಯಮ ಮತ್ತು ಬೃಹತ್ ನೀರಾವರಿ ಗಣತಿ ಮತ್ತು 1ನೇ ಚಿಲುಮೆಗಳ ಗಣತಿಗಳಾಗಿವೆ.

ಪ್ರಾದೇಶಿಕ ತರಬೇತಿ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಗಳಾಗಿ ಭಾರತ ಸರ್ಕಾರದ ಅಜಯ್ ಬಕ್ಸಿ, ಹೆಚ್ಚುವರಿ ಮಹಾನಿರ್ದೇಶಕರು, ಸಣ್ಣ ನೀರಾವರಿ ಅಂಕಿ-ಅಂಶಗಳ ವಿಭಾಗ, ಜಲ ಶಕ್ತಿ ಮಂತ್ರಾಲಯ, ಜಲಸಂಪನ್ಮೂಲ, ನದಿ ವಿಕಾಸ ಮತ್ತು ಗಂಗಾ ಸಂಸ್ಕರಣ ಇಲಾಖೆ, ಇವರು ನವದೆಹಲಿ ಅವರು ಭಾಗವಹಿಸಿದ್ದರು.

ಭಾರತ ಸರ್ಕಾರದ ಉನ್ನತ ಅಧಿಕಾರಿಗಳಾದ ಶ್ರೀಮತಿ ಪ್ರಿಯಾಂಕ ಕುಲಕ್ಷೇತ್ರ, ಉಪ ಮಹಾನಿರ್ದೇಶಕರು, ಸಣ್ಣ ನೀರಾವರಿ ಅಂಕಿ-ಅಂಶಗಳ ವಿಭಾಗ, ಜಲ ಶಕ್ತಿ ಮಂತ್ರಾಲಯ, ಜಲಸಂಪನ್ಮೂಲ, ನದಿ ವಿಕಾಸ ಮತ್ತು ಗಂಗಾ ಸಂಸ್ಕರಣ ಇಲಾಖೆ, ಹಾಗೂ ಕರ್ನಾಟಕ ಸರ್ಕಾರದ ಉನ್ನತ ಅಧಿಕಾರಿಗಳಾದ ಶ್ರೀ ಸತೀಶ್ ಎಂ. ಮುಖ್ಯ ಇಂಜಿನಿಯರ್ ಜಲಸಂಪನ್ಮೂಲ ಇಲಾಖೆ, ಬಿ.ಕೆ. ರಾಜೇಂದ್ರ, ಮುಖ್ಯ ಇಂಜಿನಿಯರ್ ಅಂತರ್ಜಲ ಅಭಿವೃದ್ಧಿ ನಿರ್ದೇಶನಾಲಯ, ಪವಿತ್ರ ಬಿ.ಕೆ. ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ, ರಾಜೇಂದ್ರ ಎಸ್. ವಾಲಿಕಾರ್ ಉಪ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ, ಸತೀಶ ರ. ಹುದ್ದಾರ, ಜಂಟಿ ನಿರ್ದೇಶಕರು (ಸಾಂಖ್ಯಿಕ) ಹಾಗೂ ಸಣ್ಣ ನೀರಾವರಿ ಗಣತಿ ನೋಡಲ್ ಅಧಿಕಾರಿಗಳು, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ಇವರುಗಳು ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು.

# ಸಂಪತ್ತಿಗಿಂತ ಆರೋಗ್ಯ ಬಹಳ ಮುಖ್ಯ

**ಚಿಕ್ಕಬಳ್ಳಾಪುರ:** ಪ್ರತಿಯೊಬ್ಬರು ಆಹಾರ ಪದ್ಧತಿಯಲ್ಲಿ ಸಿರಿಧಾನ್ಯಗಳನ್ನು ಬಳಕೆ ಮಾಡುವುದು ಬಹಳ ಮುಖ್ಯವಾಗಿದ್ದು,ಉತ್ತಮ ಆರೋಗ್ಯಕ್ಕಾಗಿ ಸಿರಿಧಾನ್ಯಗಳು ಪೂರಕವಾಗಿವೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ತಿಳಿಸಿದರು.



ಮಂಗಳವಾರ ನಗರದ ಸರ್ ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ,ಜಿಲ್ಲಾಪಂಚಾಯತ್,ಕೃಷಿ ಇಲಾಖೆ ಆಯೋಜಿಸಿದ್ದ ''ಸಿರಿಧಾನ್ಯಗಳ ನಡಿಗೆ ಆರೋಗ್ಯದ ಕಡೆಗೆ ಕಾರ್ಯಕ್ರಮದ ಪ್ರಯುಕ್ತ ಸಿರಿಧಾನ್ಯಗಳ ಮಹತ್ವ ಸಾರುವ ಜಾಗೃತಿ ಕರಪತ್ರಗಳು ಮತ್ತು ಭಿತ್ತಿ ಪತ್ರಗಳನ್ನು ಬಿಡುಗಡೆಗೊಳಿಸಿ ನಂತರ ಜಾಗೃತಿ ಜಾಥಾಗೆ ಹಸಿರು ನಿಶಾನೆ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಬೆಂಗಳೂರಿನಲ್ಲಿ ಅಂತರರಾಷ್ಟ್ರೀಯ ಸಮ್ಮೇಳನ ನಡೆಯುತ್ತಿದ್ದು ಅದಕ್ಕೆ ಪೂರ್ವಭಾವಿಯಾಗಿ ನಮ್ಮ ಜಿಲ್ಲೆಯಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ದೃಷ್ಟಿಯಿಂದ ಈ ನಡಿಗೆ ಕಾರ್ಯಕ್ರಮ ಆಯೋಜಿಸಲಾಗಿದೆ

ಈಗಾಗಲೇ ಜಿಲ್ಲೆಯ ಮಹಿಳೆಯರು ಮತ್ತು ಪುರುಷರಿಗೆ ಮಿಲೆಟ್ ಪಾಕ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು ಈ ಪಾಕ ಸ್ಪರ್ಧೆಯಲ್ಲಿ ಸಿರಿಧಾನ್ಯಗಳಿಂದ ತಯಾರಿಸಿದ ಚಕ್ಕಲಿ, ನಿಪ್ಪಟ್ಟು, ಪಾಯಸ ಹಾಗೂ ಇನ್ನಿತರ ವಿವಿಧ ರೀತಿಯ ತಿನಿಸುಗಳನ್ನು ತಯಾರಿಸಿ ಪ್ರದರ್ಶನ ನೀಡುವ ಮೂಲಕ ಹೆಚ್ಚಿನ ಮಟ್ಟದಲ್ಲಿ ಜಾಗೃತಿ ಕಾರಣರಾಗಿದ್ದರು. ಸಿರಿಧಾನ್ಯಗಳ ಬೆಳೆಗಳನ್ನು ಬೆಳೆಯಲು ಹೆಚ್ಚು ಒಲವು ನೀಡಿ ಪ್ರೋತ್ಸಾಹಿಸಬೇಕು. ಸಿರಿಧಾನ್ಯಗಳು ನಮ್ಮ ಪರಿಸರ ಸ್ನೇಹಿಯಾಗಿದ್ದು ಮಳೆ ಆಶ್ರಿತ ಪ್ರದೇಶಗಳಲ್ಲಿ ಕಡಿಮೆ ನೀರಿನ ಉಪಯೋಗದಲ್ಲಿ ಬೆಳೆಯಬಹುದು ಎಂದರು.

ಮನುಷ್ಯನಿಗೆ ಸಂಪತ್ತಿಗಿಂತ ಆರೋಗ್ಯ ಬಹಳ ಮುಖ್ಯ, ಆದರೆ ಆರೋಗ್ಯ ಕಳೆದುಕೊಂಡರೆ ಜೀವನವೇ ವ್ಯರ್ಥವಾಗುತ್ತದೆ. ಮನುಷ್ಯನ ಜೀವನ ಅತ್ಯಮೂಲ್ಯವಾದದ್ದು ಅದನ್ನು ಅರಿತವರೇ ಭಾಗ್ಯವಂತರು. ಪ್ರತಿ ದಿನ ಯಾರು ಸಿರಿಧಾನ್ಯಗಳನ್ನು ಸೇವಿಸುತ್ತಾರೊ ಅವರ ದೇಹ ಮತ್ತು ಮನಸ್ಸು ಸಧೃಡವಾಗಿರಲಿದೆ. ಸಿರಿಧಾನ್ಯಗಳನ್ನು ಸೇವನೆ ಮಾಡುವುದರಿಂದ ನಿಧಾನವಾಗಿ ಜೀರ್ಣಕ್ರಿಯೆ ನಡೆಯುತ್ತದೆ. ಮನುಷ್ಯನ ಸುಸ್ಥಿರ ಆರೋಗ್ಯ ಕಾಪಾಡಲು ರಾಗಿ, ನವಣೆ, ಹಾರಕ, ಸಾಮೆ, ನೆಲ್ಲಕ್ಕಿ, ಬರುಗು, ಕೊರಲೆ, ಊದಲು, ಸಜ್ಜೆ ಮತ್ತು ಜೋಳ ಹೀಗೆ ಹಲವಾರು ಬಗೆಯ ಸಿರಿಧಾನ್ಯಗಳಲ್ಲಿನ ಪೌಷ್ಠಿಕಾಂಶಗಳು ಸಹಕಾರಿಯಾಗಿವೆ.ಫೈಬರ್ ಯುಕ್ತ ಮತ್ತು ಆರೋಗ್ಯಯುಕ್ತ ಇತರ ಖನಿಜಾಂಶಗಳಿರುವಂತಹ ಸಿರಿಧಾನ್ಯಗಳ ಸೇವನೆಯನ್ನು ಶ್ರೀಮಂತ ವರ್ಗದ ಜನರು ಆಹಾರದ ಭಾಗವಾಗಿ ಹೆಚ್ಚಿನದಾಗಿ ಅಳವಡಿಸಿಕೊಳ್ಳುತ್ತಿದ್ದಾರೆ ಎಂದರು.

ನಮ್ಮ ಜಿಲ್ಲೆಯಲ್ಲಿ ಸಿರಿಧಾನ್ಯಗಳಿಗೆ ಹೆಚ್ಚು ಉತ್ತೇಜನ ನೀಡುವ ದೃಷ್ಟಿಯಿಂದ ಸುಮಾರು 400 ಹೇಕ್ಟರ್ ಭೂಮಿಯಲ್ಲಿ ಸಿರಿಧಾನ್ಯಗಳ ಬೆಳೆಗಳನ್ನು ಬೆಳೆಯುವುದಕ್ಕೆ ಕೃಷಿ ಇಲಾಖೆ ಪ್ರೋತ್ಸಾಹವನ್ನು ನೀಡಿದೆ. ರೈತರು ಸಹ ಸಲಹೆಗಳನ್ನು ಕೃಷಿ ಇಲಾಖೆಯಿಂದ ಪಡೆದುಕೊಂಡು ಸಿರಿಧಾನ್ಯಗಳ ಬೆಳೆಯನ್ನು ಬೆಳೆಯುವ ನಿಟ್ಟಿನಲ್ಲಿ ರೈತ ಬಾಂಧವರು ಮುಂದಾಗಿದ್ದಾರೆ ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಜಾವೀದಾ ನಾಸಿಮ್ ಖಾನಂ ಅವರು ಮಾತನಾಡಿ ಪ್ರತಿಯೊಬ್ಬರು ದಿನನಿತ್ಯ ಸಿರಿ ಧಾನ್ಯಗಳನ್ನು ಆಹಾರದಲ್ಲಿ ಸೇವಿಸಿದರೇ ಉತ್ತಮ ಆರೋಗ್ಯವನ್ನು ಹೊಂದಬಹುದು. ಪ್ರತಿ ವರ್ಷದಂತೆ ಈ ಭಾರಿಯು ಸಿರಿಧಾನ್ಯ ನಡಿಗೆ ಆರೋಗ್ಯದ ಕಡೆ ಎಂಬ ಕಾರ್ಯಕ್ರಮವನ್ನು ಅರಿವು ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದಲ್ಲಿ ಹಮ್ಮಿಕೊಳ್ಳಲಾಗಿದೆ. ಕೃಷಿ ಇಲಾಖೆಯಿಂದ ಸಾರ್ವಜನಿಕರಿಗೆ ಹಲವಾರು ಅರಿವು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಮಿಲೆಟ್ ವಾರ ಸ್ಪರ್ಧೆ ನಡೆಸಿ ವಿಜೇತರಾದವರನ್ನು ಅಂತರಾಷ್ಟ್ರೀಯ ಮಿಲೆಟ್ ವಾರ ಸ್ಪರ್ಧೆಗೆ ಆಯ್ಕೆ ಮಾಡಲಾಗುತ್ತದೆ ಮುಂದಿನ ದಿನಗಳಲ್ಲಿ ಜಿಲ್ಲಾಮಟ್ಟದ ಸಿರಿಧಾನ್ಯಗಳ ಮೇಳವನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಸಿರಿಧಾನ್ಯಗಳಿಗೆ ಹಿಂದಿನಿಂದ ನಮ್ಮ ಪೂರ್ವಿಕರು ಹೆಚ್ಚು ಒತ್ತು ನೀಡುತ್ತಿದ್ದರು.. ಈ ಧಾನ್ಯಗಳ ಬಳಕೆಯಿಂದ ಮಧುಮೇಹ, ಹೃದಯರೋಗ, ಕರುಳುಬೇನೆ ಹಾಗೂ ಕ್ಯಾನ್ಸರ್ ನಂತಹ ಇತ್ಯಾದಿ ಕಾಯಿಲೆಗಳನ್ನು ತಡೆಯಬಹುದಾಗಿದೆ ಸಿರಿಧಾನ್ಯಗಳಿಂದ ರೋಗನಿರೋಧಕ ಶಕ್ತಿಯನ್ನು ನೀಡುತ್ತವೆ. ಅಂತರಾಷ್ಟ್ರೀಯ ಸಿರಿಧಾನ್ಯ ಮೇಳ ಮತ್ತು ಜಾಗೃತಿ ಕಾರ್ಯಕ್ರಮವನ್ನು ಜನವರಿ 23 ರಿಂದ 25 ರ ವರಗೆ ಬೆಂಗಳೂರಲ್ಲಿ ಆಯೋಜಿಸಲಾಗುತ್ತದೆ. ಈ ಮೇಳಕ್ಕೆ ಜಿಲ್ಲೆಯ ಸಮಸ್ತ ಜನರು ಆಗಮಿಸಬೇಕು ಎಂದು ಮನವಿ ಮಾಡಿದರು. 2023ನೇ ವರ್ಷವನ್ನು ಅಂತರಾಷ್ಟ್ರೀಯ ಸಿರಿಧಾನ್ಯಗಳ ವರ್ಷವೆಂದು ಘೋಷಣೆ ಮಾಡಿರುವುದರಿಂದ ಆಹಾರ ಮತ್ತು ಪೌಷ್ಟಿಕ ಭದ್ರತಾ ಯೋಜನೆಯಡಿ ಗ್ರಾಹಕರಿಗೆ ಸಿರಿಧಾನ್ಯಗಳ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಜಿಲ್ಲಾ ಮಟ್ಟದ ಸಿರಿಧಾನ್ಯ ವಾಕ್ ಥಾನ್ ಕಾರ್ಯಕ್ರಮ ನಡೆಯಿತು. ಸರ್.ಎಂ.ವಿ ಕ್ರೀಡಾಂಗಣದಿಂದ ಈ ಜಾಗೃತಿ ಜಾಥಾ ಆರಂಭವಾಗಿ ಕೆ.ಎಸ್.ಆರ್.ಟಿ.ಸಿ ಬಸ್ ಸ್ಟಾಂಡ್- ಶಿಡ್ಲಘಟ್ಟ ಸರ್ಕಲ್,ಹಾಗೂ ನಗರದ ಮುಖ್ಯ ರಸ್ತೆಯ ಮೂಲಕ ಬಿ .ಬಿ ರಸ್ತೆ ಮತ್ತೆ ಕೊನೆಯದಾಗಿ ಸರ್ ಎಂ ವಿ ಕ್ರೀಡಾಂಗಣವರೆಗೂ ಸು. 4ಕಿ ಮೀ ವರೆಗೆ ಜಾಥಾ ಜರುಗಿತು.

# ವಿವಿಧೆಡೆ ವಿದ್ಯುತ್ ವ್ಯತ್ಯಯ

**ಮೈಸೂರು:** ಡಿಸೆಂಬರ್ 25 ಹಾಗೂ 26 ರಂದು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಹೆಚ್ .ಡಿ. ಕೋಟೆ ಉಪವಿಭಾಗ ವ್ಯಾಪ್ತಿಯ ಯರಹಳ್ಳಿ- ಹ್ಯಾಂಡ್‌ಪೋಸ್ಟ್‌ನಲ್ಲಿ ತುರ್ತು ವಿದ್ಯುತ್ ಲೈನ್ ನಿರ್ವಹಣೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಹ್ಯಾಂಡ್‌ಪೋಸ್ಟ್, ಹೈರಿಗೆ, ಹೆಬ್ಬಲಗುಪ್ಪೆ ಮತ್ತು ನೂರಲಕುಪ್ಪೆ ಪಂಚಾಯತಿ ವ್ಯಾಪ್ತಿ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕು ಎಂದು ಹೆಚ್. ಡಿ ಕೋಟೆ ಚಾ.ವಿ.ಸ. ನಿ.ನಿ.ಯ ಕಾರ್ಯ ಮತ್ತು ಪಾಲನೆ ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್(ವಿ) ತಿಳಿಸಿದ್ದಾರೆ.



**ವಿದ್ಯುತ್ ವ್ಯತ್ಯಯ:** ಡಿಸೆಂಬರ್ 26 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಹೂಟಗಳ್ಳಿ ಉಪ ವಿಭಾಗದ ಕೆ.ವಿ ದಟ್ಟಗಳ್ಳಿ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ರಾಜರಾಜೇಶ್ವರಿ ಮಾರ್ಗದಲ್ಲಿ ತುರ್ತು ಕೆಲಸದ ನಿರ್ವಹಣೆಯನ್ನು ಹಮ್ಮಿಕೊಂಡಿರುವುದರಿಂದ ರಾಜರಾಜೇಶ್ವರಿನಗರ, ಬಿ.ಇ.ಎಂ.ಎಲ್ ಬಡಾವಣೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗುವುದರಿಂದ ಸಾರ್ವಜನಿಕರು ಸಹಕರಿಸಬೇಕು ಎಂದು ಚಾ.ವಿ.ಸ.ನಿ.ನಿ.ಯ ವಿ.ವಿ.ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಸ(ವಿ) ತಿಳಿಸಿದ್ದಾರೆ.

**ವಿದ್ಯುತ್ ವ್ಯತ್ಯಯ:** ಡಿಸೆಂಬರ್ 26 ರಂದು ಬೆಳಿಗ್ಗೆ 10 ರಿಂದ ಸಂಜೆ 6.30 ಗಂಟೆಯವರೆಗೆ ಕೆ.ವಿ ದೂರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಮುರುಡಗಳ್ಳಿ, ತಳೂರು, ದೊಡ್ಡಕಾಟೂರು, ದೂರ, ಹಳ್ಳಿಕೆರೆ ಹುಂಡಿ, ನಂಜುಂಡೇಶ್ವರ ಬಡಾವಣೆ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗುವುದರಿಂದ ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕು ಎಂದು ಚಾ.ವಿ.ಸ.ನಿ.ನಿ.ಯ ನ.ರಾ. ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ತಿಳಿಸಿದ್ದಾರೆ.

# 29 ರಂದು ವಿಶ್ವಮಾನವ ದಿನಾಚರಣೆ

**ಮೈಸೂರು:** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಡಿಸೆಂಬರ್ 29 ರಂದು ಬೆಳಗ್ಗೆ 11.30 ಗಂಟೆಗೆ ಕರ್ನಾಟಕ ಕಲಾಮಂದಿರದಲ್ಲಿ ''ವಿಶ್ವ ಮಾನವ ದಿನಾಚರಣೆ'' ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಘನ ಉಪಸ್ಥಿತಿಯಲ್ಲಿ, ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಚಿವರಾದ ಡಾ.ಹೆಚ್.ಸಿ ಮಹದೇವಪ್ಪನವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದು, ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ಹರೀಶ್ ಗೌಡ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವರಾದ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷರು ಹಾಗೂ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಅನಿಲ್ ಕುಮಾರ್.ಸಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷರಾದ ಎ.ಬಿ ರಮೇಶ್ ಬಂಡಿ ಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ.ಪುಷ್ಪ ಅಮರನಾಥ್ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರ ಅಧ್ಯಕ್ಷರಾದ ಡಾ. ಮಾನಸ ಅವರು ಗೌರವ ಉಪಸ್ಥಿತರಿರಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಶಾಸಕರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದ ಶಾಸಕರಾದ ಸುನಿಲ್ ಬೋಸ್ ಅವರು ಆಗಮಿಸಲಿದ್ದಾರೆ.

ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ತನ್ವಿರ್ ಸೇಠ್, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಟಿ ದೇವೇಗೌಡ, ಕೃಷ್ಣರಾಜನಗರ ವಿಧಾನಸಭಾ ಶಾಸಕರಾದ ರವಿಶಂಕರ್ ಡಿ, ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಟಿ.ಎಸ್ ಶ್ರೀವತ್ಸ, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಧೃವನಾರಾಯಣ್, ಹುಣಸೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಡಿ ಹರೀಶ್ ಗೌಡ ಹಾಗೂ ವಿಧಾನ ಪರಿಷತ್ತಿನ ಸದಸ್ಯರುಗಳಾದ ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ.ಮಾದೇಗೌಡ, ಯತಿಂದ್ರ.ಎಸ್ ಮತ್ತು ವಿವೇಕಾನಂದ. ಎಸ್ ಅವರು ಸಮಾರಂಭದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್ ಖಾನ್ ಹಾಗೂ ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷರಾದ ಮರಿಸ್ವಾಮಿ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಮಹಾಕವಯಿತ್ರಿಯಾದ ಡಾ.ಲತಾ ರಾಜಶೇಖರ ಅವರು ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಲಿದ್ದಾರೆ.

## ಬಸ್‌ಪಾಸ್ ನವೀಕರಣ

**ಬೆಂಗಳೂರು:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ 2025ನೇ ಸಾಲಿನ ವಿಶೇಷಚೇತನರ ರಿಯಾಯಿತಿ ಪಾಸುಗಳ ವಿತರಣೆ / ನವೀಕರಣವನ್ನು ಡಿಸೆಂಬರ್ 30 ರಿಂದ ಪ್ರಾರಂಭಿಸಲಾಗುವುದು. ಈ ಸಂಬಂಧ ಫಲಾನುಭವಿಗಳು ಸೇವಾಸಿಂಧು ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿದೆ. 2024ನೇ ಸಾಲಿನಲ್ಲಿ ವಿತರಿಸಿರುವ ಬಸ್‌ಪಾಸ್‌ಗಳನ್ನು 2025 ನೇ ಫೆಬ್ರವರಿ 28 ರವರೆಗೆ ಮಾನ್ಯ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

**ಬೆಂಗಳೂರು:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಪುರುಷೋತ್ತಮ ಬಿಳಿಮಲೆ ಅವರು ಡಿಸೆಂಬರ್ 25 ಮತ್ತು 26 ರಂದು ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು 26 ರಂದು ರಾತ್ರಿ ಕೇಂದ್ರಸ್ಥಾನಕ್ಕೆ ಹಿಂದಿರುಗಲಿದ್ದಾರೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 136ನೇ ನಿರ್ದೇಶಕ ಮಂಡಳಿ ಸಭೆ

**ಬೆಂಗಳೂರು:** ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಜಿ.ಪದ್ಮಾವತಿ ರವರ ಅಧ್ಯಕ್ಷತೆಯಲ್ಲಿ ಇಂದು ನಿಗಮದ 136ನೇ ನಿರ್ದೇಶಕ ಮಂಡಳಿ ಸಭೆಯನ್ನು ನಡೆಸಲಾಯಿತು. ಸದರಿ ಸಭೆಯಲ್ಲಿ ಮಹಿಳೆಯರಿಗೆ ಹೊಸ ಯೋಜನೆಗಳ ಅನುಷ್ಟಾನದ ಬಗ್ಗೆ ಚರ್ಚಿಸಲಾಗಿ ನಂತರ ಕಿರು ಸಾಲ ಯೋಜನೆ, ಮಾರುಕಟ್ಟೆ ನೆರವು ಯೋಜನೆ, ಸಮೃದ್ಧಿ ಯೋಜನೆಗಳ ಪುನರ್ ಆರಂಭ, ಅಭಿವೃದ್ಧಿ ನಿರೀಕ್ಷರ ಪದೋನ್ನತಿ, ಕಂಪ್ಯೂಟರ್ ಆಪರೇಟರ್‌ಗಳ ನೇಮಕ, ಲಿಂಗತ್ವ ಅಲ್ಪ ಸಂಖ್ಯಾತರು ಮತ್ತು ಮಾಜಿ ದೇವದಾಸಿಗಳ ಮರು ಸಮೀಕ್ಷೆ ಹಾಗೂ ಸಹಾಯ ಧನ, ಪಿಂಚಣಿಗಳ ಬಗ್ಗೆ, ಉದ್ಯೋಗಿನಿ ಯೋಜನೆಯ ಗೈಡ್‌ಲೈನ್ ಸಡಿಲಿಕೆಗಳು, ತರಬೇತಿ ಯೋಜನೆಯ ಅನುಷ್ಠಾನ, ನಿಗಮದಲ್ಲಿನ ಲೆಕ್ಕಪತ್ರ ವ್ಯವಹಾರಗಳು, ಹೊಸ ಕಛೇರಿ ಕಾಮಗಾರಿಯ ಹಂತಗಳ ಬಗ್ಗೆ, ನಿಗಮದ ಜಾಗಕ್ಕೆ ಭದ್ರತೆಯ ಬಗ್ಗೆ ಇನ್ನು ಹಲವು ಮಹಿಳೆಯರ, ಧಮನಿತ ಮಹಿಳೆಯರ, ಲಿಂಗತ್ವ ಅಲ್ಪಸಂಖ್ಯಾತರ, ಮಾಜಿ ದೇವದಾಸಿಯವರ ಪರವಾಗಿ ನಿಗಮದಲ್ಲಿ ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಿ ಅವುಗಳನ್ನು ಕಾರ್ಯರೂಪಕ್ಕೆ ತರುವ ವಿಚಾರವಾಗಿ ನಿರ್ಣಯಿಸಲಾಯಿತು. ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಬಲರಾಮ್, ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಶ್ರೀಮತಿ ಪುಷ್ಪಲತಾ, ಕಂಪನಿ ಕಾರ್ಯದರ್ಶಿ ಶ್ರೀನಿವಾಸ್ ಉಪಸ್ಥಿತರಿದ್ದರು.

## ಸಂಯಮ ಪ್ರಶಸ್ತಿಗೆ ಅರ್ಜಿ

**ಬೆಂಗಳೂರು:** ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ 2024-25ನೇ ಸಾಲಿನ ಸಂಯಮ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಿದೆ. ವ್ಯಸನ ಮುಕ್ತ ಸಮಾಜ ನಿರ್ಮಾಣ. ಮದ್ಯ ಮತ್ತು ಮಾದಕ ವಸ್ತುಗಳಿಂದ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಹಾಗೂ ಮದ್ಯ ವ್ಯಸನಗಳನ್ನು ಗುರುತಿಸಿ ಅವರಗಳ ಜೀವನ ಪರಿವರ್ತನೆಗಾಗಿ ಮತ್ತು ಪುನಃ ವಸತಿಗಳಿಗಾಗಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವ ಆಸಕ್ತಿಯುಳ್ಳ ವ್ಯಕ್ತಿ ಹಾಗೂ ಸಂಘ ಸಂಸ್ಥೆಗಳಿಗೆ 2025ರ ಜನವರಿ 15 ರೊಳಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ. ಅರ್ಜಿಯನ್ನು ಇ-ಮೇಲ್ ವಿಳಾಸ kar.temperance@gmail.com ಹಾಗೂ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 6ನೇ ಮಹಡಿ, ಡಾ. ಬಿ.ಆರ್ ಅಂಬೇಡ್ಕರ್ ವೀದಿ, ಬೆಂಗಳೂರು- 560 001 ಗೆ ಸಲ್ಲಿಸುವಂತೆ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಿಚಿತ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

**ಚಿಕ್ಕಬಳ್ಳಾಪುರ:** ಶಿಡ್ಲಘಟ್ಟ ತಾಲ್ಲೂಕಿನ ಕೋಟಹಳ್ಳಿ ಗ್ರಾಮದ ದ್ಯಾವಪ್ಪ ಗುಡಿಯ ದೇವಸ್ಥಾನದ ಬಳಿ ಡಿಸೆಂಬರ್ 5 ರ ಮಧ್ಯಾಹ್ನ 1.30 ಸಮಯದಲ್ಲಿ ಸುಮಾರು 50 ರಿಂದ 55 ವರ್ಷದ ಅಪರಿಚಿತ ವ್ಯಕ್ತಿಯ ಮೃತದೇಹವು ಪತ್ತೆಯಾಗಿದೆ. ಹೆಸರುತಿಳಿದುಬಂದಿರುದಿಲ್ಲ, ವಯಸ್ಸು ಸುಮಾರು 50 ರಿಂದ 55.ಈ ಅಪರಿಚಿತ ಮೃತ ವ್ಯಕ್ತಿಯ ವಾರಸುದಾರರು ಯಾರಾದ್ರೂ ಇದ್ದರೆ ದಿಬ್ಬೂರಹಳ್ಳಿ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ-9591746595 ಗೆ ಅಥವಾ ಹತ್ತಿರದ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಬೇಸಾಯ ಪದ್ಧತಿ ಕುರಿತು ತರಬೇತಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರದಲ್ಲಿ ರಾಷ್ಟ್ರೀಯ ದಾಳಿಂಬೆ ಸಂಶೋಧನಾ ಕೇಂದ್ರ, ಸೋಲಾಪುರ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆ ಖಕಈಅಔ ಮತ್ತು ಕಾಪ್ಸ್ ಬರ್ ಆಗ್ರಿಸೈನ್ಸ್ ಇವರ ಸಂಯುಕ್ತ ಆಶ್ರಯದಲ್ಲಿ ಗುಣಮಟ್ಟದ ದಾಳಿಂಬೆ ಉತ್ಪಾದನೆಗಾಗಿ ಉತ್ತಮ ಬೇಸಾಯ ಪದ್ಧತಿಗಳ ಕುರಿತು ತರಬೇತಿ ಕಾರ್ಯಕ್ರಮವನ್ನು ಡಿಸೆಂಬರ್ 27 ರಂದು ಬೆಳಿಗ್ಗೆ: 10:00 ಘಂಟೆಗೆ ಹರ್ಷೋದಯ ಕನ್ವೆಂಷನಲ್ ಹಾಲ್,ಹಮ್ಮಿಕೊಳ್ಳಲಾಗುತ್ತದೆ ತರಬೇತಿ ಕಾರ್ಯಕ್ರಮಕ್ಕೆ ತಾಲ್ಲೂಕುವಾರು ದಾಳಿಂಬೆ ಬೆಳೆಗಾರರು ಭಾಗವಹಿಸಬೇಕು.

## ಕಾಣೆಯಾದವರ ಪತ್ತೆಗಾಗಿ

**ಮಂಡ್ಯ:** ಪಾಂಡವಪುರತಾಲ್ಲೂಕಿನಎಲೆಕೆರೆಗ್ರಾಮದ ಮಹಾಲಿಂಗ (50) ಎಂಬುವವರುಕಾಣೆಯಾಗಿದ್ದರೆಂದು ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್‌ಠಾಣೆಯಲ್ಲಿದೂರುದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 5 ಅಡಿ ಎತ್ತರ,ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ,ಬಿಳಿ ತಲೆಕೂದಲು, ಮೀಸೆ ಕುರುಚಲುಗಡ್ಡ ಬಿಳಿ ಬಣ್ಣದಅರ್ಧ ತೋಳಿನ ಶರ್ಟ್ ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 9480804875/8277956036 ನ್ನು ಸಂಪರ್ಕಿಸಬಹುದುಎಂದು ಶ್ರೀರಂಗಪಟ್ಟಣ ಠಾಣೆಯಠಾಣಾಧಿಕಾರಿ ತಿಳಿಸಿದ್ದಾರೆ.

# ಬುದ್ಧ, ಬಸವ, ಗಾಂಧಿ ಹಾಗೂ ಅಂಬೇಡ್ಕರ್ ಆದರ್ಶ

**ಬೆಂಗಳೂರು:** ಬುದ್ಧ, ಬಸವ, ಗಾಂಧಿ ಹಾಗೂ ಅಂಬೇಡ್ಕರ್ ಅವರುಗಳೇ ನನಗೆ ಆದರ್ಶ ಎಂದು ಹಿರಿಯ ಸಾಹಿತಿ, ಚಿಂತಕರು ಹಾಗೂ ಮಾಜಿ ಸಚಿವರಾದ ಡಾ. ಬಿ. ಲಲಿತಾ ನಾಯಕ್ ಅವರು ತಿಳಿಸಿದರು.



ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯ ವತಿಯಿಂದ ಮಹಿಳಾ ವಿಶ್ರಾಂತಿ ಕೊಠಡಿ, ರವೀಂದ್ರ ಕಲಾಕ್ಷೇತ್ರ, ಬೆಂಗಳೂರು ಇಲ್ಲಿ ಕಳತಾವೂರ್ ಮಳಾವ್ - 03(ಸಜ್ಜನರ ಸಲ್ಲಾಪ -03) ಮೀನಾರೋ ಪಾಮಣೋ(ತಿಂಗಳ ಅತಿಥಿ) ಸಮಾರಂಭದ ತಿಂಗಳ ಅಥಿತಿಯಾಗಿ ಭಾಗವಹಿಸಿ ಮಾತನಾಡಿದ ಅವರು ತಮ್ಮ ಬಾಲ್ಯದ ದಿನಗಳಲ್ಲಿಯೇ ವ್ಯಾಸಂಗದಲ್ಲಿ ಹೆಚ್ಚು ಆಸಕ್ತಿಯಿಂದ ತೊಡಗಿಸಿಕೊಂಡು. ವಿದ್ಯಾಭ್ಯಾಸ ಪೂರ್ಣಗೊಳಿಸಿದ ನಂತರ ಸಂಸಾರಿಕ ತೊಂದರೆಯಿಂದ 8ನೇ ತರಗತಿಗೆ ಶಾಲೆ ಬಿಟ್ಟು ಸಂಸಾರದ ಕೆಲ ಸಂಗತಿಗಳನ್ನೇ ಬರಹ ರೂಪದಲ್ಲಿ ತರಲಾಯಿತು. ಬಹುಮುಖ್ಯವಾಗಿ ವೈಚಾರಿಕ ನೆಲಗಟ್ಟಿನಲ್ಲಿ ಚಿಂತಿಸುತ್ತಾ ಈ ಕುರಿತಾಗಿ ಹೆಚ್ಚು ಬರಹಗಳನ್ನು ಬರೆಯಲು ಉತ್ಸುಕಳಾದೆ ಎಂದು ತಿಳಿಸಿದರು.

ನನ್ನ ಬರಹಕ್ಕೆ ನನ್ನ ತಂದೆಯ ಒತ್ತಾಸೆ ಹಾಗೂ ಮೊದಲ ವೇದಿಕೆಯಾಗಿದ್ದು ಲಂಕೇಶ್ ಹಾಗೂ ಇತರೆ ಪತ್ರಿಕೆಗಳು ಇದ್ದವು ಎಂಬುದನ್ನು ಮರೆಯುವಂತಿಲ್ಲ. ರಾಜಕೀಯ ಕ್ಷೇತ್ರಕ್ಕೆ ಬಂದು ಕೆಲವರ ಪಿತೂರಿಗಳಿಂದ ಅಧಿಕಾರ ಕಳೆದುಕೊಂಡೆ. ನಜೀರ್ ಸಾಭ್ ಅವರು ನನ್ನನ್ನು ಎಂ.ಎಲ್.ಸಿ ಮಾಡಲು ಕಾರಣರಾದರೂ ಆ ನಂತರ ಸಚಿವೆಯಾದೆ. ಈ ಸಂದರ್ಭದಲ್ಲೂ ಕೂಡ ನನಗೆ ಸಾಹಿತ್ಯ ರಚನೆ ಬಗ್ಗೆಯೇ ಹೆಚ್ಚಿನ ತುಡಿತವಿತ್ತು. ಜೊತೆಗೆ ನನ್ನ ಸತ್ಯನಿಷ್ಠೆ, ಸರಳ ಜೀವನ ಇವುಗಳು ಸಚಿವೆಯಾಗಿ ಹೆಚ್ಚು ದಿನ ಮುಂದುವರೆಯದಂತೆ ಮಾಡಿದವು. ಆದರೂ ಧೃತಿಗೆಡಲಿಲ್ಲ, ಹಲವು ಬಗೆಯಲ್ಲಿ ಸಮಾಜ ಸೇವೆಗೆ ತೊಡಗಿಸಿಕೊಂಡಿರುವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಬಂಜಾರಾ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಅಧ್ಯಕ್ಷರಾದ ಡಾ.ಎ.ಆರ್ ಗೋವಿಂದಸ್ವಾಮಿ ಅವರು ಮಾತನಾಡಿ, ಕಳೆದ ಆರು ತಿಂಗಳಿಂದ ಅಕಾಡೆಮಿಯು ನಿರಂತರ 28ಕ್ಕೂ ಹೆಚ್ಚಿನ ಕಾರ್ಯಕ್ರಮಗಳನ್ನು ರಾಜ್ಯದಾದ್ಯಂತ ನಡೆಸಿದ ಕಾರ್ಯ ಚಟುವಟಿಕೆ ವಿವರಿಸುತ್ತಾ ಪ್ರಸ್ತುತ ಬಂಜಾರ ವಿಶ್ವಕೋಶ (ಎನ್‌ಸೈಕ್ಲೋಪೀಡಿಯಾ) ರಚಿಸುವ ಅಕಾಡೆಮಿ ತೊಡಗಿದ್ದು ನಾಡೋಜ ಪ್ರೊ. ಬರಗೂರು ರಾಮಚಂದ್ರಪ್ಪ ಅವರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ. ಕಾರ್ಯದಲ್ಲಿ ಪ್ರಥಮ ಸಾಹಿತಿ ಹಾಗೂ ಕಲಾವಿದರ ಬಗ್ಗೆ ಸಾಕ್ಷ್ಯ ಚಿತ್ರ ನಿರ್ಮಾಣವಾಗುತ್ತಿವೆ ಎಂದು ತಿಳಿಸಿದರು.

ರಾಜ್ಯದ ಬಹುತೇಕ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ವಿಚಾರ ಸಂಕಿರಣ ಆಯೋಜಿಸಲಾಗಿದೆ ಹಾಗೂ ಬಂಜಾರ ಯುವಕ ಯುವತಿಯರಿಗೆ ಕಸೂತಿ, ತರಬೇತಿ ಶಿಬಿರ ಯಶಸ್ವಿ ಆಯೋಜಿಸಲಾಗಿದೆ ಹಾಗೂ ವಿಜಯಪುರದಲ್ಲಿ ಹತ್ತು ದಿನಗಳ ಬಂಜಾರ ಆಭರಣ ತಯಾರಿಕೆ ಕಾರ್ಯಾಗಾರ ನಡೆಸಲಾಗಿದೆ ಬೆಂಗಳೂರು ನಗರದಲ್ಲಿ ಪ್ರತಿ ತಿಂಗಳು ನಾಡಿನ ಸಾಹಿತಿಗಳು ಚಿಂತಕರು ಪ್ರಗತಿಪರರು, ಸಮುದಾಯದ ಎಲೆಮರೆ ಕಾಯಿಗಳು ಮತ್ತು ಗಣ್ಯ ವ್ಯಕ್ತಿಗಳನ್ನು ಕರೆಸಿ ತಿಂಗಳ ಅತಿಥಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಇವುಗಳ ಜೊತೆಗೆ ಅಕಾಡೆಮಿಯು ಬಂಜಾರ ಸಮುದಾಯದ ಸಾಧಕರನ್ನು ಗುರುತಿಸಿ ಅವರಿಗೆ ಪ್ರಶಸ್ತಿ ಗೌರವಗಳನ್ನು ನೀಡುವ, ಕೊಡಿಸುವ ಕೆಲಸವನ್ನು ಮಾಡುತ್ತಿದೆ ಎಂದು ತಿಳಿಸಿದರು.

ಮಾನ್ಯ ಪ್ರಧಾನ ಮಂತ್ರಿ ಅವರನ್ನು ಬಂಜಾರ ಭಾಷೆಯನ್ನೂ ಪ್ರಸಾರ ಭಾರತೀಯ ಅಕಾಶವಾಣಿ, ದೂರದರ್ಶನ ಹಾಗೂ ಇತರೆ ಕಡೆ ಬೆಳಸಲು ಅವಕಾಶ ಹಾಗೂ ಬಂಜಾರ ಭಾಷೆಗೆ ಸಂವಿಧಾನಿಕ ಸ್ಥಾನ ಮಾನಕ್ಕೆ ಕೋರಲಾಗಿದೆ. ಜೊತೆಗೆ ಬಂಜಾರ ಮ್ಯೂಸಿಯಂ ಹಾಗೂ ಮಾದರಿ ತಾಂಡ ಅಲ್ಲದೆ ಲಿಪಿ ಇಲ್ಲದ ಬಂಜಾರ ಭಾಷೆಯನ್ನು ಆಯಾ ರಾಜ್ಯಗಳ ಪ್ರಾದೇಶಿಕ ಭಾಷೆಯಲ್ಲಿಯೂ ಮತ್ತು ರಾಷ್ಟ್ರಮಟ್ಟದಲ್ಲಿ ನಾಗರೀಕ ಲಿಪಿಯಲ್ಲಿ ಬರೆಯುತ್ತಿದ್ದು, ಅಂತರರಾಷ್ಟ್ರೀಯ ಮಟ್ಟದಲ್ಲಿ ಆಂಗ್ಲ ಭಾಷೆ ಬಳಕೆ ಇದೆ. ಇದನ್ನೇ ಅನೇಕ ಬಂಜಾರ ಭಾಷಾ ತಜ್ಞರು ಅಖೈರು ಗೊಳಿಸಲು ತಮ್ಮ ಸಮರ್ಥನೆ ಹೇಳಿದ್ದಾರೆ. ಈ ನಿಟ್ಟಿನಲ್ಲಿ ಅಕಾಡೆಮಿ ಹೆಚ್ಚಿನ ಸಂಶೋಧನೆ ಮಾಡಲಿದೆ ಮತ್ತು ಅಖೈರು ಗೊಳಿಸಲಿದೆ ಎಂದರು.

ಹಿರಿಯ ಸಾಂಸ್ಕೃತಿಕ ಚಿಂತಕರು ಹಾಗೂ ಮಾನ್ಯ ಮುಖ್ಯಮಂತ್ರಿಗಳ ವಿಶ್ರಾಂತ ಮಾಧ್ಯಮ ಸಲಹೆಗಾರರಾದ ದಿನೇಶ್ ಅಮಿನ್ ಮಟ್ಟು ಮಾತನಾಡಿ, ಲಲಿತನಾಯಕ್ ಸಾಹಿತಿಯಾಗಿ ಗುರುತಿಸಿಕೊಂಡು ಆನಂತರ ರಾಜಕಾರಣಿಯಾದವರು. ಅನುವಾದಕಿ ಕೂಡ ಆಗಿದ್ದರು ಬಿ. ಟಿ. ಲಲಿತಾ ನಾಯಕ ಅವರು ಒಬ್ಬರು ರಾಜಕಾರಣಿ, ಸಾಹಿತಿ, ಪತ್ರಕರ್ತೆ ಅಂತ ತಿಳಿದುಕೊಂಡರೆ ಅಷ್ಟೇ ಅಲ್ಲ, ಎಲ್ಲವನ್ನು ಒಳಗೊಂಡು ಸಾರ್ವಜನಿಕ ಹಿತಕ್ಕಾಗಿ ಯಾವ ಯಾವ ಕ್ಷೇತ್ರದಲ್ಲಿ ಕೆಲಸ ಮಾಡಲು ಸಾಧ್ಯವಾಗುತ್ತದೆಯೋ ಆ ಎಲ್ಲಾ ಕ್ಷೇತ್ರದಲ್ಲಿಯೂ ಅವರು ಕಾಣಿಸಿಕೊಂಡಿದ್ದಾರೆ ಅವರು ಮೊದಲ ಬಾರಿ ಸಚಿವರಾಗಿದ್ದಾಗ ಬಹಳ ದೊಡ್ಡ ಸಂಚು ನಡೆದು ಅದನ್ನು ಕಳೆದುಕೊಳ್ಳಬೇಕಾಯಿತು. ಎಲ್ಲವನ್ನೂ ಕೂಡ ಸಾರ್ವಜನಿಕ ಹಿತಾಶಕ್ತಿಯಲ್ಲಿಯೇ ತೆಗೆದುಕೊಂಡವರು. ನನಗೆ ಆಶ್ಚರ್ಯ ಆಗಿರುವುದು ಏನೆಂದರೆ ಅವರಿಗೆ ರಾಜ್ಯೋತ್ಸವ ಪ್ರಶಸ್ತಿಯಲ್ಲಿ ಅವರ ಹೆಸರು ಕಾಣಿಸಿಕೊಂಡಾಗ, ಅವರಿಗೆ 10 ವರ್ಷದ ಹಿಂದೆಯೇ ರಾಜ್ಯೋತ್ಸವ ಪ್ರಶಸ್ತಿ ಬಂದಿರಬಹುದು ಎಂದು ತಿಳಿದುಕೊಂಡಿದ್ದೆ. ಆದರೆ ಇಲ್ಲಿಯವರೆಗೆ ಬರದಿರುವುದು ಶೋಚನೀಯ, ಪ್ರಸಕ್ತ ಸಾಲಿನಲ್ಲಿ ಬಂಜಾರ ಅಕಾಡೆಮಿಯ ಅಧ್ಯಕ್ಷರ ಹಾಗೂ ಇತರರ ಶಿಫಾರಸ್ಸು, ತಜ್ಞರ ಸಮಿತಿ ಶಿಫಾರಸ್ಸಿನಿಂದ ಪ್ರಶಸ್ತಿ ಸಿಕ್ಕಿದದಕ್ಕಾಗಿ ಅಭಿನಂದಿಸಿದರು.

## ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನ

**ಮೈಸೂರು:** ಮೈಸೂರು ಮಹಾನಗರ ಪಾಲಿಕೆಯ ವತಿಯಿಂದ ಅಮೃತ್ 2.0 ಯೋಜನೆಯಡಿ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ ಸಮರ್ಪಕ ವಸೂಲಾತಿಗಾಗಿ ಡೇ- ನಾಲ್ಮ್ ಯೋಜನೆಯಡಿ ರಚಿಸಲ್ಪಟ್ಟ ಮಹಿಳಾ ಸ್ವ-ಸಹಾಯ ಗುಂಪುಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಸದರಿ ಸ್ವ-ಸಹಾಯ ಗುಂಪುಗಳಿಗೆ ವಸೂಲಾದ ಮೊತ್ತದಲ್ಲಿ ಶೇ. 5 ರಷ್ಟು ಪ್ರೋತ್ಸಾಹ ಧನವನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಆಸಕ್ತ ಮತ್ತು ಬದ್ಧತೆಯನ್ನು ಹೊಂದಿರುವ ಮಹಿಳಾ ಸ್ವ ಸಹಾಯ ಗುಂಪುಗಳು ಮೈಸೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿ ಡೇ- ನಲ್ಮ್ ವಿಭಾಗಲ್ಲಿ 1 ರಿಂದ 6 ರ ವರೆಗೆ ಅರ್ಜಿ ನಮೂನೆಯನ್ನು ಪಡೆದು, ಅರ್ಜಿಯನ್ನು ಭರ್ತಿ ಮಾಡಿ ಜನವರಿ 10 ರೊಳಗಾಗಿ ತಮ್ಮ ಪ್ರಸ್ತಾವನೆಯನ್ನು ಮುಚ್ಚಿದ ಲಕೋಟೆಯಲ್ಲಿ ಕಛೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ಸ್ವ-ಸಹಾಯ ಗುಂಪು ಡೇ- ನಲ್ಮ್ ಅಭಿಯಾನದಡಿ ನೊಂದಾಯಿಸಿ ಪಂಚಸೂತ್ರಗಳನ್ನು ಅನುಸರಿಸುತ್ತಿರಬೇಕು ಹಾಗೂ ಗುರುತಿಸುವ ಸ್ವಸಹಾಯ ಸಂಘಗಳ ಸದಸ್ಯರ ಪೈಕಿ ಕನಿಷ್ಠ ಒಬ್ಬ ಸದಸ್ಯರು 7ನೇ ತರಗತಿಯವರೆಗೆ ಮೂಲಭೂತ ಶಿಕ್ಷಣವನ್ನು ಹಾಗೂ ಡಿಜಿಟಲ್ ಸಾಕ್ಷರತೆಯನ್ನು ಹೊಂದಿರಬೇಕು ಎಂದು ಮೈಸೂರು ಮಹಾನಗರ ಪಾಲಿಕೆಯ ಹೆಚ್ಚುವರಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳಾ ಸ್ವ ಸಹಾಯ ಸಂಘಗಳಿಂದ ಅರ್ಜಿ ಅಹ್ವಾನ

**ಮೈಸೂರು:** ನಂಜನಗೂಡು ನಗರಸಭಾ ಕಾರ್ಯಾಲಯದ ವತಿಯಿಂದ ಅಮೃತ್ 2.0 ಯೋಜನೆಯಡಿ ಅಮೃತ್ ಮಿತ್ರ ಕಾರ್ಯಕ್ರಮದ ತಾಂತ್ರಿಕೇತರ ಚಟುವಟಿಕೆಯಲ್ಲಿ ನಗರಸಭಾ ವ್ಯಾಪ್ತಿಯಲ್ಲಿರುವ ಕೆಂಪೇಗೌಡ ಪಾರ್ಕ್ ಬಸವೇಶ್ವರ ಪಾರ್ಕ್ ವಾರ್ಡ್ ನಂ 23 ಹಾಗೂ ಕೆಂಪೇಗೌಡ ಪಾರ್ಕ್ ವಾರ್ಡ್ ನಂ 22 ಗಳನ್ನು ನಿರ್ವಹಣೆ ಮಾಡಲು ಡೆ-ನಲ್ಮ್ ಅಭಿಯಾನದಡಿ ರಚಿತವಾದ ಅರ್ಹ ಮಹಿಳಾ ಸ್ವಸಹಾಯ ಸಂಘಗಳಿಂದ ಅರ್ಜಿ ಅಹ್ವಾನಿಸಲಾಗಿದೆ. ಆಸಕ್ತ ಮಹಿಳಾ ಸ್ವ ಸಹಾಯ ಸಂಘಗಳು ನಂಜನಗೂಡಿನ ನಗರಸಭಾ ಕಾರ್ಯಾಲಯದ ಡೆ-ನಲ್ಮ್ ಶಾಖೆಯಲ್ಲಿ ಅರ್ಜಿ ನಮೂನೆ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಡಿಸೆಂಬರ್ 31 ರೊಳಗಾಗಿ ತಮ್ಮ ಪ್ರಸ್ತಾವನೆಯನ್ನು ಮುಚ್ಚಿದ ಲಕೋಟೆಯಲ್ಲಿ ಕಛೇರಿಗೆ ಸಲ್ಲಿಸಬೇಕು ಎಂದು ನಂಜನಗೂಡಿನ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್



# ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾದ ನೂತನ ಶಾಖೆಯ ಉದ್ಘಾಟನೆ

ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾದ ಬೆಂಗಳೂರು ಮಾರತಹಳ್ಳಿ ನೂತನ ಶಾಖೆಯನ್ನು ಬ್ಯಾಂಕ್ ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಎಂ ವಿ ರಾವ್ ರವರು ಉದ್ಘಾಟಿಸಿದರು. ಈ ಶುಭ ಸಂದರ್ಭದಲ್ಲಿ ಬ್ಯಾಂಕ್ ನ ಹೈದರಾಬಾದ್ ವಲಯದ ಮುಖ್ಯಸ್ಥ ದಾರಾಸಿಂಗ್ ನಾಯ್ಕ್, ಬ್ಯಾಂಕ್ ನ ಬೆಂಗಳೂರು ಪ್ರಾಂತ್ಯದ ಮುಖ್ಯಸ್ಥ ಕೆ ಪಾರ್ಥಸಾರತಿ ನಾಯ್ಡು, ಬ್ಯಾಂಕ್ ನ ಹಿರಿಯ ಅಧಿಕಾರಿಗಳು ಮತ್ತು ಗ್ರಾಹಕ ವರ್ಗದವರು ಉಪಸ್ಥಿತರಿದ್ದರು. ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ ದೇಶಾದ್ಯಂತ 4520 ಶಾಖೆಗಳನ್ನು ಹೊಂದಿದ್ದು, ಕರ್ನಾಟಕದಲ್ಲಿ ಬ್ಯಾಂಕ್ 106 ಶಾಖೆಗಳೊಂದಿಗೆ , ರೂ.12394 ಕೋಟಿ ಒಟ್ಟಾರೆ ವ್ಯವಹಾರವನ್ನು ಹೊಂದಿದೆ. ಬ್ಯಾಂಕ್ ಈ ಆರ್ಥಿಕ ವರ್ಷದಲ್ಲಿ ಬೆಂಗಳೂರು ನಗರದಲ್ಲಿ ಮೂರು ಹೊಸ ಶಾಖೆಗಳನ್ನು ಎಲೆಕ್ಟ್ರಾನಿಕ್ ಸಿಟಿ, ಸರ್ಜಾಪುರ್ ಮತ್ತು ವೈಟ್ ಫೀಲ್ಡ್ ನಲ್ಲಿ ತೆರೆಯಲಿದೆ.

## ಮದ್ರಾಸ್ ಸ್ಟೈಲ್ ಚಿಕನ್ 65

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಚಿಕನ್ ಪೀಸ್ಗಳು – ಅರ್ಧ ಕೆಜಿ, ಶುಂಠಿ, ಬೆಳ್ಳುಳ್ಳಿ ಪೇಸ್ಟ್ – 2 ಟೀಸ್ಪೂನ್, ಖಾರದ ಪುಡಿ – 2 ಟೀಸ್ಪೂನ್, ಗರಂ ಮಸಾಲಾ– ಟೀಸ್ಪೂನ್, ಧನಿಯಾ ಪುಡಿ – ಟೀಸ್ಪೂನ್, ಜೀರಿಗೆ ಪುಡಿ– ಟೀಚಮಚ, ಅರಿಶಿನ – ಕಾಲು ಟೀಚಮಚ, ನಿಂಬೆ ರಸ ಸ್ವಲ್ಪ, ಕಾರ್ನ್ ಫ್ಲೋರ್ (ಮೆಕ್ಕೆಜೋಳದ ಹಿಟ್ಟು) – 2 ಟೀಸ್ಪೂನ್, ಮೊಟ್ಟೆ – ಒಂದು, ಮೊಸರು – ಕಾಲು ಕಪ್, ಹಸಿಮೆಣಸಿನಕಾಯಿ – ನಾಲ್ಕು, ಕರಿಬೇವಿನ ಎಲೆಗಳು – ಐದು ಅಥವಾ ಆರು, ಉಪ್ಪು – ರುಚಿಗೆ ತಕ್ಕಷ್ಟು, ಫುಡ್ ಕಲರ್ – ಚಿಟಿಕೆ (ಕೆಂಪು ಬಣ್ಣ), ಎಣ್ಣೆ: ಡೀಪ್ ಫ್ರೈ ಮಾಡಲು ಬೇಕಾಗುವಷ್ಟು,

### ಮಾಡುವ ವಿಧಾನ

ಮೊದಲು ಚಿಕನ್ ಪೀಸ್ಗಳನ್ನು ಸರಿಯಾಗಿ ನೀರಿನಲ್ಲಿ ತೊಳೆಯಿರಿ. ನಂತರ ಅದನ್ನು ಮಿಕ್ಸಿಂಗ್ ಬೌಲ್ಗೆ ತೆಗೆದುಕೊಳ್ಳಿ. ಶುಂಠಿ, ಬೆಳ್ಳುಳ್ಳಿ ಪೇಸ್ಟ್, ಉಪ್ಪು, ಧನಿಯಾ ಪುಡಿ, ಗರಂ ಮಸಾಲಾ, ಮೆಣಸಿನ ಪುಡಿ, ಜೀರಿಗೆ ಪುಡಿ, ಅರಿಶಿನ, ನಿಂಬೆ ರಸ, ಕರಿಬೇವಿನ ಎಲೆಗಳನ್ನು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿಕೊಳ್ಳಿ.ಚಿಕನ್ ಪೀಸ್ಗಳನ್ನು ಮಸಾಲೆ ಮಿಶ್ರಣದಲ್ಲಿ ಹಾಕಿ ಚೆನ್ನಾಗಿ ಕಲಸಿಕೊಳ್ಳಬೇಕು. ನಂತರ ಕಾರ್ನ್ ಫ್ಲೋರ್ (ಮೆಕ್ಕೆಜೋಳದ ಹಿಟ್ಟನ್ನು) ಹಾಕಿ ಮಿಕ್ಸ್ ಮಾಡಿ. (ಕಾರ್ನ್ ಫ್ಲೋರ್ ಬದಲಿಗೆ ಮೈದಾ ಅಥವಾ ಅಕ್ಕಿ ಹಿಟ್ಟನ್ನು ಕೂಡ ಬಳಸಬಹುದು). ಈಗ ಮೊಸರು ಮತ್ತು ಫುಡ್ ಕಲರ್ ಸೇರಿಸಿ ಮಿಶ್ರಣ ಮಾಡಿ. ಚಿಕನ್ ಪೀಸ್ಗಳಿಗೆ ಲೇಪನವು ಸ್ವಲ್ಪ ಗಟ್ಟಿಯಾಗಿರಬೇಕು. ಅಗತ್ಯವಿದ್ದರೆ, ನೀವು ಸ್ವಲ್ಪ ಕಾರ್ನ್ ಫ್ಲೋರ್ನ್ನು ಸೇರಿಸಬಹುದು. ಮ್ಯಾರಿನೇಟ್ ಚಿಕನ್ನು ಫ್ರಿಡ್ಜ್ನಲ್ಲಿ ಒಂದು ಗಂಟೆ ಇಡಬೇಕು.ಬಳಿಕ ಅದರಲ್ಲಿ ಅರ್ಧ ಹಸಿ ಮೊಟ್ಟೆಯನ್ನು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಈಗ ಒಲೆಯ ಮೇಲೆ ಕಡಾಯಿ ಇಟ್ಟು ಎಣ್ಣೆ ಸುರಿಯಿರಿ. ಎಣ್ಣೆ ಬಿಸಿಯಾದ ನಂತರ ಸ್ಟವ್ನ್ನು ಮಧ್ಯಮ ಉರಿಯಲ್ಲಿ ಇಡಿ. ಚಿಕನ್ ಪೀಸ್ಗಳು ಒಂದೊಂದಾಗಿ ಅದರೊಳಗೆ ಹಾಕಿ ಹೊಂಬಣ್ಣ ಬರುವವರೆಗೆ ಫ್ರೈ ಮಾಡಿ. ಚಿಕನ್ ಪೀಸ್ಗಳನ್ನು ಅರ್ಧಕ್ಕಿಂತ ಹೆಚ್ಚು ಫ್ರೈ ಮಾಡಿ ಮತ್ತು ತಟ್ಟೆಯಲ್ಲಿ ತೆಗೆದುಕೊಳ್ಳಿ. ಅವುಗಳನ್ನು ಸ್ವಲ್ಪ ತಣ್ಣಗಾಗಲು ಬಿಡಿ. ನಂತರ ಮತ್ತೆ ಎಣ್ಣೆಯಲ್ಲಿ ಹಾಕಿ ಡೀಪ್ ಫ್ರೈ ಮಾಡಿ. ಚಿಕನ್ 65 ಅನ್ನು ಈ ರೀತಿ ಎರಡು ಬಾರಿ ಹಾಕಿ ಫ್ರೈ ಮಾಡಿದರೆ ರುಚಿ ತುಂಬಾ ಚೆನ್ನಾಗಿರುತ್ತದೆ.

# ನಟ ಅಲ್ಲು ಅರ್ಜುನ್ ಬೆಂಬಲಕ್ಕೆ ನಿಂತ ಅಣ್ಣಾಮಲೈ



ತೆಲುಗು ಚಿತ್ರರಂಗದ ಸೂಪರ್ ಸ್ಟಾರ್ ಅಲ್ಲು ಅರ್ಜುನ್ ವಿಚಾರದಲ್ಲಿ ಇದೀಗ ರಾಜಕೀಯ ಬಿಸಿ ಶುರುವಾಗಿದೆ. ಥಿಯೇಟರ್‌ನಲ್ಲಿ ಕಾಲ್ತುಳಿತ ಮತ್ತು ಮಹಿಳೆಯ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಅಲ್ಲು ಅರ್ಜುನ್ ಮತ್ತು ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ನಡುವೆ ಸಂಘರ್ಷ. ಪೊಲೀಸರು ಮಂಗಳವಾರ ಅಲ್ಲು ಅರ್ಜುನ್ ಅವರನ್ನು ಮೂರು ಗಂಟೆಗಳ ಕಾಲ ವಿಚಾರಣೆ ನಡೆಸಿದ್ದಾರೆ. ಇದಕ್ಕೂ ಮುನ್ನ ಅಲ್ಲು ಅರ್ಜುನ್ ನಿವಾಸದ ಮೇಲೂ ದಾಳಿ ನಡೆದಿತ್ತು. ಈ ಪ್ರಕರಣ ಸಂಬಂಧ ನಟ ಅಲ್ಲು ಅರ್ಜುನ್ ಅವರನ್ನು ತಮಿಳುನಾಡು ಬಿಜೆಪಿ ಅಧ್ಯಕ್ಷ ಕೆ.ಅಣ್ಣಾಮಲೈ ಬೆಂಬಲಿಸಿದ್ದಾರೆ. ಇದೇ ವೇಳೆ ಅವರು ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಬಿಜೆಪಿ ನಾಯಕ ಕೆ.ಅಣ್ಣಾಮಲೈ ಮಂಗಳವಾರ ಸಿಎಂ ರೇವಂತ್ ರೆಡ್ಡಿ ಅವರನ್ನು ಗುರಿಯಾಗಿಸಿಕೊಂಡು ಕಿಡಿಕಾರಿದ್ದಾರೆ. ರೇವಂತ್ ರೆಡ್ಡಿ ತೆಲಂಗಾಣದಲ್ಲಿ ಸೂಪರ್ ಸ್ಟಾರ್ ಯಾರು ಎಂಬ ಸ್ಪರ್ಧೆಯನ್ನು ಸೃಷ್ಟಿಸಲು ಪ್ರಯತ್ನಿಸುತ್ತಿದ್ದಾರೆ. ಅವರು ಅಲ್ಲು ಅರ್ಜುನ್‌ಗಿಂತ ದೊಡ್ಡ ಸೂಪರ್‌ಸ್ಟಾರ್ ಎಂದು ತೋರಿಸಲು ಪ್ರಯತ್ನಿಸುತ್ತಿದ್ದಾರೆ. ಈಗಲೂ ಸಹ ಅವರು ಕಾಂಗ್ರೆಸ್‌ನಲ್ಲಿ ನಟಿಸುತ್ತಿದ್ದಾರೆ, ಅವರು ತೆಲಂಗಾಣದ ಪ್ರಮುಖ ನಟ? ಎಂದು ಟೀಕಿಸಿದ್ದಾರೆ.

ಅಲ್ಲು ಅರ್ಜುನ್ ನಿವಾಸಕ್ಕೆ ಬಂದು ಗಲಾಟೆ, ಕಲ್ಲು ತೂರಾಟ ನಡೆಸಿದವರು, ಅವರ (ರೇವಂತ್ ರೆಡ್ಡಿ) ಕ್ಷೇತ್ರದಿಂದ 2–3 ಮಂದಿ ಬಂದಿದ್ದಾರೆ. ಇದು ರಾಜಕೀಯ ಪ್ರೇರಿತವಾಗಿದೆ. ಯಾರನ್ನಾದರೂ ಬಲಿಪಶು ಮಾಡುವುದು ಮತ್ತು ಬೆದರಿಕೆ ಹಾಕುವುದು ತಪ್ಪು. ಕಾಲ್ತುಳಿತ ಉಂಟಾಗಿ ಮಹಿಳೆ ಸಾವನ್ನಪ್ಪಿರುವುದು ವಿಷಾದನೀಯ. ಆದರೆ ಈ ಘಟನೆ ನಡೆಯಬೇಕೆಂದು ಅಲ್ಲು ಅರ್ಜುನ್‌ಗೆ ಉದ್ದೇಶವಿತ್ತಾ? ಹೀಗಾಗಿ ಅವರನ್ನು ಈ ಪ್ರಕರಣದಲ್ಲಿ ಬಲಿಪಶು ಮಾಡುವುದು ಮತ್ತು ಬೆದರಿಕೆ ಹಾಕುವುದು ಸರಿಯಲ್ಲ?ವೆಂದು ಅಣ್ಣಾಮಲೈ ಹೇಳಿದ್ದಾರೆ.

ಇದೇ ವೇಳೆ ಈ ವಿಚಾರದಲ್ಲಿ ಬಿಜೆಪಿ ಸಂಸದ ಕೆ.ಲಕ್ಷ್ಮಣ್ ಮಾತನಾಡಿ, ತೆಲಂಗಾಣ ಚಿತ್ರರಂಗದ ವಿರುದ್ಧ ರೇವಂತ್ ರೆಡ್ಡಿ ಸರ್ಕಾರಕ್ಕೆ ಏನು ದ್ವೇಷವಿದೆಯೋ ನಮಗೆ ತಿಳಿದಿಲ್ಲ. ಅಲ್ಲು ಅರ್ಜುನ್ ರಾಷ್ಟ್ರ ಪ್ರಶಸ್ತಿ ವಿಜೇತ ನಟ. ಆದರೆ ಅಲ್ಲು ಅರ್ಜುನ್ ನೇರವಾಗಿ ಈ ಪ್ರಕರಣದಲ್ಲಿ ಭಾಗಿಯಾಗಿಲ್ಲ, ಅವರ ವಿರುದ್ಧ 'ಕೊಲೆ ಯತ್ನ' ಪ್ರಕರಣ ದಾಖಲಿಸುವುದು ಅಥವಾ ಠಾಣೆಗೆ ಕರೆಸುವುದು ಸರಿಯಲ್ಲ. ಕಾಂಗ್ರೆಸ್ ಸಚಿವರು ಮತ್ತು ನಾಯಕರು ಈ ರೀತಿಯ ರಾಜಕೀಯ ಮಾಡುತ್ತಿರುವುದು ಸರಿಯಲ್ಲವೆಂದು ಅವರು ಕಿಡಿಕಾರಿದ್ದಾರೆ.

## ಬೇವು ಪಲವು ರೋಗಗಳಿಗೆ ಸಂಜೀವಿನಿ



### ಹೆಲ್ತ್ ಟಿಪ್ಸ್

ಬೇವು ಅನೇಕ ಔಷಧೀಯ ಗುಣಗಳನ್ನು ಹೊಂದಿವೆ ಎಂಬುದು ಎಲ್ಲರಿಗೂ ತಿಳಿದಿದೆ. ಬೇವಿನ ಮರದ ಪ್ರತಿಯೊಂದು ಭಾಗದಲ್ಲಿಯೂ ಔಷಧಿಯ ಗುಣಗಳಿವೆ. ಸೋಂಕು, ಜ್ವರ, ಚರ್ಮದ ಕಾಯಿಲೆ, ಹಲ್ಲಿನ ಅಸ್ವಸ್ಥತೆ ಸೇರಿದಂತೆ ಅನೇಕ ಸಮಸ್ಯೆಗಳ ಪರಿಹಾರಕ್ಕಾಗಿ ಆಯುರ್ವೇದ ಚಿಕಿತ್ಸೆಯಲ್ಲಿ ಬೇವನ್ನು ಬಳಕೆ ಮಾಡುತ್ತಾರೆ.

ಬೇವಿನ ಎಲೆಗಳಲ್ಲಿ ಆಯಂಟಿ ಬ್ಯಾಕ್ಟೀರಿಯಾ ಗುಣ ಇರುತ್ತದೆ. ಇದರಿಂದಾಗಿ ಸೋಂಕುಗಳು ಹಾಗೂ ಯಾವುದೇ ರೀತಿಯ ಚರ್ಮದ ತೊಂದರೆಗಳಿಗೆ ಬೇವಿನ ಎಲೆ ಉತ್ತಮ ಪರಿಹಾರ ಒದಗಿಸುತ್ತದೆ. ಬೇವಿನ ಎಲೆಗಳನ್ನು ಅಗೆದು ತಿನ್ನುವುದರಿಂದ ಚರ್ಮದ ಸಮಸ್ಯೆಗಳಿಗೆ ಸುಲಭವಾಗಿ ಪರಿಹಾರ ಪಡೆದುಕೊಳ್ಳಬಹುದು. ಇದರಿಂದ ಚರ್ಮವು ಹೊಳಪನ್ನು ಪಡೆದುಕೊಳ್ಳುತ್ತದೆ. ಮೊಡವೆಗಳ ಸಮಸ್ಯೆ ಇದ್ದವರು ಬಿಸಿ ನೀರಿನಲ್ಲಿ ಜೇನುತುಪ್ಪ ಬೇರಿಸಿ ಬೇವಿನ ಎಲೆಗಳನ್ನು ಹಾಕಿ ಸೇವಿಸಿದರೆ ಮೊಡವೆ ಮತ್ತು ಕಪ್ಪು ಚುಕ್ಕೆಗಳು ಕೂಡ ಮಾಯ ಆಗುತ್ತವೆ.

ಬೇವಿನ ಎಲೆ ತಿನ್ನುವುದರಿಂದ ನಿಮ್ಮ ಕೂದಲಿಗೆ ಉಪಕಾರಿ. ತಲೆ ಹೊಟ್ಟು ನಿವಾರಿಸಲು ಬೇವಿನ ಎಲೆ ತುಂಬಾ ಸಹಾಯ ಮಾಡುತ್ತದೆ.

ಮಲಸ್ಸೆಜಿಯಾ ಎಂಬ ಶಿಲೀಂಧ್ರಗಳ ವಿರುದ್ಧ ಬೇವಿನ ಎಲೆಗಳು ಹೋರಾಡುತ್ತವೆ. ಬಿಸಿನೀರಿನೊಂದಿಗೆ ಬೇವಿನ ಎಲೆಗಳನ್ನು ಹಾಕಿ ತಲೆ ಸ್ನಾನ ಮಾಡುವುದರಿಂದ ತಲೆ ಹೊಟ್ಟು, ಕೂದಲು ಉದುರುವಿಕೆಯನ್ನ ತಡೆಗಟ್ಟಬಹುದು.

ಬೇವಿನ ಎಲೆಗಳಿಂದ ಕಣ್ಣಿನ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ಆಯುರ್ವೇದ ಹೇಳುತ್ತದೆ. ಬೇವಿನ ಎಲೆಗಳನ್ನು ತಿನ್ನುವುದರಿಂದ ಕಣ್ಣುಗಳ ದೃಷ್ಟಿಗೆ ಒಳ್ಳೆಯದು. ಇನ್ನು, ತುರಿಕೆ, ದಣಿವು ಅಥವಾ ಕಣ್ಣು ಕೆಂಪಾದರೆ ಬೇವಿನ ಎಲೆಗಳನ್ನು ನೀರಲ್ಲಿ ಬೇಯಿಸಿ, ತಣ್ಣಗಾದ ನಂತರ ಸಮಸ್ಯೆ ಕಾಣಿಸಿಕೊಂಡ ಭಾಗವನ್ನ ಆ ನೀರಿನಿಂದ ತೊಳೆಯುವುದರಿಂದ ಕಣ್ಣಿನ ನೋವು ಕಡಿಮೆ ಆಗುತ್ತದೆ.

# ಉದಯೋನ್ಮುಖ ಕಲಾವಿದೆ ಕು. ಇಷಿತಾ ಭಾರಧ್ವಾಜ್ ರಂಗಪ್ರವೇಶ





ಬೆಂಗಳೂರಿನ ಹೆಸರಾಂತ 'ನಟರಾಜರಂಗಂ ಸ್ಕೂಲ್ ಆಫ್ ಡ್ಯಾನ್ಸ್' ನೃತ್ಯಸಂಸ್ಥೆಯ ನಾಟ್ಯಗುರು ಮತ್ತು ನೃತ್ಯ ಕಲಾವಿದೆ ಶ್ರೀಮತಿ. ಅಭಿನಯ ನಟರಾಜನ್ ಅವರ ಬಳಿ ಕಳೆದ 8 ವರ್ಷಗಳಿಂದ ಬದ್ಧತೆಯಿಂದ ನೃತ್ಯ ಕಲಿಯುತ್ತಿರುವ ಬಹುಮುಖ ಪ್ರತಿಭೆ ಕು. ಇಷಿತಾ ಭಾರಧ್ವಾಜ್, ಶ್ರೀಮತಿ ತ್ರಿಪುರಾ ಟೇಕೂರ್ ಮತ್ತು ಶ್ರೀ ಶೈಲೇಶ್ ಕುಮಾರ್ ದುಬೆ ಅವರ ಮಗಳು. ಉತ್ತಮಾಂಕಗಳಿಂದ 'ನೃತ್ಯಶ್ರೀ ಸರ್ಟಿಫಿಕೇಶನ್' ಪಡೆದಿರುವ ಇಷಿತಾ ಈಗಾಗಲೇ ದೇಶಾದ್ಯಂತ ಅನೇಕ ನೃತ್ಯಪ್ರದರ್ಶನಗಳನ್ನು ನೀಡಿ ಅನುಭವ ಹೊಂದಿದ್ದು, ಇದೀಗ ತನ್ನ ನೃತ್ಯ ಪ್ರತಿಭೆಯನ್ನು ಪ್ರದರ್ಶಿಸಲು ದಿ. 26 ಗುರುವಾರ ಬೆಳಗ್ಗೆ 9 ಗಂಟೆಗೆ ಮಲ್ಲೇಶ್ವರದ ಸೇವಾಸದನದಲ್ಲಿ ವಿದ್ಯುಕ್ತವಾಗಿ ರಂಗಪ್ರವೇಶ ಮಾಡುತ್ತಿದ್ದಾಳೆ. ಈ ಕನ್ನಿಕೆಯ ಸುಮನೋಹರ ನೃತ್ಯಸೊಬಗನ್ನು ಕಣ್ತುಂಬಿಕೊಳ್ಳಲು ಸರ್ವರಿಗೂ ಸುಸ್ವಾಗತ.

ಬೆಂಗಳೂರಿನಲ್ಲಿ ವಾಸವಾಗಿರುವ ಇಂಡಿಯನ್ ಏರ್ ಫೋರ್ಸ್ ಅಧಿಕಾರಿ ಶ್ರೀ ಶೈಲೇಶ್ ಕುಮಾರ್ ದುಬೆ ಹಾಗೂ ಸಾಫ್ಟ್ ವೇರ್ ಎಂಜಿನಿಯರ್ ಶ್ರೀಮತಿ ತ್ರಿಪುರಾ ಟೇಕೂರ್ ಅವರ ಮುದ್ದಿನ ಮಗಳು ಕು. ಇಷಿತಾ ಬಹುಮುಖ ಪ್ರತಿಭೆ. ಅವಳಿಗೆ ನೃತ್ಯ ಬಾಲ್ಯದ ಒಲವು. ಅವಳ ಆಸಕ್ತಿಗೆ ಪ್ರೋತ್ಸಾಹ ನೀಡಿದ ಹೆತ್ತವರು ಅವಳನ್ನು ಭರತನಾಟ್ಯ ಕಲಿಯಲು ಶ್ರೀಮತಿ ಅಭಿನಯಾ ಅವರ ಬಳಿ ಸೇರಿಸಿದರು. ಕಳೆದ 8 ವರ್ಷಗಳಿಂದ ಬಹು ಬದ್ಧತೆಯಿಂದ ನೃತ್ಯ ಕಲಿಸುತ್ತಿರುವ ಗುರು ಅಭಿನಯ ಅವರ ಉತ್ತಮ ತರಬೇತಿಯಲ್ಲಿ ಇಷಿತಾ ಬಹು ಆಸಕ್ತಿಯಿಂದ ಕಲಿಯುತ್ತ ನೃತ್ಯಗಾರ್ತಿಯಾಗಿ ರೂಪುಗೊಳ್ಳುತ್ತಿದ್ದಾಳೆ.

ಶ್ರೀ ಚೈತನ್ಯ ಟೆಕ್ನೋ ಶಾಲೆಯಲ್ಲಿ 8 ನೆಯ ತರಗತಿಯಲ್ಲಿ ಓದುತ್ತಿರುವ ಇಷಿತಾ ಓದಿನಲ್ಲಿ ಜಾಣೆ. ಪುಸ್ತಕಗಳ ಓದಿನಲ್ಲಿ ಅದಮ್ಯ ಆಸಕ್ತಿ. ಕರಾಟೆಯಲ್ಲಿ ಪರ್ಪಲ್ ಬೆಲ್ಟ್ ಗಳಿಸಿರುವ, ಜೊತೆಗೆ ಶ್ರೀ ಅರವಿಂದ್ ಚಂದ್ರಶೇಖರನ್ ಅವರಲ್ಲಿ ವೀಣಾವಾದನವನ್ನೂ ಕಲಿಯುತ್ತ, ಚಿತ್ರರಚನೆಯಲ್ಲೂ ತೊಡಗಿಕೊಂಡಿರುವ ಬಹುಮುಖ ಪ್ರತಿಭೆ ಎಂದರೆ ಅತಿಶಯೋಕ್ತಿಯಲ್ಲ. ಈಗಾಗಲೇ ಇವಳು ದೇಶದ ಅನೇಕ ರಾಜ್ಯಗಳ ದೇವಾಲಯಗಳಲ್ಲಿ ನೃತ್ಯ ಪ್ರದರ್ಶನ ನೀಡಿರುವುದು ಇವಳ ವಿಶೇಷ.

**। ವೈ.ಕೆ.ಸಂಧ್ಯಾ ಶರ್ಮ**

## ಪಾದಗಳ ಮಾಸಾಜ್‌ಗೆ ಟಿಪ್ಸ್

### ಬ್ಯೂಟಿ ಟಿಪ್ಸ್



ಹಿಮ್ಮಡಿ ಒಡಕುಗಳಿಗೆ ಮಾಗಿದ ಬಾಳೆ ಹಣ್ಣಿನ ಬಳಕೆ ಮಾಡಬಹುದು. ವಾರದಲ್ಲಿ ಎರಡು ಬಾರಿ ಉಪಯೋಗಿಸುವುದರಿಂದ ಅತ್ಯಂತ ವೇಗವಾಗಿ ಒಳ್ಳೆಯ ಫಲಿತಾಂಶ ಕಾಣಬಹುದು.

ಮೊದಲಿಗೆ 1 ಮಾಗಿದ ಬಾಳೆ ಹಣ್ಣನ್ನು ತೆಗೆದುಕೊಂಡು ಅದನ್ನು ಚೆನ್ನಾಗಿ ಕಿವುಚಿ. 2 ಟೀ ಸ್ಪೂನ್ ಜೇನು ತುಪ್ಪವನ್ನು ಕಿವುಚಿದ ಬಾಳೆ ಹಣ್ಣಿಗೆ ಮಿಶ್ರಣ ಮಾಡಿ ಹೀಗೆ ತಯಾರಾದ ಬಾಳೆ ಹಣ್ಣು ಮತ್ತು ಜೇನು ತುಪ್ಪದ ಪೇಸ್ಟ್ ಅನ್ನು ನಿಮ್ಮ ಅಂಗಾಲು ಮತ್ತು ಹಿಮ್ಮಡಿಗಳ ಮೇಲೆ ಹಚ್ಚಿ ಮಸಾಜ್ ಮಾಡಿ. ಸುಮಾರು 20ರಿಂದ 30 ನಿಮಿಷಗಳು ಇದನ್ನು ಒಣಗಲು ಬಿಡಬೇಕು. ನಂತರ ಉಗುರು ಬೆಚ್ಚಗಿನ ನೀರಿನಲ್ಲಿ ಕಾಲುಗಳನ್ನು ತೊಳೆದುಕೊಳ್ಳಿ. ಬಾಳೆ ಹಣ್ಣು ಮತ್ತು ಜೇನು ತುಪ್ಪ ಎರಡರಲ್ಲೂ ನೈಸರ್ಗಿಕವಾದ ಮಾಯಿಶ್ಚರೈಸಿಂಗ್ ಗುಣ ಲಕ್ಷಣಗಳು ಅಡಗಿವೆ. ಇವು ಚರ್ಮದ ಮೇಲೆ ಅತ್ಯಂತ ಕೋಮಲವಾದ ವಾತಾವರಣವನ್ನು ನಿರ್ಮಾಣ ಮಾಡುತ್ತವೆ. ಜೇನು ತುಪ್ಪ ತನ್ನಲ್ಲಿ ಆಂಟಿ – ಬ್ಯಾಕ್ಟೀರಿಯಲ್ ಗುಣ ಲಕ್ಷಣಗಳನ್ನು ಹೊಂದಿದ್ದು, ಚರ್ಮದ ಮೇಲೆ ಒಂದು ಗಾಯದಿಂದ ಉಂಟಾಗುವ ಸೋಂಕನ್ನು ಇದು ತಡೆಗಟ್ಟುತ್ತದೆ ಮತ್ತು ಹಿಮ್ಮಡಿಯ ಒಡಕನ್ನು ದೂರ ಮಾಡುತ್ತದೆ.

ಆಯುರ್ವೇದ ಪದ್ಧತಿಯಲ್ಲಿ ಸ್ವಲ್ಪ ಪರಿಚಯ ಹೊಂದಿದವರಿಗೆ ಗಿಡಮೂಲಿಕೆಗಳನ್ನು ಬಳಕೆ ಮಾಡಿಕೊಂಡು ಪಾದಗಳಿಗೆ ಮಸಾಜ್ ಮಾಡುವ ಮೂಲಕ ಸಮಸ್ಯೆಗಳನ್ನು ಹೇಗೆ ಹೋಗಲಾಡಿಸಿ ಕೊಳ್ಳಬೇಕು ಎಂಬುದರ ಬಗ್ಗೆ ಅರಿವಿರುತ್ತದೆ. ಅಂಗಾಲು ಗಳಿಗೆ ಮತ್ತು ಹಿಮ್ಮಡಿಗೆ ಮಸಾಜ್ ಮಾಡುವ ಪ್ರಕ್ರಿಯೆಯಿಂದ ಮಾನಸಿಕ ಒತ್ತಡ, ಮಾನಸಿಕ ಆತಂಕ, ಕಣ್ಣಿನ ದೃಷ್ಟಿ ಸಮಸ್ಯೆ, ನಿದ್ರಾಹೀನತೆ ಮತ್ತು ಇನ್ನು ಕೆಲವು ಬೇರೆ ಆರೋಗ್ಯ ಸಮಸ್ಯೆಗಳು ಪರಿಹಾರವಾಗುತ್ತವೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಕೆಲಸ ಕಾರ್ಯಗಳಲ್ಲಿ ಹಿನ್ನಡೆ, ನಾನಾ ರೀತಿಯ ಸಂಕಷ್ಟ, ಅಲ್ಪ ಪ್ರಗತಿ, ಮನಕ್ಲೇಶ,ಆರೋಗ್ಯದಲ್ಲಿ ವ್ಯತ್ಯಾಸ

**ವೃಷಭ:** ಅವಕಾಶಗಳು ಕೈ ತಪ್ಪುವುದು, ಕೃಷಿಯಲ್ಲಿ ಲಾಭ, ಕುಟುಂಬ ಸೌಖ್ಯ, ದಾಯಾದಿಗಳ ಪ್ರೀತಿ, ಅನಾರೋಗ್ಯ.

**ಮಿಥುನ:** ಮಕ್ಕಳ ಭಾವನೆಗಳಿಗೆ ಸ್ಪಂದಿಸಿ, ಅನ್ಯರಿಗೆ ಉಪಕಾರ ಮಾಡುವಿರಿ, ವಿವೇಚನೆ ಕಳೆದುಕೊಳ್ಳಬೇಡಿ.

**ಕಟಕ:** ಅಮೂಲ್ಯ ವಸ್ತುಗಳ ಖರೀದಿ, ಆತ್ಮೀಯರಲ್ಲಿ ವಿರೋಧ, ಋಣ ಭಾದೆ, ಮಾತಿನಿಂದ ಅನರ್ಥ.

**ಸಿಂಹ:** ಯತ್ನ ಕಾರ್ಯಗಳಲ್ಲಿ ವಿಳಂಬ, ಆಲಸ್ಯ ಮನೋಭಾವ, ಹಿತ ಶತ್ರು ಭಾದೆ, ನಂಬಿಕಸ್ತರಿಂದ ಅಶಾಂತಿ, ವಿಪರೀತ ವ್ಯಸನ.

**ಕನ್ಯಾ:** ಹಿರಿಯರಿಂದ ಹಿತವಚನ, ವ್ಯಾಪಾರದಲ್ಲಿ ಲಾಭ, ಕುಟುಂಬದಲ್ಲಿ ನೆಮ್ಮದಿ, ಆರ್ಥಿಕ ಪರಿಸ್ಥಿತಿ ಚೇತರಿಕೆ.

**ತುಲಾ:** ಉದ್ಯೋಗದಲ್ಲಿ ಬಡ್ತಿ, ಆತ್ಮೀಯರಲ್ಲಿ ಪ್ರೀತಿ, ಸಲ್ಲದ ಅಪವಾದ, ಪರಸ್ತ್ರೀಯಿಂದ ದೂರವಿರಿ.

**ವೃಶ್ಚಿಕ:** ಪ್ರಯತ್ನದಿಂದ ಕಾರ್ಯ ಸಫಲ, ಸಕಾಲಕ್ಕೆ ಭೋಜನ ಇಲ್ಲದಿರುವಿಕೆ, ಋಣ ಭಾದೆ.

**ಧನಸ್ಸು:** ಆದಾಯಕ್ಕಿಂತ ಖರ್ಚು ಜಾಸ್ತಿ, ವಿದ್ಯಾಭ್ಯಾಸದಲ್ಲಿ ಪ್ರಗತಿ, ಹಣಕಾಸಿನ ವಿಚಾರದಲ್ಲಿ ಎಚ್ಚರ, ಕೋಪ ಜಾಸ್ತಿ.

**ಮಕರ:** ಆಕಸ್ಮಿಕ ಧನ ಲಾಭ, ಮಾನಸಿಕ ನೆಮ್ಮದಿ, ಗುರು ಹಿರಿಯರಲ್ಲಿ ಭಕ್ತಿ, ಮಾತಿನ ಮೇಲೆ ಹಿಡಿತವಿರಲಿ.

**ಕುಂಭ:** ಬದುಕಿಗೆ ಉತ್ತಮ ತಿರುವು, ಪ್ರೀತಿ ಪಾತ್ರರೊಡನೆ ಬಾಂಧವ್ಯ, ಸರ್ಕಾರಿ ಅಧಿಕಾರಿಗಳಿಗೆ ಒತ್ತಡ.

**ಮೀನ:** ಸ್ವಲ್ಪ ಹಣ ಬಂದರೂ ಉಳಿಯುವುದಿಲ್ಲ, ವಾಹನದಿಂದ ತೊಂದರೆ, ಆರೋಗ್ಯದ ಬಗ್ಗೆ ಕಾಳಜಿ ವಹಿಸಿ, ಶತ್ರು ಭಾದೆ.

## ಕ್ರಿಸ್ಮಸ್ ಸಂಭ್ರಮ



ಕ್ರಿಸ್ಮಸ್ ಹಬ್ಬವು ಕ್ರೈಸ್ತ ಧರ್ಮೀಯರು ಆಚರಿಸುವ ಪ್ರಮುಖ ಹಬ್ಬಗಳಲ್ಲಿ ಒಂದಾಗಿದೆ. ಇದನ್ನು ಪ್ರತಿ ವರ್ಷ ಡಿಸೆಂಬರ್ 25 ರಂದು ಕ್ರಿಸ್ಮಸ್ ದಿನವಾಗಿ ಆಚರಿಸಲಾಗುತ್ತದೆ. ಕ್ರಿಸ್ಮಸ್ನ ಸಂಭ್ರಮವು ಒಂದು ದಿನ ಮುಂಚಿತವಾಗಿ ಅಂದರೆ ಡಿಸೆಂಬರ್ 24 ರಿಂದ ಪ್ರಾರಂಭವಾಗುತ್ತದೆ. ಕ್ರಿಶ್ಚಿಯನ್ ಧರ್ಮದ ಜನರು ಈ ದಿನವನ್ನು ಯೇಸುಕ್ರಿಸ್ತನ ಜನ್ಮದಿನವೆಂದು ಆಚರಿಸುತ್ತಾರೆ. ಭಾರತದಲ್ಲಿಯೂ ಕ್ರಿಶ್ಚಿಯನ್ ಧರ್ಮದ ಜೊತೆಗೆ ಎಲ್ಲಾ ಧರ್ಮದ ಜನರು ಕ್ರಿಸ್ಮಸ್ ಹಬ್ಬವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸುತ್ತಾರೆ.

ಕ್ರಿಶ್ಚಿಯನ್ ಧರ್ಮದ ಜನರು ಕ್ರಿಸ್ಮಸ್ ಹಬ್ಬವನ್ನು ಕ್ರಿಸ್ಮಸ್ಗೆ ಒಂದು ದಿನ ಮೊದಲು ಅಂದರೆ ಡಿಸೆಂಬರ್ 24 ರಿಂದ ಆಚರಿಸುತ್ತಾರೆ. ಡಿಸೆಂಬರ್ 24 ರ ಮಧ್ಯರಾತ್ರಿ, ಜನರು ಚರ್ಚ್ಗೆ ಹೋಗುತ್ತಾರೆ ಮತ್ತು ಅಲ್ಲಿ ವಿಶೇಷ ಪೂಜೆಯನ್ನು ಮಾಡಲಾಗುತ್ತದೆ. ಕ್ರಿಶ್ಚಿಯನ್ ಧರ್ಮದ ಜನರು ತಮ್ಮ ದೇವನಾದ ಯೇಸು ಕ್ರಿಸ್ತನನ್ನು ಈ ದಿನ ನೆನೆಯುತ್ತಾರೆ. ನಂತರ ಕ್ರಿಸ್ಮಸ್ ಹಬ್ಬದ ದಿನದಂದು ಪರಸ್ಪರ ಅಭಿನಂದಿಸಿ ಮತ್ತು ಉಡುಗೊರೆಗಳನ್ನು ವಿತರಿಸುತ್ತಾರೆ. ಒಂದು ಕಾಲದಲ್ಲಿ ಕ್ರಿಸ್ಮಸ್ ಹಬ್ಬವನ್ನು ಪಾಶ್ಚಿಮಾತ್ಯ ದೇಶಗಳಲ್ಲಿ ಮತ್ತು ಕ್ರೈಸ್ತರ ಪ್ರಾಬಲ್ಯವಿರುವ ಪ್ರದೇಶಗಳಲ್ಲಿ ಮಾತ್ರ ಆಚರಿಸಲಾಗುತ್ತಿತ್ತು. ಆದರೆ ಇಂದು ಪ್ರಪಂಚದಾದ್ಯಂತ ಆಚರಿಸುವ ಹಬ್ಬವಾಗಿ ಇದು ಮಾರ್ಪಟ್ಟಿದೆ. ಜನರನ್ನು ಪಾಪದಿಂದ ಮುಕ್ತಗೊಳಿಸಲು ಮತ್ತು ಜನರಿಗೆ ಒಳಿತನ್ನು ಮಾಡಲು ದೇವರು ತನ್ನ ಮಗನನ್ನು ಭೂಮಿಗೆ ಕಳುಹಿಸಿದನು ಮತ್ತು ಜನರನ್ನು ಪಾಪದಿಂದ ಮುಕ್ತಗೊಳಿಸುವ ಹೋರಾಟದಲ್ಲಿ ಯೇಸು ಕ್ರಿಸ್ತನು ತನ್ನ ಪ್ರಾಣವನ್ನು ತ್ಯಾಗ ಮಾಡಿದನು ಎಂಬ ನಂಬಿಕೆ ಕ್ರಿಸ್ಮಸ್ ಹಬ್ಬದ ಕುರಿತು ಇದೆ.ಕ್ರಿಸ್ಮಸ್ನ ಇತಿಹಾಸವು ಕೇವಲ ಕೆಲವು ವರ್ಷಗಳಷ್ಟು ಹಳೆಯದಲ್ಲ, ಆದರೆ ಈ ಆಚರಣೆಯು ಹಲವು ಶತಮಾನಗಳ ಹಿಂದಿನದು. ಕ್ರಿಸ್ಮಸ್ ಅನ್ನು ಮೊದಲು ರೋಮ್ ದೇಶದಲ್ಲಿ ಆಚರಿಸಲಾಯಿತು ಎಂದು ಹೇಳಲಾಗುತ್ತದೆ. ಆದರೆ ಕ್ರಿಸ್ಮಸ್ಗೆ ಮುನ್ನ ರೋಮ್ನಲ್ಲಿ ಡಿಸೆಂಬರ್ 25 ರ ದಿನವನ್ನು ಸೂರ್ಯ ದೇವರ ಜನ್ಮದಿನವಾಗಿ ಆಚರಿಸಲಾಯಿತು. ಆ ಸಮಯದಲ್ಲಿ, ರೋಮ್ನ ಚಕ್ರವರ್ತಿಗಳು ಸೂರ್ಯದೇವನನ್ನು ತಮ್ಮ ಮುಖ್ಯ ದೇವತೆಯಾಗಿ ಪರಿಗಣಿಸುತ್ತಿದ್ದರು ಮತ್ತು ಸೂರ್ಯದೇವನನ್ನು ಪೂಜಿಸುತ್ತಿದ್ದರು.

ಆದರೆ ಕ್ರಿ.ಶ. 330 ರ ಹೊತ್ತಿಗೆ, ರೋಮ್ನಲ್ಲಿ ಕ್ರಿಶ್ಚಿಯನ್ ಧರ್ಮದ ಪ್ರಚಾರವು ವೇಗವಾಗಿ ಬೆಳೆಯಲು ಪ್ರಾರಂಭಿಸಿತು. ರೋಮ್ನಲ್ಲಿ ಕ್ರೈಸ್ತ ಧರ್ಮದ ಅನುಯಾಯಿಗಳ ಸಂಖ್ಯೆ ಹೆಚ್ಚಾಯಿತು. ಇದಾದ ನಂತರ ಕ್ರಿ.ಶ.336ರಲ್ಲಿ ಕ್ರೈಸ್ತ ಧರ್ಮದ ಅನುಯಾಯಿಗಳು ಯೇಸುಕ್ರಿಸ್ತನನ್ನು ಸೂರ್ಯದೇವನ ಅವತಾರವೆಂದು ಒಪ್ಪಿಕೊಂಡರು ಮತ್ತು ಅಂದಿನಿಂದ ಕ್ರಿಸ್ಮಸ್ ಹಬ್ಬವನ್ನು ಯೇಸುಕ್ರಿಸ್ತನ ಜನ್ಮದಿನವಾಗಿ ಆಚರಿಸುವ ಸಂಪ್ರದಾಯವು ಡಿಸೆಂಬರ್ 25 ರಂದು ಪ್ರಾರಂಭವಾಯಿತು.



## ಪ್ಯಾರಿಸ್‌ನ ಐಫೆಲ್ ಟವರ್‌ನಲ್ಲಿ ಅಗ್ನಿ ಅವಘಡ

**ಪ್ಯಾರಿಸ್:** ಕ್ರಿಸ್ಮಸ್ ಮುನ್ನಾದಿನದಂದು ಪ್ಯಾರಿಸ್ನ ಐಫೆಲ್ ಟವರ್ನ ಮೊದಲ ಮತ್ತು ಎರಡನೇ ಮಹಡಿಗಳ ನಡುವೆ ಬೆಂಕಿ ಕಾಣಿಸಿಕೊಂಡ ನಂತರ ಅದನ್ನು ಸ್ಥಳಾಂತರಿಸಲಾಗಿದೆ ಎಂದು ಮಾಧ್ಯಮ ವರದಿಗಳು ತಿಳಿಸಿವೆ.

ಅಗ್ನಿಶಾಮಕ ದಳದವರು ಪರಿಸ್ಥಿತಿಗೆ ಸ್ಪಂದಿಸಿದ್ದರಿಂದ ಸುಮಾರು 1,200 ಪ್ರವಾಸಿಗರನ್ನು ಐಫೆಲ್ ಟವರ್ ನಿಂದ ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದೆ.

ಏತನ್ಮಧ್ಯೆ, ಬೆಂಕಿಯನ್ನು ನಿಯಂತ್ರಿಸಲು ಮತ್ತು ಸಾರ್ವಜನಿಕ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ತುರ್ತು ಸೇವೆಗಳನ್ನು ತ್ವರಿತವಾಗಿ ನಿಯೋಜಿಸಲಾಯಿತು. ವಿಶೇಷವೆಂದರೆ, ಐಫೆಲ್ ಟವರ್ ಪ್ಯಾರಿಸ್ನ ಅತ್ಯಂತ ಅಪ್ರತಿಮ ಹೆಗ್ಗುರುತುಗಳಲ್ಲಿ ಒಂದಾಗಿದೆ ಮತ್ತು ಪ್ರವಾಸಿಗರಿಗೆ ವಿಶ್ವದ ಅತ್ಯಂತ ಜನಪ್ರಿಯ ಪ್ರವಾಸಿ ತಾಣಗಳಲ್ಲಿ ಒಂದಾಗಿದೆ.

## ಕರಾಚಿ-ಲಾಹೋರ್‌ನಲ್ಲಿ ಶೀತಗಾಳಿ



**ಕರಾಚಿ:** ಪಾಕಿಸ್ತಾನದ ಆರ್ಥಿಕ ರಾಜಧಾನಿ ಕರಾಚಿಯಲ್ಲಿ ಶೀತಗಾಳಿ ಬೀಸುತ್ತಿದ್ದು, ಆತಂಕದ ಮಟ್ಟದಲ್ಲಿ ವಾಯುಮಾಲಿನ್ಯ ಉಂಟಾಗಿದೆ. ಕರಾಚಿಯಲ್ಲಿ 9.5 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದ್ದು, ನಗರದ ವಾಯು ಗುಣಮಟ್ಟ ಸೂಚ್ಯಂಕ (ಎಕ್ಯೂಐ) 199 ರಷ್ಟಿದ್ದು, ಸ್ವಿಸ್ ವಾಯು ಗುಣಮಟ್ಟ ಮಾನಿಟರ್ ಐಕ್ಯೂಏರ್ ಇದನ್ನು ಅನಾರೋಗ್ಯಕರ ಎಂದು ಹೇಳಿದೆ.

ಜಿಯೋ ನ್ಯೂಸ್ ಪ್ರಕಾರ, ಕರಾಚಿ ಮತ್ತು ಲಾಹೋರ್ ಸೇರಿದಂತೆ ಪಾಕಿಸ್ತಾನದ ಪ್ರಮುಖ ನಗರಗಳಲ್ಲಿ ಶೀತಗಾಳಿ ಬೀಸುತ್ತಿದ್ದು ಈ ನಗರಗಳಲ್ಲಿ ದಟ್ಟ ಹೊಗೆಭರಿತ ಮಂಜು ಆವರಿಸಿಕೊಂಡಿದೆ.

ಶೀತಗಾಳಿಯ ಮಧ್ಯೆ ಅನೇಕ ಪ್ರದೇಶಗಳಲ್ಲಿ ತಾಪಮಾನವು ಒಂದಂಕಿಗೆ ಇಳಿಕೆಯಾಗಿರುವುದು ಸಮಸ್ಯೆಯನ್ನು ಇನ್ನಷ್ಟು ಜಟಿಲಗೊಳಿಸಿದೆ. ವಾಯುವ್ಯದಿಂದ ಗಂಟೆಗೆ 8 ಕಿ.ಮೀ ವೇಗದಲ್ಲಿ ಗಾಳಿ ಬೀಸುತ್ತಿದ್ದು, ಆರ್ದ್ರತೆಯು ಶೇಕಡಾ 41 ರಷ್ಟಿದೆ. ಕರಾಚಿಯಲ್ಲಿ ಈ ತಿಂಗಳಲ್ಲಿ ಎರಡನೇ ಬಾರಿಗೆ ತಾಪಮಾನವು 10 ಡಿಗ್ರಿ ಸೆಲ್ಸಿಯಸ್ ಗಿಂತ ಕಡಿಮೆಯಾಗಿದೆ. ಆಗ್ನೇಯ ಸಿಂಧ್ನಲ್ಲಿ ತಾಪಮಾನವು 3 ಡಿಗ್ರಿ ಸೆಲ್ಸಿಯಸ್ನಿಂದ 4 ಡಿಗ್ರಿ ಸೆಲ್ಸಿಯಸ್ಗೆ ಇಳಿಯಲಿದೆ ಎಂದು ಪಾಕಿಸ್ತಾನ ಹವಾಮಾನ ಇಲಾಖೆ (ಪಿಎಂಡಿ) ಈ ಹಿಂದೆ ಮುನ್ಸೂಚನೆ ನೀಡಿತ್ತು. ಈಗಾಗಲೇ ವಾರಗಳಿಂದ ನಿರಂತರ ಮಂಜು ಹೊಗೆಯಿಂದ ಆವೃತವಾಗಿರುವ ಲಾಹೋರ್, 303 ಎಕ್ಯೂಐನೊಂದಿಗೆ ವಿಶ್ವದ ಎರಡನೇ ಅತ್ಯಂತ ಕಲುಷಿತ ನಗರವಾಗಿದೆ. ಈ ಮಟ್ಟವನ್ನು ಐಕ್ಯೂಏರ್ ಅಪಾಯಕಾರಿ ಎಂದು ವರ್ಗೀಕರಿಸಿದೆ. ಲಾಹೋರ್ನಲ್ಲಿ ವಾಯುಮಾಲಿನ್ಯದಿಂದ ಜನ ತೀವ್ರ ಆರೋಗ್ಯ ಸಮಸ್ಯೆಗಳಿಂದ ಬಳಲುವಂತಾಗಿದೆ. ಇತರ ಪ್ರದೇಶಗಳ ಪೈಕಿ ಬಲೂಚಿಸ್ತಾನ್ ಮತ್ತು ಖೈಬರ್ ಪಖ್ತುನಖ್ವಾಗಳಲ್ಲಿ ತಾಪಮಾನ ಅಸಹಜ ಕಡಿಮೆ ಮಟ್ಟಕ್ಕಿಳಿದಿದೆ. ಬಲೂಚಿಸ್ತಾನದ ರಾಜಧಾನಿ ಕ್ವೆಟ್ಟಾದಲ್ಲಿ ಮೈನಸ್ 4 ಡಿಗ್ರಿ ಸೆಲ್ಸಿಯಸ್ಗೆ ಇಳಿದಿದೆ. ಕಲಾತ್ ಮತ್ತು ತುರ್ಬತ್ನಂಥ ಇತರ ನಗರಗಳಲ್ಲಿಯೂ ತಾಪಮಾನ ಕಡಿಮೆಯಾಗಿದೆ.

## ಪದಚ್ಯುತ ಶೇಖ್ ಹಸೀನಾರನ್ನು ಹಸ್ತಾಂತರಿಸಲು ಕೋರಿಕೆ

**ಢಾಕಾ(ಬಾಂಗ್ಲಾದೇಶ):** ನಾಗರಿಕ ದಂಗೆಯಿಂದ ಅಧಿಕಾರ ಕಳೆದುಕೊಂಡು ದೇಶದಿಂದ ಪಲಾಯನ ಮಾಡಿ ಭಾರತದಲ್ಲಿ ಆಶ್ರಯ ಪಡೆದಿರುವ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರನ್ನು ತಮಗೆ ಹಸ್ತಾಂತರಿಸಬೇಕು ಎಂದು ಬಾಂಗ್ಲಾದೇಶದ ಮಧ್ಯಂತರ ಸರ್ಕಾರ ಸೋಮವಾರ ಕೋರಿದೆ. ಭಾರತದ ರಾಜತಾಂತ್ರಿಕ ಅಧಿಕಾರಿಗಳಿಗೆ ಟಿಪ್ಪಣಿ ಬರೆದಿರುವ ಮೊಹಮದ್ ಯೂನುಸ್ ಅವರ ಮಧ್ಯಂತರ ಸರ್ಕಾರ, ಶೇಖ್ ಹಸೀನಾ ಅವರನ್ನು ದೇಶಕ್ಕೆ ಮರಳಿಸಬೇಕು ಎಂದು ತಿಳಿಸಿದೆ. ಈ ಬಗ್ಗೆ ಸುದ್ದಿಗಾರರಿಗೆ ಮಾಹಿತಿ ನೀಡಿರುವ ಬಾಂಗ್ಲಾ ವಿದೇಶಾಂಗ ವ್ಯವಹಾರಗಳ ಸಲಹೆಗಾರ ತೌಹಿದ್ ಹುಸೇನ್, ಮಾಜಿ ಪ್ರಧಾನಿಗಳ ಮೇಲೆ ಇರುವ ಆರೋಪಗಳನ್ನು ವಿಚಾರಣೆ ನಡೆಸಬೇಕಿದೆ. ಹೀಗಾಗಿ ಅವರನ್ನು ಢಾಕಾಗೆ ಹಿಂತಿರುಗಿಸಬೇಕು ಎಂದು ಭಾರತ ಸರ್ಕಾರಕ್ಕೆ (ರಾಜತಾಂತ್ರಿಕ ಟಿಪ್ಪಣಿ) ಮನವಿ ಮಾಡಲಾಗಿದೆ ಎಂದರು. ಇದಕ್ಕೂ ಮುನ್ನ ಅಲ್ಲಿನ ಗೃಹ ಇಲಾಖೆಯ ಸಲಹೆಗಾರ ಜಹಾಂಗೀರ್ ಆಲಂ, ಪದಚ್ಯುತ ಪ್ರಧಾನಿ ಹಸೀನಾರನ್ನು ಭಾರತದಿಂದ ಹೊರಹಾಕುವಂತೆ ಕ್ರಮ ಕೈಗೊಳ್ಳಲು ವಿದೇಶಾಂಗ ಸಚಿವಾಲಯಕ್ಕೆ ಪತ್ರ ಬರೆಯಲಾಗಿದೆ ಎಂದು ತಿಳಿಸಿದ್ದರು. ಹಸೀನಾರನ್ನು ಕರೆತರುವ ಕುರಿತು ವಿದೇಶಾಂಗ ಸಚಿವಾಲಯಕ್ಕೆ ಮನವಿ ಮಾಡಿದ್ದೇವೆ. ಸದ್ಯ ಆ ಪ್ರಕ್ರಿಯೆ ಜಾರಿಯಲ್ಲಿದೆ. ಢಾಕಾ ಮತ್ತು ನವದೆಹಲಿ ನಡುವೆ ಹಸ್ತಾಂತರ ಒಪ್ಪಂದ ಅಸ್ತಿತ್ವದಲ್ಲಿದೆ. ಇದರ ಅಡಿಯಲ್ಲಿ ಮಾಜಿ ಪ್ರಧಾನಿಯನ್ನು ಬಾಂಗ್ಲಾದೇಶಕ್ಕೆ ಮರಳಿ ಕರೆ ತರಬಹುದು ಎಂದು ಆಲಂ ವಿಶ್ವಾಸ ವ್ಯಕ್ತಪಡಿಸಿದ್ದಾರೆ.



## ಮಣಿಪುರದ ರಾಜ್ಯಪಾಲರಾಗಿ ಅಜಯ್ ಕುಮಾರ್ ಭಲ್ಲಾ ನೇಮಕ!



**ನವದೆಹಲಿ:** ಮಾಜಿ ಸೇನಾ ಮುಖ್ಯಸ್ಥ ಜನರಲ್ ವಿಜಯ್ ಕುಮಾರ್ ಸಿಂಗ್ ಅವರನ್ನು ಮಿಜೋರಾಂನ ನೂತನ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ಕೇರಳ ರಾಜ್ಯಪಾಲ ಆರಿಫ್ ಮೊಹಮ್ಮದ್ ಖಾನ್ ಅವರನ್ನು ಬಿಹಾರದ ನೂತನ ರಾಜ್ಯಪಾಲರನ್ನಾಗಿ ಮಾಡಲಾಗಿದೆ. ಕೇಂದ್ರದ ಮಾಜಿ ಗೃಹ ಕಾರ್ಯದರ್ಶಿ ಅಜಯ್ ಕುಮಾರ್ ಭಲ್ಲಾ ಅವರನ್ನು ಮಣಿಪುರದ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ರಾಷ್ಟ್ರಪತಿ ಭವನದಿಂದ ಈ ನೇಮಕಾತಿಯನ್ನು ಹೊರಡಿಸಲಾಗಿದೆ.

ಒಡಿಶಾ ರಾಜ್ಯಪಾಲ ರಘುಬರ್ ದಾಸ್ ಅವರ ರಾಜೀನಾಮೆಯನ್ನು ರಾಷ್ಟ್ರಪತಿ ಅಂಗೀಕರಿಸಿದ್ದಾರೆ. ಡಾ ಹರಿ ಬಾಬು ಕಂಬಂಪತಿ ಅವರನ್ನು ಮಿಜೋರಾಂ ರಾಜ್ಯಪಾಲರಿಂದ ಒಡಿಶಾ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ.

ಜನರಲ್ (ಡಾ) ವಿಜಯ್ ಕುಮಾರ್ ಸಿಂಗ್, VSM, AVSM, YSM(ನಿವೃತ್ತ) ಅವರನ್ನು ಮಿಜೋರಾಂನ ಹೊಸ ಗವರ್ನರ್ ಆಗಿ ನೇಮಿಸಲಾಗಿದೆ. ಬಿಹಾರ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರನ್ನು ಕೇರಳದ ನೂತನ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ.

ಆರಿಫ್ ಮೊಹಮ್ಮದ್ ಖಾನ್ ಅವರನ್ನು ಕೇರಳದ ರಾಜ್ಯಪಾಲರಿಂದ ಬಿಹಾರದ ರಾಜ್ಯಪಾಲರನ್ನಾಗಿ ನೇಮಿಸಲಾಯಿತು. ಅಜಯ್ ಕುಮಾರ್ ಭಲ್ಲಾ ಅವರನ್ನು ಮಣಿಪುರದ ರಾಜ್ಯಪಾಲರನ್ನಾಗಿ ನೇಮಿಸಲಾಯಿತು. ಮೇಲಿನ ಎಲ್ಲಾ ನೇಮಕಾತಿಗಳು ಈ ಹೊಸ ಗವರ್ನರ್ಗಳು ತಮ್ಮ ತಮ್ಮ ಕಚೇರಿಗಳ ಪ್ರಭಾರವನ್ನು ವಹಿಸಿಕೊಳ್ಳುವ ದಿನಾಂಕದಿಂದ ಜಾರಿಗೆ ಬರುತ್ತವೆ.

ಅಜಯ್ ಕುಮಾರ್ ಭಲ್ಲಾ ಅವರು ಹಿರಿಯ ಭಾರತೀಯ ಆಡಳಿತ ಸೇವೆಯ ಅಧಿಕಾರಿಯಾಗಿದ್ದು, ಅವರು ಕೇಂದ್ರ ಗೃಹ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದಾರೆ. ಅವರು ತಮ್ಮ ಸೇವೆಗಳ ಅವಧಿಯಲ್ಲಿ ವಿವಿಧ ಪ್ರಮುಖ ಸ್ಥಾನಗಳನ್ನು ಹೊಂದಿದ್ದಾರೆ ಮತ್ತು ಆಡಳಿತಾತ್ಮಕ ಸುಧಾರಣೆಗಳಲ್ಲಿ ಅವರ ಕೊಡುಗೆ ಮತ್ತು ದಕ್ಷತೆಗಾಗಿ ಗುರುತಿಸಲ್ಪಟ್ಟಿದ್ದಾರೆ. ಅವರ ವೃತ್ತಿಜೀವನವು ಮುಖ್ಯವಾಗಿ ಗೃಹ ಸಚಿವಾಲಯಕ್ಕೆ ಸಂಬಂಧಿಸಿದೆ ಮತ್ತು ಅವರ ಅನುಭವದಿಂದಾಗಿ ಅವರು ಹಲವಾರು ಬಾರಿ ಸೇವೆಯಲ್ಲಿ ವಿಸ್ತರಣೆಯನ್ನು ಪಡೆದಿದ್ದರು.

## ಲೈಂಗಿಕ ದೌರ್ಜನ್ಯ, ಅತ್ಯಾಚಾರ, ಆಸಿಡ್ ದಾಳಿ ಸಂತ್ರಸ್ತರಿಗೆ ಉಚಿತ ಚಿಕಿತ್ಸೆ ನಿರಾಕರಿಸುವಂತಿಲ್ಲ: ದೆಹಲಿ ಹೈಕೋರ್ಟ್




**ನವದೆಹಲಿ:** ಸರ್ಕಾರಿ, ಖಾಸಗಿ ಆಸ್ಪತ್ರೆಗಳು ಮತ್ತು ನರ್ಸಿಂಗ್ ಹೋಂಗಳು ಅತ್ಯಾಚಾರ, ಆಸಿಡ್ ದಾಳಿ ಮತ್ತು ಲೈಂಗಿಕ ದೌರ್ಜನ್ಯದಿಂದ ಬದುಕುಳಿದವರಿಗೆ ಉಚಿತ ವೈದ್ಯಕೀಯ ಚಿಕಿತ್ಸೆ ನಿರಾಕರಿಸುವಂತಿಲ್ಲ, ಲೈಂಗಿಕ ದೌರ್ಜನ್ಯಕ್ಕೊಳಗಾದವರಿಗೆ ಚಿಕಿತ್ಸೆ ನಿರಾಕರಿಸುವುದು ಅಪರಾಧವಾಗಿದ್ದು, ಆಸ್ಪತ್ರೆಯ ವೈದ್ಯರು, ಸಿಬ್ಬಂದಿ ಮತ್ತು ಆಡಳಿತ ಮಂಡಳಿಗೆ ದಂಡ ವಿಧಿಸಬಹುದು ಎಂದು ದೆಹಲಿ ಹೈಕೋರ್ಟ್ ಮಹತ್ವದ ಆದೇಶ ನೀಡಿದೆ.

16 ವರ್ಷದ ಬಾಲಕಿಯ ಮೇಲೆ ಆಕೆಯ ತಂದೆಯೇ ಅತ್ಯಾಚಾರ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆ ನಡೆಸಿದ ನ್ಯಾ. ಪ್ರತಿಭಾ ಎಂ ಸಿಂಗ್ ಮತ್ತು ಅಮಿತ್ ಶರ್ಮಾ ಅವರ ಪೀಠ ಹಲವು ನಿರ್ದೇಶನಗಳನ್ನು ನೀಡಿದೆ. ಎಲ್ಲಾ ಆಸ್ಪತ್ರೆಗಳು, ನರ್ಸಿಂಗ್ ಹೋಂಗಳು, ಕ್ಲಿನಿಕ್‌ಗಳು, ವೈದ್ಯಕೀಯ ಕೇಂದ್ರಗಳು ಅತ್ಯಾಚಾರ ಸಂತ್ರಸ್ತರು/ಬದುಕುಳಿದವರು, ಪೋಕ್ಸೋ ಪ್ರಕರಣದಲ್ಲಿ ಬದುಕುಳಿದವರು ಮತ್ತು ಲೈಂಗಿಕ ದಾಳಿಗಳಿಂದ ಬದುಕುಳಿದವರು ಇತ್ಯಾದಿಗಳಿಗೆ ಉಚಿತ ವೈದ್ಯಕೀಯ ಆರೈಕೆ ಮತ್ತು ಚಿಕಿತ್ಸೆಯನ್ನು ಒದಗಿಸುವುದು ಕರ್ತವ್ಯವಾಗಿದೆ ಎಂದು ನ್ಯಾಯಾಲಯ ಹೇಳಿದೆ.

ದೆಹಲಿಯ ಪ್ರತಿಯೊಂದು ಆಸ್ಪತ್ರೆಯೂ ವೈದ್ಯಕೀಯ ಸೌಲಭ್ಯಗಳ ಫಲಕ ಅಳವಡಿಸಬೇಕು, ಮುಖ್ಯವಾಗಿ ಲೈಂಗಿಕ ದೌರ್ಜನ್ಯ, ಅತ್ಯಾಚಾರ, ಸಾಮೂಹಿಕ ಅತ್ಯಾಚಾರ, ಆಸಿಡ್ ದಾಳಿಯ ಬಲಿಪಶುಗಳು/ ಬದುಕುಳಿದವರಿಗೆ ಉಚಿತ ಹೊರರೋಗಿ ಮತ್ತು ಒಳರೋಗಿ ವೈದ್ಯಕೀಯ ಚಿಕಿತ್ಸೆ ಲಭ್ಯವಿದೆ ಎಂದು ತಿಳಿಸುವ ಬೋರ್ಡ್ ಅನ್ನು ಹಾಕಬೇಕು. ಅಪರಾಧಗಳಲ್ಲಿ ಬದುಕುಳಿದವರನ್ನು ತಕ್ಷಣವೇ ಪರೀಕ್ಷಿಸಬೇಕು ಮತ್ತು ಅಗತ್ಯವಿದ್ದರೆ HIV ಯಂತಹ ಲೈಂಗಿಕವಾಗಿ ಹರಡುವ ರೋಗಗಳಿಗೆ ಚಿಕಿತ್ಸೆ ನೀಡಬೇಕು ಎಂದು ನ್ಯಾಯಾಲಯ ಹೇಳಿದೆ.

ಅಂತಹ ಬಲಿಪಶು/ಬದುಕುಳಿದವರಿಗೆ ದೈಹಿಕ ಮತ್ತು ಮಾನಸಿಕ ಸಮಾಲೋಚನೆ ನೀಡಬೇಕು, ತುರ್ತು ಸಂದರ್ಭಗಳಲ್ಲಿ ಸಂತ್ರಸ್ತೆಯನ್ನು ದಾಖಲಿಸಲು ಸಂಬಂಧಪಟ್ಟ ವೈದ್ಯಕೀಯ ಸಂಸ್ಥೆಯು ಗುರುತಿನ ಪುರಾವೆಯನ್ನು ಒತ್ತಾಯಿಸಬಾರದು ಎಂದು ನ್ಯಾಯಾಲಯ ನಿರ್ದೇಶಿಸಿದೆ. ಮಗಳ ಮೇಲೆ ಅತ್ಯಾಚಾರವೆಸಗಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ಆರೋಪಿಯ ಅರ್ಜಿಯ ವಿಚಾರಣೆ ವೇಳೆ ನ್ಯಾಯಾಲಯ ಈ ನಿರ್ದೇಶನ ನೀಡಿದೆ. ನ್ಯಾಯಾಲಯ ಮತ್ತು ದೆಹಲಿ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ (ಡಿಎಲ್ಎಸ್ಎ) ಪುನರಾವರ್ತಿತ ಹಸ್ತಕ್ಷೇಪದ ಹೊರತಾಗಿಯೂ ಬದುಕುಳಿದವರು ಖಾಸಗಿ ಆಸ್ಪತ್ರೆಯಲ್ಲಿ ವೈದ್ಯಕೀಯ ಚಿಕಿತ್ಸೆಗಾಗಿ ಕಾಯಬೇಕಾಯಿತು ಎಂಬ ಅಂಶವನ್ನು ನ್ಯಾಯಾಲಯ ಗಮನಿಸಿದೆ.

## ಬಾಂಗ್ಲಾ ಮೂಲದ 11 ಅಕ್ರಮ ವಲಸಿಗರು ವಶಕ್ಕೆ

**ದೆಹಲಿ:** ಬಾಂಗ್ಲಾದೇಶ ಮೂಲದ 11 ಜನ ಅಕ್ರಮ ವಲಸಿಗರನ್ನು ದೆಹಲಿ ಪೊಲೀಸರು ಅರೆಸ್ಟ್ ಮಾಡಿದ್ದಾರೆಬಂಧಿತ 11 ವ್ಯಕ್ತಿಗಳಲ್ಲಿ ಐವರು ಬಾಂಗ್ಲಾದೇಶಿ ಪ್ರಜೆಗಳಾಗಿದ್ದು, ನಕಲಿ ದಾಖಲೆಗಳನ್ನು ಸೃಷ್ಟಿಸುವವರಾಗಿದ್ದಾರೆ. ಅಷ್ಟೇ ಅಲ್ಲದೆ, ಆಧಾರ್ ಆಪರೇಟರ್ಗಳು ಮತ್ತು ನಕಲಿ ವೆಬ್ಸೈಟ್ಗಳನ್ನು ರಚಿಸುವಲ್ಲಿ ತೊಡಗಿರುವ ಟೆಕ್ ತಜ್ಞರು ಸೇರಿದ್ದಾರೆ ಎಂಬ ಮಾಹಿತಿಯಿದೆ. ಇನ್ನು ಈ ಬಗ್ಗೆ ಪೊಲೀಸ್ ಅಧಿಕಾರಿಯೊಬ್ಬರು ಪ್ರತಿಕ್ರಿಯಿಸಿದ್ದು, ರಾಷ್ಟ್ರ ರಾಜಧಾನಿಯಲ್ಲಿ ಅಕ್ರಮ ವಲಸಿಗರನ್ನು ಪತ್ತೆ ಹಚ್ಚುವ ಕಾರ್ಯಾಚರಣೆಯನ್ನು ದೆಹಲಿ ಪೊಲೀಸರು ಕೈಗೆತ್ತಿಕೊಂಡಿದ್ದಾರೆ ಎಂದು ಹೇಳಿದ್ದಾರೆ. ಬಂಧಿತ ವ್ಯಕ್ತಿಗಳು ನಕಲಿ ಆಧಾರ್ ಕಾರ್ಡ್ಗಳು, ವೋಟರ್ ಐಡಿಗಳು ಮತ್ತು ಇತರ ನಕಲಿ ದಾಖಲೆಗಳನ್ನು ನಕಲಿ ವೆಬ್ಸೈಟ್ ಮೂಲಕ ಬಾಂಗ್ಲಾದೇಶಿ ಪ್ರಜೆಗಳಿಗೆ ಸಹಾಯ ಮಾಡಿದ್ದಾರೆ ಎಂದು ದಕ್ಷಿಣದ ಉಪ ಪೊಲೀಸ್ ಆಯುಕ್ತ (ಡಿಸಿಪಿ) ಅಂಕಿತ್ ಚೌಹಾಣ್ ಹೇಳಿದ್ದಾರೆ. ರಜತ್ ಮಿಶ್ರಾ ಎಂಬ ವ್ಯಕ್ತಿ ನಿರ್ವಹಿಸುತ್ತಿದ್ದ ಜನತಾ ಪ್ರಿಂಟ್ಸ್ ಎಂಬ ವೆಬ್ಸೈಟ್ ಅನ್ನು 20ಕ್ಕಿಂತ ಕಡಿಮೆ ಫೀಸ್ ಪಡೆದು ನಕಲಿ ದಾಖಲೆಗಳ ಸೃಷ್ಟಿಗಾಗಿ ಸಹಾಯ ಮಾಡಲು ಬಳಸಲಾಗಿದೆ ಎಂದು ತನಿಖೆಯಿಂದ ತಿಳಿದುಬಂದಿದೆ. ಕಾರ್ಯಾಚರಣೆ ವೇಳೆ ಪೊಲೀಸರು 21 ನಕಲಿ ಆಧಾರ್ ಕಾರ್ಡ್ಗಳು, ಆರು ಪ್ಯಾನ್ ಕಾರ್ಡ್ಗಳು ಮತ್ತು ನಾಲ್ಕು ವೋಟರ್ ಐಡಿಗಳನ್ನು ವಶಪಡಿಸಿಕೊಂಡಿದ್ದಾರೆ ಎನ್ನಲಾಗಿದೆ. ಅಕ್ರಮ ವಲಸಿಗರು ಕಾಡಿನ ಮಾರ್ಗಗಳು ಮತ್ತು ಎಕ್ಸ್‌ಪ್ರೆಸ್ ರೈಲುಗಳನ್ನು ಭಾರತದಲ್ಲಿನ ಹಲವು ಪ್ರದೇಶಗಳನ್ನು ಪ್ರವೇಶಿಸಲು ಬಳಸುತ್ತಿದ್ದರು ಎಂದು ಚೌಹಾಣ್ ಹೇಳಿದ್ದಾರೆ. ಈ ತಿಂಗಳ ಆರಂಭದಲ್ಲಿ, ದೆಹಲಿಯ ಲೆಫ್ಟಿನೆಂಟ್ ಗವರ್ನರ್ ಅವರು ನಗರದಲ್ಲಿ ಅಕ್ರಮ ಬಾಂಗ್ಲಾದೇಶಿ ವಲಸಿಗರನ್ನು ಗುರುತಿಸಲು ಮತ್ತು ದಂಡ ವಿಧಿಸಲು ಎರಡು ತಿಂಗಳ ಡ್ರೈವ್ ಅನ್ನು ಆಯೋಜಿಸಲು ಮುಖ್ಯ ಕಾರ್ಯದರ್ಶಿ ಮತ್ತು ಪೊಲೀಸ್ ಆಯುಕ್ತರಿಗೆ ಆದೇಶಿಸಿದ್ದರು. ಬಾಂಗ್ಲಾದೇಶದಿಂದ 1,000ಕ್ಕೂ ಹೆಚ್ಚು ಅಕ್ರಮ ವಲಸಿಗರನ್ನು ಗುರುತಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಹೋಟೆಲ್‌ಗೆ ಕರೆಸಿ ಪ್ರಿಯಕರನ ಮರ್ಮಾಂಗ ಕಟ್ ಮಾಡಿದ್ಲು ಪ್ರಿಯತಮೆ!



**ಲಕ್ನೋ:** ಪ್ರೀತಿಯಿಂದ ಹಿಂದೆ ಸರಿದಿದ್ದಕ್ಕೆ 22 ವರ್ಷದ ಯುವತಿಯೊಬ್ಬಳು ತನ್ನ ಪ್ರಿಯಕರನನ್ನು ಹೋಟೆಲ್ ರೂಮ್‌ಗೆ ಕರೆಸಿ ಆತನ ಗುಪ್ತಾಂಗವನ್ನು ಕತ್ತರಿಸಿದ್ದಾಳೆ. ಉತ್ತರ ಪ್ರದೇಶದ ಮುಜಾಫರ್ ನಗರದಲ್ಲಿ ಈ ಘಟನೆ ನಡೆದಿದೆ. 24 ವರ್ಷದ ತನ್ನ ಪ್ರಿಯಕರನಿಗೆ ಬೇರೊಬ್ಬ ಹುಡುಗಿಯ ಜೊತೆ ಮದುವೆ ನಿಶ್ಚಯವಾಗಿರುವುದು ಗೊತ್ತಾದ ಬಳಿಕ ಪ್ರಿಯತಮೆ ಈ ಕ್ರೂರ ಕೃತ್ಯ ಎಸಗಿದ್ದಾಳೆ. ಇವರಿಬ್ಬರೂ ಎಂಟು ವರ್ಷಗಳಿಂದ ಪ್ರೀತಿಸುತ್ತಿದ್ದರು.

**ಆತ್ಮಹತ್ಯೆಗೆ ಯತ್ನ!:** ಹಲ್ಲೆಯ ನಂತರ ಯುವತಿ ತನ್ನ ಕೈಯ ನರವನ್ನು ಕತ್ತರಿಸಿಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾಳೆ. ತನ್ನ ಮರ್ಮಾಂಗಕ್ಕೆ ಕತ್ತರಿಸುತ್ತಿದ್ದಂತೆಯೇ ಯುವಕ ಪೊಲೀಸರಿಗೆ ಫೋನ್ ಮಾಡಿ ವಿಷಯ ತಿಳಿಸಿದ್ದಾನೆ. ತಕ್ಷಣ ಸ್ಥಳಕ್ಕೆ ಬಂದ ಪೊಲೀಸರು ಇಬ್ಬರನ್ನೂ ಆಸ್ಪತ್ರೆಗೆ ದಾಖಲಿಸಿದ್ದಾರೆ.

**ಯುವತಿಗೆ ಸಿಟ್ಟ್ಯಾಕೆ..?** ಯುವಕ ಮದುವೆಗೆ ತಯಾರಿ ನಡೆಸುತ್ತಿರುವ ವಿಷಯ ಯುವತಿಗೆ ಗೊತ್ತಾಗಿದೆ. ಹೀಗಾಗಿ ಆತನನ್ನು ಕೊನೆಯ ಬಾರಿ ನೋಡಬೇಕು ಎಂದು ಹೇಳಿ ಹೋಟೆಲ್ ಕೊಠಡಿಗೆ ಕರೆಸಿಕೊಂಡಿದ್ದಾಳೆ. ಬಳಿಕ ಯುವತಿ ಯುವಕನ ಗುಪ್ತಾಂಗವನ್ನು ಕತ್ತರಿಸಿದ್ದಾಳೆ. ಪೊಲೀಸರು ತಕ್ಷಣ ಬಂದು ಆಸ್ಪತ್ರೆಗೆ ಸೇರಿಸಿದ ಕಾರಣ ಯುವತಿ ಹಾಗೂ ಯುವಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

**ಗೊಂದಲದ ಹೇಳಿಕೆಗಳು!** ಕಾರಿನಲ್ಲಿಯೇ ಪ್ರಿಯತಮೆ ಈ ಕೃತ್ಯವೆಸಗಿದ್ದಾಳೆ ಎಂದು ಯುವಕ ಪೊಲೀಸರಿಗೆ ಮಾಹಿತಿ ನೀಡಿದ್ದಾನೆ. ಆದರೆ ಘಟನೆ ನಡೆದಿರುವುದು ಹೋಟೆಲ್‌ನಲ್ಲಿ ಎಂದು ಮಹಿಳೆ ಪೊಲೀಸರಿಗೆ ತಿಳಿಸಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಶುರು ಮಾಡಿದ್ದು, ಇಬ್ಬರ ಮೊಬೈಲ್ ಫೋನ್ ಗಳನ್ನೂ ವಶಪಡಿಸಿಕೊಂಡಿದ್ದಾರೆ.

## ಅಮೆರಿಕನ್ ಏರ್‌ಲೈನ್ಸ್ ಎಲ್ಲಾ ವಿಮಾನ ಸ್ಥಗಿತ




**ಅಮೇರಿಕ:** ತಾಂತ್ರಿಕ ಸಮಸ್ಯೆಯಿಂದಾಗಿ ಅಮೆರಿಕನ್ ಏರ್‌ಲೈನ್ಸ್ ಮಂಗಳವಾರ ಯುಎಸ್ನಲ್ಲಿ ತನ್ನ ಎಲ್ಲಾ ವಿಮಾನಗಳನ್ನು ಸ್ಥಗಿತಗೊಳಿಸಿದೆ ಎಂದು ಅನೇಕ ವರದಿಗಳು ತಿಳಿಸಿವೆ. ವಿಮಾನವು ಎದುರಿಸುತ್ತಿರುವ ತಾಂತ್ರಿಕ ಸಮಸ್ಯೆಯನ್ನು ನಿರ್ದಿಷ್ಟಪಡಿಸದಿದ್ದರೂ, ವಾಹಕದ ಷೇರುಗಳು ಗಂಟೆಯ ಮೊದಲು ಶೇಕಡಾ 3.8 ರಷ್ಟು ಕುಸಿದವು. ಕಂಪನಿಯು ''ಅಂದಾಜು ಸಮಯವನ್ನ ಒದಗಿಸಲಾಗಿಲ್ಲ, ಆದರೆ ಅವರು ಅದನ್ನು ಸಾಧ್ಯವಾದಷ್ಟು ಕಡಿಮೆ ಸಮಯದಲ್ಲಿ ಸರಿಪಡಿಸಲು ಪ್ರಯತ್ನಿಸುತ್ತಿದ್ದಾರೆ'' ಎಂದು ಎಕ್ಸ್ನಲ್ಲಿ ಪೋಸ್ಟ್‌ನಲ್ಲಿ ತಿಳಿಸಿದೆ.

## ಹೊಸ ಖಾತೆದಾರರಿಗೆ ರೂ. 5,000 ಮೌಲ್ಯದ ರಿವಾರ್ಡ್ಸ್ ಜಿಯೋ ಪೇಮೆಂಟ್ಸ್ ಬ್ಯಾಂಕ್




**ಮುಂಬೈ:** ಜಿಯೋ ಪೇಮೆಂಟ್ಸ್ ಬ್ಯಾಂಕ್ ನಿಂದ ಹಬ್ಬದ ವಿಶೇಷ ಕೊಡುಗೆಯನ್ನು ಘೋಷಿಸಲಾಗಿದೆ, ಡಿಸೆಂಬರ್ 25ರಿಂದ ಮತ್ತು ಡಿಸೆಂಬರ್ 31ನೇ ತಾರೀಕಿನ ಮಧ್ಯೆ ಹೊಸದಾಗಿ ಉಳಿತಾಯ ಖಾತೆಯನ್ನು ತೆರೆಯುವ ಗ್ರಾಹಕರಿಗೆ ರೂ. 5,000 ಮೌಲ್ಯದ ರಿವಾರ್ಡ್ಸ್ ನೀಡಲಿದೆ.

ಈ ರಿವಾರ್ಡ್ಸ್ ನಲ್ಲಿ ಮೆಕ್ ಡೊನಾಲ್ಡ್ಸ್, ಈಸ್ ಮೈಟ್ರಿಪ್ ಮತ್ತು ಮ್ಯಾಕ್ಸ್ ಫ್ಯಾಷನ್ ನಂತಹ ಜನಪ್ರಿಯ ಬ್ರ್ಯಾಂಡ್‌ಗಳ ಕೂಪನ್ಗಳು ಸೇರಿವೆ. ಬ್ಯಾಂಕ್ ತನ್ನ ಡಿಜಿಟಲ್-ಫಸ್ಟ್ ವಿಧಾನಕ್ಕೆ ಖ್ಯಾತಿ ಪಡೆದಿದ್ದು, ಐದು ನಿಮಿಷಗಳಲ್ಲಿ ಗ್ರಾಹಕರಿಗೆ ಉಳಿತಾಯ ಖಾತೆಯನ್ನು ತೆರೆಯುತ್ತದೆ.

ಜಿಯೋ ಪೇಮೆಂಟ್ಸ್ ಬ್ಯಾಂಕ್ನ ಪ್ರಮುಖ ವೈಶಿಷ್ಟ್ಯಗಳಲ್ಲಿ ಬಯೋಮೆಟ್ರಿಕ್ ಆಧಾರಿತ ದೃಢೀಕರಣ, ವರ್ಚುವಲ್ ಮತ್ತು ಭೌತಿಕ ರುಪೇ ಪ್ಲಾಟಿನಂ ಡೆಬಿಟ್ ಕಾರ್ಡ್ಗಳು ಮತ್ತು ತಡೆರಹಿತ ಬ್ಯಾಂಕಿಂಗ್ ಅನುಭವ ಒಳಗೊಂಡಿವೆ. ಈ ಹಬ್ಬದ ಋತುವಿನಲ್ಲಿ, ಜಿಯೋ ಪೇಮೆಂಟ್ಸ್ ಬ್ಯಾಂಕ್ ತನ್ನ ಆಕರ್ಷಕ ರಿವಾರ್ಡ್ಸ್ ಮೂಲಕ ಹೊಸ ಗ್ರಾಹಕರನ್ನು ಆಕರ್ಷಿಸುವ ಗುರಿಯನ್ನು ಹೊಂದಿದೆ.

## ಸೇನಾ ವಾಹನ ಕಂದಕಕ್ಕೆ ಬಿದ್ದು ಐವರು ಯೋಧರು ಹುತಾತ್ಮ

**ನವದೆಹಲಿ:** ಜಮ್ಮು ಮತ್ತು ಕಾಶ್ಮೀರದ ಪೂಂಚ್ನಲ್ಲಿ ಭಾರೀ ಅಪಘಾತ ಸಂಭವಿಸಿದೆ. ಪೂಂಚ್ ಜಿಲ್ಲೆಯ ಮೆಂಧರ್ ಉಪ ವಿಭಾಗದ ಬಲ್ನೋಯಿ ಪ್ರದೇಶದಲ್ಲಿ ಭಾರತೀಯ ಸೇನೆಯ ವಾಹನವು ಆಳವಾದ ಕಂದಕಕ್ಕೆ ಬಿದ್ದಿದೆ. ಇದರ ಪರಿಣಾಮ ಐವರು ಯೋಧರು ಹುತಾತ್ಮರಾಗಿದ್ದು, 12 ಯೋಧರು ಗಂಭೀರವಾಗಿ ಗಾಯಗೊಂಡಿದ್ದಾರೆ. ಈ ಅಪಘಾತದಲ್ಲಿ ಓರ್ವ ಯೋಧ ಸುರಕ್ಷಿತವಾಗಿದ್ದಾರೆಂದು ವರದಿಯಾಗಿದೆ. ಪೂಂಚ್ ಜಿಲ್ಲೆಯ ಮೆಂಧರ್ ಉಪವಿಭಾಗದ ಮಾನ್ಕೋಟ್ ಸೆಕ್ಟರ್ನ ಬಲ್ನೋಯಿ ಪ್ರದೇಶದಲ್ಲಿ ಭಾರತೀಯ ಸೇನೆಯ ವಾಹನವು 300 ಅಡಿ ಆಳದ ಕಮರಿಗೆ ಬಿದ್ದಿದ್ದರಿಂದ ದೊಡ್ಡ ಅಪಘಾತ ಸಂಭವಿಸಿದೆ. ವಾಹನದಲ್ಲಿ ಸೇನಾ ಸಿಬ್ಬಂದಿ ತಮ್ಮ ಪೋಸ್ಟ್ ಕಡೆಗೆ ಹೋಗುತ್ತಿದ್ದಾಗ ದಾರಿಯಲ್ಲಿ ವಾಹನದ ನಿಯಂತ್ರಣ ಕಳೆದುಕೊಂಡು ಅಪಘಾತ ಸಂಭವಿಸಿದೆ. ಈ ವಾಹನದಲ್ಲಿ ಒಟ್ಟು 18 ಯೋಧರಿದ್ದರು ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಗಾಯಾಳುಗಳಲ್ಲಿ ಕೆಲವರ ಸ್ಥಿತಿ ಗಂಭೀರವಾಗಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಸದ್ಯ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದ್ದು, ಪರಿಹಾರ ಮತ್ತು ರಕ್ಷಣಾ ತಂಡಗಳು ಸ್ಥಳಕ್ಕೆ ಧಾವಿಸಿ ಗಾಯಾಳುಗಳ ರಕ್ಷಣೆಗೆ ಯತ್ನಿಸುತ್ತಿವೆ. ಮಾನ್ಕೋಟ್ ಪೊಲೀಸ್ ಠಾಣೆ ಮತ್ತು ಮೆಂಧರ್ ಪೊಲೀಸ್ ಠಾಣೆ ವ್ಯಾಪ್ತಿಯ ಎಲ್‌ಒಸಿ ಬಳಿ ಈ ಘಟನೆ ನಡೆದಿದೆ.

## ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಅಕ್ರಮ ಆರೋಪ: ಆಯೋಗ ಸ್ಪಷ್ಟನೆ




**ನವದೆಹಲಿ:** ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಮತದಾನದ ಅಂಕಿ ಅಂಶ ಮತ್ತು ಮತದಾರರ ಸೇರ್ಪಡೆಯಲ್ಲಿ ಗೋಲ್ಮಾಲ್ ನಡೆದಿದೆ ಎಂಬ ಕಾಂಗ್ರೆಸ್ನ ಆರೋಪಕ್ಕೆ ಕೇಂದ್ರ ಚುನಾವಣಾ ಆಯೋಗ ಸವಿಸ್ತಾರವಾದ ಸ್ಪಷ್ಟನೆಯನ್ನು ಇಂದು ನೀಡಿದೆ.

ಶೇಕಡಾವಾರು ಮತದಾನ ಮತ್ತು ಅದನ್ನು ಆಯೋಗದ ವೆಬ್ಸೈಟ್ನಲ್ಲಿ ಅಪ್ಲೋಡ್ ಮಾಡುವ ವಿಧಾನದ ಬಗ್ಗೆಯೂ ಅದು ಮಾಹಿತಿ ನೀಡಿದೆ. ಕಾಂಗ್ರೆಸ್ ಮಾಡುತ್ತಿರುವ ಆರೋಪಗಳು ಮತದಾರರಿಗೆ ತಪ್ಪು ಮಾಹಿತಿ ನೀಡುತ್ತಿದೆ ಎಂದು ಎಲ್ಲ ದೂರುಗಳನ್ನು ಅಲ್ಲಗಳೆದಿದೆ.

ಕಾಂಗ್ರೆಸ್ಗೆ ಪತ್ರ ಬರೆದಿರುವ ಚುನಾವಣಾ ಆಯೋಗ, ಮತದಾನ ಮುಗಿದ ಬಳಿಕ ಅದರ ಶೇಕಡಾವಾರು ಪ್ರಮಾಣವನ್ನು ಸಂಜೆ 5 ರಿಂದ ರಾತ್ರಿ 11:45ರ ವರೆಗೆ ಪರಿಷ್ಕರಣೆ ಮಾಡಲಾಗುತ್ತದೆ. ಇದು ಸಾಮಾನ್ಯ ಪ್ರಕ್ರಿಯೆ. ಮತದಾನ ಕೇಂದ್ರದಲ್ಲಿ ಆಯಾ ಪಕ್ಷಗಳ ಏಜೆಂಟರು ಕೂಡ ಮತದಾರರ ಲೆಕ್ಕ ಹಾಕಿರುತ್ತಾರೆ. ಅವರಿಂದಲೂ ಮಾಹಿತಿ ಪಡೆದುಕೊಂಡು ಅಂತಿಮವಾಗಿ ಕ್ರೋಢೀಕರಿಸಿ ಶೇಕಡಾ ಪ್ರಮಾಣ ಪ್ರಕಟಿಸಲಾಗುತ್ತದೆ ಎಂದು ದೃಢಪಡಿಸಿದೆ.

ಮತದಾನದ ಮುಕ್ತಾಯದ ಸಮಯದಲ್ಲಿ ಅಭ್ಯರ್ಥಿಗಳ ಅಧಿಕೃತ ಏಜೆಂಟರ ಬಳಿ ಮತದಾರರ ಮತದಾನ ವಿವರಗಳನ್ನು ನೀಡುವ ಶಾಸನಬದ್ಧ ನಮೂನೆ 17ಸಿ ಇರುವುದರಿಂದ ಚಲಾವಣೆಯಾದ ಮತದಾನದ ಪ್ರಮಾಣವನ್ನು ಬದಲಾಯಿಸುವುದು ಅಸಾಧ್ಯ ಎಂದು ಚುನಾವಣಾ ಆಯೋಗ ಸ್ಪಷ್ಟವಾಗಿ ಹೇಳಿದೆ.

ಮಹಾರಾಷ್ಟ್ರ ವಿಧಾನಸಭೆ ಚುನಾವಣೆಗೂ ಮೊದಲು ಮತಪಟ್ಟಿಯಲ್ಲಿ ಮತದಾರರ ಸೇರ್ಪಡೆಯಲ್ಲೂ ಅಕ್ರಮ ನಡೆದಿದೆ ಎಂದು ಕಾಂಗ್ರೆಸ್ ಆರೋಪಿಸಿತ್ತು. ಇದಕ್ಕೂ ಉತ್ತರ ನೀಡಿರುವ ಚುನಾವಣಾ ಆಯೋಗವು, ಮತದಾರರ ಸೇರ್ಪಡೆ ಅಥವಾ ಅಳಿಸಿ ಹಾಕುವುದು ಅಷ್ಟು ಸುಲಭವಲ್ಲ ಎಂದಿದೆ.

## ವಾಕಿಂಗ್ ತೆರಳಿದ್ದ ಮಹಿಳೆ ಮೇಲೆ ದಾಳಿ ಮಾಡಿ ಎಳೆದೊಯ್ದ ಬೀದಿನಾಯಿಗಳು

**ಆಗ್ರಾ:** ಉತ್ತರಪ್ರದೇಶದ ಆಗ್ರಾದ ಈದ್ಗಾ ಪ್ರದೇಶದ ಕಟ್ಘರ್ ಕಾಲೋನಿಯಲ್ಲಿ ವಾಕಿಂಗ್ ಗೆ ತೆರಳಿದ್ದ ಮಹಿಳೆಯೋರ್ವರ ಮೇಲೆ ಬೀದಿ ನಾಯಿಗಳು ಮಾರಣಾಂತಿಕವಾಗಿ ದಾಳಿ ಮಾಡಿದ್ದು, ಈ ಕುರಿತ ವೀಡಿಯೊ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಕಿರಿದಾದ ಓಣಿಯಲ್ಲಿ ಸುಮಾರು 7-8 ಬೀದಿ ನಾಯಿಗಳ ಗುಂಪು ಮಹಿಳೆಯ ಮೇಲೆ ದಾಳಿ ಮಾಡಿ ಮಹಿಳೆಯನ್ನು ಎಳೆದೊಯ್ದಿದೆ. ಈ ಘಟನೆ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ನಾಯಿಗಳು ತನ್ನ ಮೇಲೆ ದಾಳಿ ಮಾಡಿದಾಗ ಮಹಿಳೆ ಸಹಾಯಕ್ಕಾಗಿ ಕಿರುಚುತ್ತಾ ಜೀವನ್ಮರಣ ಹೋರಾಟ ನಡೆಸುತ್ತಿರುವುದು ಕಂಡು ಬಂದಿದೆ.

ಬೀದಿ ನಾಯಿಗಳ ಗುಂಪು ಮಹಿಳೆಯ ಮೇಲೆ ದಾಳಿ ಮಾಡಿದ್ದು, ಈ ವೇಳೆ ಮಹಿಳೆ ಸಹಾಯಕ್ಕಾಗಿ ಕಿರುಚಾಡಿದ್ದಾರೆ. ಆದರೆ ಯಾರೂ ಸಕಾಲದಲ್ಲಿ ರಕ್ಷಣೆಗೆ ಬಂದಿಲ್ಲ. ಈ ವೇಳೆ ಮಹಿಳೆ ತನ್ನನ್ನು ತಾನು ರಕ್ಷಿಸಿಕೊಳ್ಳಲು ಪ್ರಯತ್ನಿಸಿದ್ದಾರೆ. ಆದರೂ ನಾಯಿಗಳ ಗುಂಪು ಮಹಿಳೆಯನ್ನು ಎಳೆದೊಯ್ದು ಮತ್ತಷ್ಟು ಆಕ್ರಮಣಕಾರಿಯಾಗಿ ದಾಳಿ ನಡೆಸಿದೆ. ಘಟನೆಯಲ್ಲಿ ಮಹಿಳೆ ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಹೇಳಲಾಗಿದೆ. ಘಟನೆಯ ಬೆನ್ನಲ್ಲೇ ಸ್ಥಳೀಯ ನಿವಾಸಿಗಳು ತಮ್ಮ ಸುರಕ್ಷತೆಯ ಬಗ್ಗೆ ಆತಂಕ ವ್ಯಕ್ತಪಡಿಸಿ, ಬೀದಿ ನಾಯಿಗಳ ಸಮಸ್ಯೆಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಹಿರಿಯ ನಟ ಶಿವಣ್ಣನಿಗೆ ಯಶಸ್ವಿ ಶಸ್ತ್ರಚಿಕಿತ್ಸೆ

ಸ್ಯಾಂಡಲ್‌ವುಡ್‌ನ ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್‌ಗೆ ಫ್ಲೋರಿಡಾದ ಮಿಯಾಮಿ ಕ್ಯಾನ್ಸರ್ ಇನ್ಸಿಟ್ಯೂಟ್‌ನಲ್ಲಿ ಯಶಸ್ವಿ ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಸುಮಾರು 6 ಗಂಟೆಗಳ ಕಾಲ ತಜ್ಞ ವೈದ್ಯರು ಶಿವಣ್ಣನಿಗೆ ಆಪರೇಷನ್ ಮಾಡಿದ್ದಾರೆ. ಭಾರತೀಯ ಮೂಲದ ತಜ್ಞ ವೈದ್ಯ ಡಾ. ಮುರುಗೇಶ್ ನೇತೃತ್ವದಲ್ಲಿ ಮಿಯಾಮಿ ಆಸ್ಪತ್ರೆಯಲ್ಲಿ ಶಿವಣ್ಣನಿಗೆ ಆಪರೇಷನ್ ಮಾಡಲಾಗಿದೆ. ಭಾರತೀಯ ಕಾಲಮಾನ ಮಂಗಳವಾರ ರಾತ್ರಿ 11:30ರ ಸುಮಾರಿಗೆ ಶಸ್ತ್ರಚಿಕಿತ್ಸೆ ಮುಗಿದಿದೆ. ಅಮೆರಿಕದ ಕಾಲಮಾನ ಬೆಳಗ್ಗೆ 8 ಗಂಟೆಗೆ ಅಂದರೆ ಭಾರತೀಯ ಕಾಲಮಾನದ ಪ್ರಕಾರ 6 ಗಂಟೆಗೆ ಆಪರೇಷನ್ ಥಿಯೇಟರ್‌ಗೆ ಶಿವಣ್ಣರನ್ನು ಕರೆದುಕೊಂಡು ಹೋಗಿದ್ದಾರೆ ಎನ್ನಲಾಗಿದೆ. ಸುಮಾರು 6 ಗಂಟೆಗಳ ಕಾಲ ಸರ್ಜರಿ ಮಾಡಲಾಗಿದೆ. ಆಸ್ಪತ್ರೆಯಲ್ಲಿ ಶಿವಣ್ಣನೊಂದಿಗೆ ಪತ್ನಿ ಗೀತಾ, ಪುತ್ರಿ ನಿವೇದಿತಾ, ಬಾಮೈದ ಮಧು ಬಂಗಾರಪ್ಪ ಜೊತೆಗಿದ್ದಾರೆ. ಇನ್ನು ಕ್ಯಾನ್ಸರ್ ಚಿಕಿತ್ಸೆಗೊಳಾಗಿರುವ ಶಿವಣ್ಣನಿಗೆ ಆಸ್ಪತ್ರೆಯಲ್ಲೇ ಇನ್ನೊಂದು ವಾರ ಚಿಕಿತ್ಸೆ ಮುಂದುವರೆಯಲಿದೆ. ನುರಿತ ವೈದ್ಯರ ನಿಗಾದಲ್ಲಿ ಶಿವಣ್ಣ ಇರಲಿದ್ದಾರೆ. ಬಳಿಕ ಮನೆಗೆ ಶಿಫ್ಟ್ ಆಗಲಿದ್ದಾರೆ. ಇನ್ನೊಂದು ತಿಂಗಳು ಅಮೆರಿಕದಲ್ಲೇ ಇರುವ ಶಿವರಾಜ್‌ಕುಮಾರ್ ಜನವರಿ 26ರಂದು ಭಾರತಕ್ಕೆ ಮರಳಲಿದ್ದಾರೆ.



# ಸೌತ್‌ನಲ್ಲಿ ಶ್ರೀಲೀಲಾಗೆ ಭಾರೀ ಬೇಡಿಕೆ

ಬೆಂಗಳೂರಿನ ಬೆಡಗಿ ಶ್ರೀಲೀಲಾ 'ಪುಷ್ಪ 2' ಚಿತ್ರದಲ್ಲಿ ಕಿಸ್ಸಿಕ್ ಬೆಡಗಿಯಾಗಿ ಮಿಂಚಿದ್ಮೇಲೆ ಬೇಡಿಕೆ ಇನ್ನೂ ಹೆಚ್ಚಾಗಿದೆ. ನಟಿಯ ಬಳಿ ಕೈತುಂಬಾ ಸಿನಿಮಾಗಳಿವೆ. 2025ರಲ್ಲಿ ಸಾಲು ಸಾಲು ಸಿನಿಮಾ ಮನರಂಜನೆ ಕೊಡೋದು ಗ್ಯಾರಂಟಿ.

ಪ್ರತಿಭೆ, ಡ್ಯಾನ್ಸ್ ಸ್ಕಿಲ್, ಬ್ಯೂಟಿಯೊಂದಿಗೆ ಸದ್ಯ ಸೌತ್‌ನಲ್ಲಿ ಸದ್ದು ಮಾಡುತ್ತಿರುವ ಕನ್ನಡತಿ ಶ್ರೀಲೀಲಾ ಲಿಸ್ಟ್‌ನಲ್ಲಿ 5ಕ್ಕೂ ಹೆಚ್ಚು ಸಿನಿಮಾಗಳಿವೆ. ನಿತಿನ್ ಜೊತೆಗಿನ ರಾಬಿನ್‌ಹುಡ್ ಚಿತ್ರ, ಪವನ್ ಕಲ್ಯಾಣ್ ಜೊತೆ ಉಸ್ತಾದ್ ಭಗತ್ ಸಿಂಗ್, ಧಮಾಕ ಬಳಿಕ ರವಿತೇಜ ಜೊತೆ 2ನೇ ಬಾರಿ ಹೊಸ ಚಿತ್ರಕ್ಕೆ ನಟಿ ಓಕೆ ಎಂದಿದ್ದಾರೆ. 'ಮಾಸ್ ಜಾತ್ರ' ಎಂದು ಟೈಟಲ್ ಇಡಲಾಗಿದೆ.

ಶಿವಕಾರ್ತಿಕೇಯನ್ ನಟನೆಯ 25ನೇ ಚಿತ್ರಕ್ಕೆ ಶ್ರೀಲೀಲಾ ನಾಯಕಿಯಾಗಿದ್ದಾರೆ. ಈ ಮೂಲಕ ತಮಿಳಿಗೆ ನಟಿ ಪಾದಾರ್ಪಣೆ ಮಾಡುತ್ತಿದ್ದಾರೆ. ಈ ಚಿತ್ರಕ್ಕೆ ಸುಧಾ ಕೊಂಗರ ನಿರ್ದೇಶನ ಮಾಡುತ್ತಿದ್ದಾರೆ. ಇದರೊಂದಿಗೆ ಜನಾರ್ಧನ್ ರೆಡ್ಡಿ ಪುತ್ರನ ಜೊತೆ ಕನ್ನಡದ ಸಿನಿಮಾ ಮಾಡುತ್ತಿದ್ದಾರೆ.

ಇನ್ನೂ ಶ್ರೀಲೀಲಾ ನಟನೆಯ ಮೊದಲ ಬಾಲಿವುಡ್ ಚಿತ್ರವನ್ನು ಸೈಫ್ ಪುತ್ರ ಇಬ್ರಾಹಿಂ ಅಲಿ ಖಾನ್ ಜೊತೆ ನಟಿಸಲು ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ ಎನ್ನಲಾಗಿದೆ. ಇದಕ್ಕೆ 'ದಿಲ್ಲರ್' ಎಂದು ಟೈಟಲ್ ಇಡಲಾಗಿದೆಯಂತೆ. ಸದ್ಯ ನಟಿಯ ಸಿನಿಮಾ ಲಿಸ್ಟ್ ಕೇಳಿ ಫ್ಯಾನ್ಸ್ ಖುಷಿಪಡುತ್ತಿದ್ದಾರೆ.



# ತಡರಾತ್ರಿ ಏರ್‌ಪೋರ್ಟ್‌ನಲ್ಲಿ ಕಾಣಿಸಿಕೊಂಡ ರಶ್ಮಿಕಾ, ವಿಜಯ್ ದೇವರಕೊಂಡ

'ಪುಷ್ಪ 2' ಸಿನಿಮಾದ ಸಕ್ಸಸ್ ನಂತರ ರಶ್ಮಿಕಾ ಮಂದಣ್ಣ ವೆಕೇಷನ್ ಮೂಡ್‌ನಲ್ಲಿದ್ದಾರೆ. ಡಿ.23ರ ತಡರಾತ್ರಿ, ಮುಂಬೈ ಏರ್‌ಪೋರ್ಟ್‌ನಲ್ಲಿ ರಶ್ಮಿಕಾ ಹಾಗೂ ವಿಜಯ್ ಕಾಣಿಸಿಕೊಂಡಿದ್ದಾರೆ. ಡಿ.23ರಂದು ತಡರಾತ್ರಿ ಮುಂಬೈ ಏರ್‌ಪೋರ್ಟ್‌ನಲ್ಲಿ ವಿಜಯ್ ಮತ್ತು ರಶ್ಮಿಕಾ ಪ್ರತ್ಯೇಕವಾಗಿ ಕಾಣಿಸಿಕೊಂಡಿದ್ದಾರೆ. ಆದರೂ ಇಬ್ಬರೂ ಜೊತೆಯಾಗಿ ಒಂದೇ ವಿಮಾನದಲ್ಲಿ ಪ್ರಯಾಣಿಸಿದ್ದಾರೆ ಎಂಬ ಸುದ್ದಿ ಚರ್ಚೆಗೆ ಗ್ರಾಸವಾಗಿದೆ. ಈ ಬಗ್ಗೆ ಕ್ಲ್ಯಾರಿಟಿ ಸಿಕ್ಕಿಲ್ಲ. ವಿಜಯ್ ಮತ್ತು ರಶ್ಮಿಕಾ ಜೊತೆಯಾಗಿ 2 ಸಿನಿಮಾ ಮಾಡಿರೋದ್ರಿಂದ ಇಬ್ಬರ ನಡುವಿನ ರಿಲೇಷನ್‌ಶಿಪ್ ಬಗ್ಗೆ ಆಗಾಗ ಚರ್ಚೆಯಾಗುತ್ತಲೇ ಇರುತ್ತದೆ. ಇಬ್ಬರೂ ತಮ್ಮ ಸಂಬಂಧದ ಬಗ್ಗೆ ಎಲ್ಲೂ ಅಧಿಕೃತವಾಗಿ ತಿಳಿಸಿಲ್ಲ. ಡೇಟಿಂಗ್ ವದಂತಿ ನಿಜನಾ? ಸುಳ್ಳಾ? ಎಂಬುದು ಈ ಜೋಡಿಯೇ ಖಾತ್ರಿಪಡಿಸಬೇಕಿದೆ. ಅಂದಹಾಗೆ, ಡಿ.5ರಂದು 'ಪುಷ್ಪ 2' ಸಿನಿಮಾ ರಿಲೀಸ್ ಆಗಿ ಗಲ್ಲಾಪೆಟ್ಟಿಗೆಯಲ್ಲಿ 1500 ಕೋಟಿ ರೂ.ಗೂ ಅಧಿಕ ಕಲೆಕ್ಷನ್ ಮಾಡಿ ಮುನ್ನುಗ್ಗುತ್ತಿದೆ. ಈ ಸಿನಿಮಾದ ಸಕ್ಸಸ್‌ನಿಂದ ರಶ್ಮಿಕಾ ಮಂದಣ್ಣ ಕೆರಿಯರ್‌ಗೆ ಟರ್ನಿಂಗ್ ಪಾಯಿಂಟ್ ಸಿಕ್ಕಿದೆ. ನಟಿಗೆ ಬೇಡಿಕೆ ಹೆಚ್ಚಾಗಿದೆ.

# ಕನ್ನಡ ಸಿನಿಮಾಗಳನ್ನೂ ಬೆಂಬಲಿಸಿ

ಕಿಚ್ಚ ಸುದೀಪ್ ಅಭಿನಯದ ಮ್ಯಾಕ್ಸ್ ಚಿತ್ರ ಡಿಸೆಂಬರ್ 25 ರಂದು ಬಿಡುಗಡೆಗೆ ಸಿದ್ಧವಾಗಿದೆ. ಚಿತ್ರತಂಡ ಇತ್ತೀಚೆಗಷ್ಟೇ ಚಿತ್ರದ ಟ್ರೇಲರ್ ಬಿಡುಗಡೆ ಮಾಡಿದ್ದು, ಚಿತ್ರದ ಬಗ್ಗೆ ವ್ಯಾಪಕ ನಿರೀಕ್ಷೆಯನ್ನು ಹುಟ್ಟುಹಾಕಿದೆ.



ಈ ವರ್ಷದ ಕೊನೆಯಲ್ಲಿ ಚಿತ್ರ ಬಿಡುಗಡೆಯಾಗುತ್ತಿದ್ದು, ಕ್ರಿಸ್‌ಮಸ್ ಮತ್ತು ಹೊಸ ವರ್ಷಾಚರಣೆಯಲ್ಲಿ ಪ್ರೇಕ್ಷಕರಿಗೆ ಮನರಂಜನೆಯ ರಸದೌತಣ ಬಡಿಸಲು ಸಿದ್ಧವಾಗಿದೆ. ಮ್ಯಾಕ್ಸ್ ಚಿತ್ರ ಬಿಡುಗಡೆ ಹಿನ್ನಲೆಯಲ್ಲಿ ಚಿತ್ರದುರ್ಗದಲ್ಲಿ ಅದ್ದೂರಿ ಕಾರ್ಯಕ್ರಮ ನಡೆದಿದ್ದು, ಕೋಟೆ ನಾಡಲ್ಲಿ ಕಾರ್ಯಕ್ರಮ ನಡೆಸುವುದಾಗಿ ನೀಡಿದ್ದ ಭರವಸೆಯನ್ನು ಸುದೀಪ್ ಉಳಿಸಿಕೊಂಡಿದ್ದಾರೆ. ಕಾರ್ಯಕ್ರಮದಲ್ಲಿ ಕೃಷ್ಣ, ಧನಂಜಯ್, ವಿನಯ್ ರಾಜ್‌ಕುಮಾರ್, ಯುವ ರಾಜಕುಮಾರ್, ನಿರ್ದೇಶಕ ಎಪಿ ಅರ್ಜುನ್ ಸೇರಿದಂತೆ ಅವರ ಕುಟುಂಬ ಮತ್ತು ಉದ್ಯಮದ ಸಹೋದ್ಯೋಗಿಗಳು ಭಾಗಿಯಾಗಿದ್ದರು. ಚಿತ್ರಪ್ರೇಮಿಗಳು ಒಗ್ಗಟ್ಟಾಗಿ ನಿಲ್ಲಬೇಕು ಎಂದು ಕರೆ ನೀಡಿದ ಅವರು, ಬೇರೆ ಭಾಷೆಯ ಚಿತ್ರಗಳಿಗೆ ನೀಡುವ ಬೆಂಬಲವನ್ನು ಕನ್ನಡ ಚಿತ್ರಗಳಿಗೂ ನೀಡಬೇಕು ಎಂದು ಒತ್ತಾಯಿಸಿದರು. 'ನಿಮ್ಮ ಬೆಂಬಲವಿಲ್ಲದಿದ್ದರೆ ಚಿತ್ರಮಂದಿರಗಳು ಇರಲ್ಲ, ಕನ್ನಡ ಚಿತ್ರಗಳು ಬರಲ್ಲ' ಎಂದು ಸುದೀಪ್ ಹೇಳಿದರು.



# 4 ಟೂರ್ನಿಗಳಿಗೆ ಭಾರತಕ್ಕೆ ಬರಲ್ಲ ಪಾಕಿಸ್ತಾನ್



ಐಸಿಸಿಯ ಮತ್ತೊಂದು ಟೂರ್ನಿಗೆ ವೇದಿಕೆ ಸಿದ್ಧವಾಗಿದೆ. ಫೆಬ್ರವರಿ 19 ರಿಂದ ಪಾಕಿಸ್ತಾನದಲ್ಲಿ ಐಸಿಸಿ ಚಾಂಪಿಯನ್ಸ್ ಟ್ರೋಫಿಗೆ ಚಾಲನೆ ದೊರೆಯಲಿದೆ. 8 ತಂಡಗಳ ನಡುವಣ ಈ ಕದನಕ್ಕಾಗಿ ಭಾರತ ತಂಡವು ಪಾಕಿಸ್ತಾನಕ್ಕೆ ತೆರಳುತ್ತಿಲ್ಲ ಎಂಬುದು ವಿಶೇಷ. ಅಂದರೆ ಚಾಂಪಿಯನ್ಸ್ ಟ್ರೋಫಿಯನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಲಾಗುತ್ತಿದೆ.

ಅದರಂತೆ ಟೀಮ್ ಇಂಡಿಯಾದ ಪಂದ್ಯಗಳನ್ನು ದುಬೈನಲ್ಲಿ ನಡೆಯಲಿದೆ. ಉಳಿದ ಪಂದ್ಯಗಳು ಪಾಕಿಸ್ತಾನದಲ್ಲೇ ಜರುಗಲಿದೆ. ಭಾರತೀಯ ಆಟಗಾರರ ಸುರಕ್ಷತಾ ದೃಷ್ಟಿಯಿಂದ ಪಾಕ್‌ನಲ್ಲಿ ಪಂದ್ಯಾವಳಿ ಆಡಲು ಬಿಸಿಸಿಐ ಹಿಂದೇಟು ಹಾಕಿತ್ತು. ಅಲ್ಲದೆ ಹೈಬ್ರಿಡ್ ಮಾದರಿಯಲ್ಲಿ ಟೂರ್ನಿ ಆಯೋಜಿಸುವಂತೆ ಐಸಿಸಿಗೆ ಮನವಿ ಮಾಡಿತ್ತು.

ಈ ಮನವಿಯನ್ನು ಒಪ್ಪಿಕೊಳ್ಳುವಂತೆ ಐಸಿಸಿ ಪಾಕಿಸ್ತಾನ್ ಕ್ರಿಕೆಟ್ ಮಂಡಳಿಯ ಮನವೊಲಿಸಿದೆ. ಆದರೆ ಈ ಒಪ್ಪಿಗೆಗೂ ಮುನ್ನ ಪಾಕಿಸ್ತಾನ್ ಕೆಲ ಷರತ್ತುಗಳನ್ನು ಮುಂದಿಟ್ಟಿದೆ. ಈ ಷರತ್ತಿನಂತೆ ಭಾರತದಲ್ಲಿ ಮುಂಬರುವ ದಿನಗಳಲ್ಲಿ ನಡೆಯುವ ಐಸಿಸಿ ಟೂರ್ನಿಗಳನ್ನು ಸಹ ಹೈಬ್ರಿಡ್ ಮಾದರಿಯಲ್ಲೇ ಆಯೋಜಿಸಬೇಕೆಂದು ತಿಳಿಸಿದೆ.

ಅಂದರೆ ಇಲ್ಲಿ ಪಾಕಿಸ್ತಾನ್ ತಂಡ ಕೂಡ ಇನ್ಮುಂದೆ ಭಾರತದಲ್ಲಿ ಐಸಿಸಿ ಟೂರ್ನಿಗಳನ್ನು ಆಡಲ್ಲ ಎಂದು ತಿಳಿಸಿದೆ. ಇದಕ್ಕಾಗಿ 2031ರವರೆಗೆ ಭಾರತದಲ್ಲಿ ನಡೆಯುವ ಎಲ್ಲಾ ಐಸಿಸಿ ಟೂರ್ನಿಗಳನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಬೇಕೆಂದು ಬೇಡಿಕೆಯಿಟ್ಟಿದೆ. ಈ ಬೇಡಿಕೆಯನ್ನು ಒಪ್ಪುದಾದರೆ ಮಾತ್ರ ಚಾಂಪಿಯನ್ಸ್ ಟ್ರೋಫಿಯನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸುವುದಾಗಿ ಪಿಸಿಬಿ ಹೇಳಿಕೊಂಡಿತ್ತು.

ಈ ಎಲ್ಲಾ ಬೇಡಿಕೆಗಳಿಗೂ ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ ಅಸ್ತು ಎಂದಿದ್ದು, ಅದರಂತೆ ಮುಂಬರುವ ದಿನಗಳಲ್ಲಿ ಭಾರತದಲ್ಲಿ ನಡೆಯಲಿರುವ ಐಸಿಸಿ ಟೂರ್ನಿಗಳನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸುವುದಾಗಿ ಭರವಸೆ ನೀಡಿದೆ.

ಹೀಗಾಗಿ 2025 ರಲ್ಲಿ ಭಾರತದಲ್ಲಿ ನಡೆಯಲಿರುವ ಮಹಿಳಾ ಏಕದಿನ ವಿಶ್ವಕಪ್, 2026 ರಲ್ಲಿ ನಡೆಯಲಿರುವ ಟಿ20 ವಿಶ್ವಕಪ್, 2029 ರಲ್ಲಿ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿ, 2031 ರಲ್ಲಿ ನಡೆಯಲಿರುವ ಏಕದಿನ ವಿಶ್ವಕಪ್‌ಗಾಗಿ ಪಾಕಿಸ್ತಾನ್ ತಂಡವು ಭಾರತಕ್ಕೆ ಬರಲ್ಲ.

ಬದಲಾಗಿ ಬಿಸಿಸಿಐ ಹೈಬ್ರಿಡ್ ಮಾದರಿಯಲ್ಲಿ ಪಂದ್ಯವನ್ನು ಆಯೋಜಿಸಬೇಕಾಗುತ್ತದೆ. ಅದರಂತೆ ಭಾರತದಲ್ಲಿ ನಡೆಯಲಿರುವ 4 ಐಸಿಸಿ ಟೂರ್ನಿಯು ಹೈಬ್ರಿಡ್ ಮಾದರಿಯಲ್ಲಿ ಜರುಗಲಿದ್ದು, ಈ ಟೂರ್ನಿಯಲ್ಲಿನ ಪಾಕಿಸ್ತಾನದ ಪಂದ್ಯಗಳಿಗೆ ಶ್ರೀಲಂಕಾ ಅಥವಾ ಯುಎಇ ಆತಿಥ್ಯವಹಿಸುವ ಸಾಧ್ಯತೆ ಹೆಚ್ಚು.

## ಚಾಂಪಿಯನ್ಸ್ ಟ್ರೋಫಿ 2025 ರ ವೇಳಾಪಟ್ಟಿ ಪ್ರಕಟ

# ಫೆ.23ಕ್ಕೆ ಭಾರತ-ಪಾಕ್ ಮುಖಾಮುಖಿ

**ನವದೆಹಲಿ:** ಬಹಳ ವಿಳಂಬದ ನಂತರ ಅಂತರರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್ ಮಂಗಳವಾರ ಅಧಿಕೃತವಾಗಿ ಚಾಂಪಿಯನ್ಸ್ ಟ್ರೋಫಿ 2025 ವೇಳಾಪಟ್ಟಿಯನ್ನು ಪ್ರಕಟಿಸಿದೆ.

ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಲಾಗುತ್ತಿರುವ ಎಲೈಟ್ ಪಂದ್ಯಾವಳಿಯು ಫೆಬ್ರವರಿ 19 ರಂದು ಕರಾಚಿಯಲ್ಲಿ ಪಾಕಿಸ್ತಾನ ಮತ್ತು ನ್ಯೂಜಿಲೆಂಡ್ ನಡುವಿನ ಪಂದ್ಯದೊಂದಿಗೆ ಪ್ರಾರಂಭವಾಗಲಿದೆ.

ಮಾರ್ಚ್ 9 ರಂದು ಫೈನಲ್ ಪಂದ್ಯ ನಡೆಯಲಿದೆ. ಭಾರತವು ಫೆಬ್ರವರಿ 20 ರಂದು ಬಾಂಗ್ಲಾದೇಶ ತಂಡದ ವಿರುದ್ಧ ಚಾಂಪಿಯನ್ಸ್ ಟ್ರೋಫಿಯ ತನ್ನ ಮೊದಲ ಪಂದ್ಯವನ್ನು ದುಬೈನಲ್ಲಿ ಆಡಲಿದೆ. ಭಾರತ ತನ್ನ ಎಲ್ಲಾ ಪಂದ್ಯಗಳನ್ನು ದುಬೈನಲ್ಲಿ ಆಡಲಿದೆ.



ಎಂಟು ಸ್ಪರ್ಧಾತ್ಮಕ ತಂಡಗಳನ್ನು ಎರಡು ಗುಂಪುಗಳಾಗಿ ವಿಂಗಡಿಸಲಾಗಿದೆ. ಎ ಗುಂಪಿನಲ್ಲಿ ಪಾಕಿಸ್ತಾನ, ಭಾರತ, ನ್ಯೂಜಿಲೆಂಡ್, ಬಾಂಗ್ಲಾದೇಶ ತಂಡಗಳಿವೆ. ಬಿ ಗುಂಪಿನಲ್ಲಿ ದಕ್ಷಿಣ ಆಫ್ರಿಕಾ, ಆಸ್ಟ್ರೇಲಿಯಾ, ಅಫ್ಘಾನಿಸ್ತಾನ, ಇಂಗ್ಲೆಂಡ್ ಸೇರಿವೆ. ಭಾರತವು ಫೆಬ್ರವರಿ 23 ರಂದು ದುಬೈನಲ್ಲಿ ಪಾಕಿಸ್ತಾನ ವಿರುದ್ಧ ಸೆಣಸಲಿದೆ.

ಎಂಟು ತಂಡಗಳ ಟೂರ್ನಿಯಲ್ಲಿ 15 ಪಂದ್ಯಗಳು ನಡೆಯಲಿದ್ದು, ಪಾಕಿಸ್ತಾನ ಮತ್ತು ದುಬೈನಲ್ಲಿ ನಡೆಯಲಿವೆ ಎಂದು ಐಸಿಸಿ ತಿಳಿಸಿದೆ. ಪಾಕಿಸ್ತಾನದಲ್ಲಿ ರಾವಲ್ಪಿಂಡಿ, ಲಾಹೋರ್ ಮತ್ತು ಕರಾಚಿ ಪಂದ್ಯಾವಳಿಗಳು ನಡೆಯಲಿವೆ.

ಭಾರತ ಫೈನಲ್‌ಗೆ ಅರ್ಹತೆ ಪಡೆಯದೇ ಇದ್ದರೆ, ಮಾರ್ಚ್ 9ರ ಪಂದ್ಯ ಲಾಹೋರ್‌ನಲ್ಲಿ ನಡೆಯಲಿದೆ. ಒಂದು ವೇಳೆ, ಅರ್ಹತೆ ಪಡೆದರೆ ದುಬೈನಲ್ಲಿ ಪಂದ್ಯ ಫೈನಲ್ ನಡೆಯಲಿದೆ. ಸೆಮಿಫೈನಲ್ ಮತ್ತು ಫೈನಲ್ ಎರಡೂ ಮೀಸಲು ದಿನಗಳನ್ನು ಹೊಂದಿರುತ್ತದೆ. ಭಾರತವನ್ನು ಒಳಗೊಂಡ ಮೂರು ಗುಂಪು ಪಂದ್ಯಗಳು ಮತ್ತು ಮೊದಲ ಸೆಮಿಫೈನಲ್ ಪಂದ್ಯ ದುಬೈನಲ್ಲಿ ನಡೆಯಲಿದೆ.

## ಉದ್ಘಾಟನೆಯಾಗದೇ ಪಾಳುಬಿದ್ದ ಹೊಸ ಕಟ್ಟಡಗಳು

# ಮಂಗಳೂರಲ್ಲಿ ಸ್ಮಾರ್ಟ್ ಮಾರ್ಕೆಟ್‌ಗಳು

**ಮಂಗಳೂರು:** ಸುಸಜ್ಜಿತ ಕಟ್ಟಡವಿದ್ರೂ ಮಳಿಗೆಗಳಿಲ್ಲ ಎನ್ನುವ ಕೊರತೆ, ಮಳಿಗೆಗಳಿದ್ದರೆ ಗ್ರಾಹಕರಿಲ್ಲ ಎನ್ನುವ ಕೊರಗು. ಮತ್ತೊಂದೆಡೆ ನಿರ್ಮಾಣ ಶುರುವಾಗಿ ದಶಕವಾದರೂ ಪೂರ್ಣಗೊಂಡಿಲ್ಲ ಎನ್ನುವ ದೂರು. ಹೀಗೆ ಕಡಲನಗರಿಯ ಹೈಟೆಕ್ ಮಾರುಕಟ್ಟೆಗಳು ದಿಕ್ಕು ದೆಸೆಯಿಲ್ಲದಂತಾಗಿದೆ.

ಒಂದೆಡೆ ನಿರ್ಮಾಣವಾದ ಕಟ್ಟಡಗಳಿಗೆ ಸೂಕ್ತ ನಿರ್ವಹಣೆ ಇಲ್ಲ. ನಿರ್ಮಾಣ ಹಂತದಲ್ಲಿರುವ ಕಟ್ಟಡಗಳದ್ದು ಇನ್ನೊಂದು ಕಥೆ. ಹೀಗೆ, ಸ್ಮಾರ್ಟ್ ಸಿಟಿ ಮಂಗಳೂರು ನಗರದಲ್ಲಿ ವ್ಯಾಪಾರಿಗಳಿಗೆ ಹಾಗೂ ಗ್ರಾಹಕರಿಗೆ ಮೂಲಸೌಕರ್ಯ ನೀಡುವ ಉದ್ದೇಶದಿಂದ ಆರಂಭವಾದ ನಗರದ ಪ್ರಮುಖ ಮಾರುಕಟ್ಟೆಗಳಿಗೆ ಸ್ಟ್ರೋಕ್ ಆಗಿದೆ. ಒಂದೊಂದು ಮಾರುಕಟ್ಟೆಯದ್ದು ಒಂದೊಂದು ಕಥೆ ಅನ್ನೋ ಹಾಗಾಗಿದೆ. ಬಹುತೇಕ ಕಟ್ಟಡಗಳು ಸ್ಮಾರ್ಟ್ ಸಿಟಿ, ಮಂಗಳೂರು ಮಹಾನಗರ ಪಾಲಿಕೆ ಅನುದಾನದಲ್ಲಿ ನಿರ್ಮಾಣಗೊಂಡರೆ, ಬೆರಳೆಣಿಕೆಯ ಕಟ್ಟಡಗಳು ಸರ್ಕಾರಿ-ಖಾಸಗಿ ಸಹಭಾಗಿತ್ವದಲ್ಲಿ ನಿರ್ಮಾಣಗೊಳ್ಳುತ್ತಿವೆ.

ಹೇಳುವುದಕ್ಕೆ ಇವುಗಳೆಲ್ಲವೂ ಹೈಟೆಕ್ ಮಾರುಕಟ್ಟೆಗಳು. 12.29 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾದ ನಗರದ ಉರ್ವಾ ಮಾರುಕಟ್ಟೆ ಪೂರ್ಣ ಪ್ರಮಾಣದಲ್ಲಿ ಬಳಕೆಯಾಗದೆ ನಿರಾಶ್ರಿತರ ತಾಣವಾಗಿ ಮಾರ್ಪಟ್ಟಿದ್ದು ಶೋಚನೀಯ. ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ ಸಹಯೋಗದಲ್ಲಿ ನಿರ್ಮಾಣವಾದ ಮೊದಲ ಮಾರುಕಟ್ಟೆಯೇ ಈ ರೀತಿಯಾಗಿ ಸೈಡ್ ಲೈನ್ ಆದಂತಿದೆ. ಮೂರು ಅಂತಸ್ತಿನ ಉರ್ವಾ ಮಾರುಕಟ್ಟೆಯಲ್ಲಿ ಬೆರಳೆಣಿಕೆಯ ಮಳಿಗೆಗಳನ್ನು ಬಿಟ್ಟರೆ, ಉಳಿದೆಲ್ಲವೂ ನಿರಾಶ್ರಿತರಿಗೆ ಆಶ್ರಯತಾಣವಾಗಿದೆ. ಇದೇ ಹಾದಿಯಲ್ಲಿ ಕದ್ರಿಯ ಮಲ್ಲಿಕಟ್ಟೆ ಮಾರುಕಟ್ಟೆಯೂ ಜೊತೆಯಾಗಿದೆ. ಇಲ್ಲೂ ಅಷ್ಟೇ ಕಟ್ಟಡ ಹೈಟೆಕ್ ಇದ್ದರೂ ವರ್ತಕರಿಗೆ ಬೇಕಾದಂತೆ ನಿರ್ಮಿಸಿಲ್ಲ ಎನ್ನುವ ದೂರು ಕೇಳಿ ಬರುತ್ತಿದೆ. ಹೀಗಾಗಿ, ಕಟ್ಟಡ ರೆಡಿಯಾಗಿ ಮೂರ್ನಾಲ್ಕು ವರ್ಷಗಳಾದರೂ ಇನ್ನೂ ಉದ್ಘಾಟನೆ ಭಾಗ್ಯ ಮಾತ್ರ ಸಿಕ್ಕಿಲ್ಲ.



ಮಂಗಳೂರು ನಗರದ ಪ್ರಮುಖ ಮಾರುಕಟ್ಟೆಯಾಗಿದ್ದ ಸೆಂಟ್ರಲ್ ಮಾರ್ಕೆಟ್‌ನ ಹಳೆಯ ಕಟ್ಟಡ ಕೆಡವಿ ಹೊಸದಾಗಿ ನಿರ್ಮಿಸುತ್ತಿದ್ದರೂ, ಆರಂಭದಲ್ಲಿದ್ದ ವೇಗ ಈಗಿಲ್ಲ ಎನ್ನುವ ಮಾತಿದೆ. 2026ರ ಜನವರಿ 16ಕ್ಕೆ ಪೂರ್ಣಗೊಳ್ಳಬೇಕಿದ್ದ ಕಟ್ಟಡ ಅರ್ಧ ಕಾಮಗಾರಿ ಮುಗಿದ ಬಳಿಕ ವೇಗ ಕಳೆದುಕೊಂಡಿದೆ. ಇನ್ನು ಕಂಕನಾಡಿ ಹಾಗೂ ಸುರತ್ಕಲ್ ಮಾರುಕಟ್ಟೆಗಳು ಕಾಮಗಾರಿ ಆರಂಭವಾಗಿ ದಶಕ ಸಮೀಪಿಸಿದರೂ ದಡ ಸೇರುವ ಲಕ್ಷಣ ಕಾಣುತ್ತಿಲ್ಲ. ಎಲ್ಲವೂ ಆದಷ್ಟು ಬೇಗ ಜನರ ಉಪಯೋಗಕ್ಕೆ ಸಿಗಲಿದೆ ಎನ್ನುವ ಮಾಮೂಲಿ ಉತ್ತರ ನೀಡುತ್ತಿದೆ ಪಾಲಿಕೆ.

## ದೇಶದ ರಾಜಕಾರಣಿಗಳಲ್ಲಿ ನಂ.1 ಸುಳ್ಳುಗಾರ

# ಸಿ.ಟಿ.ರವಿ ಒಬ್ಬ ಡ್ರಗ್ ಅಡಿಕ್ಟ್

**ಮಡಿಕೇರಿ:** ಸಿ.ಟಿ.ರವಿ ಒಬ್ಬ ಡ್ರಗ್ ಅಡಿಕ್ಟ್, ಇಡೀ ದೇಶದ ರಾಜಕಾರಣಿಗಳಲ್ಲಿ ಎಲ್ಲೂ ನೋಡುವ ಹಾಗೆ ಇಲ್ಲ, ಟಾಪ್ 10 ನಲ್ಲಿ ನಂ.1 ಸುಳ್ಳುಗಾರ ಅವರೇ ಬರುತ್ತಾರೆ ಎಂದು ಕಾಂಗ್ರೆಸ್ ವಕ್ತಾರ ಎಂ.ಲಕ್ಷ್ಮಣ್ ವಾಗ್ದಾಳಿ ನಡೆಸಿದ್ದಾರೆ.

ಮಡಿಕೇರಿಯಲ್ಲಿ ಮಾತನಾಡಿದ ಅವರು, ಸಿಟಿ ರವಿ ಅವರು ಸದನದಲ್ಲಿ ಒಬ್ಬ ಹೆಣ್ಣುಮಗಳಿಗೆ ಆಕ್ಷೇಪಾರ್ಹ ಸಂಭಾಷಣೆ ಮಾಡಿ, ನಾನು ಹಾಗೆ ಅಂದಿಲ್ಲ ಎಂದು ಹೇಳಿಕೊಳ್ಳುತ್ತಾರೆ. ಅಲ್ಲದೇ, ಕಾನೂನಾತ್ಮಕವಾಗಿ ಅರೆಸ್ಟ್ ಮಾಡಿದ್ದರೆ, ಅರೆಸ್ಟ್ ಮಾಡಿರುವುದನ್ನೇ ವಿಚಿತ್ರವಾಗಿ ಬಿಂಬಿಸಿ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಬಿಜೆಪಿ ನಾಯಕರು ಹಾಗೂ ಸಿಟಿ ರವಿ ಅವರಿಗೆ ನಾಚಿಕೆಯಾಗಬೇಕು. ಅದರಲ್ಲೂ ಚಿಕ್ಕಮಗಳೂರಿನಲ್ಲಿ ಬಿಜೆಪಿ ಅವರು ಸಿಟಿ ರವಿ ಅವರನ್ನು ಸ್ವಾತಂತ್ರ್ಯ ಹೋರಾಟಗಾರ ಅನ್ನೋ ರೀತಿಯಲ್ಲಿ ಬಿಂಬಿಸುವ ಕೆಲಸ ಮಾಡುತ್ತಿದ್ದಾರೆ. ಯಾವ ದೇಶಕ್ಕಾಗಿ ಹೋರಾಟ ಮಾಡಿದ್ದಾರೆ ಎಂದು ಬಿಂಬಿಸುತ್ತಿದ್ದೀರಾ ಎಂದು ಪ್ರಶ್ನಿಸಿದ್ದಾರೆ.



ಸಭಾಪತಿ ಬಸವರಾಜ ಹೊರಟ್ಟಿ ಅವರು ಆರಂಭದಲ್ಲಿ ಚಂದ ಇದ್ರು. ಆಮೇಲೆ ಅವರನ್ನು ಬಿಜೆಪಿ ಅವರೇ ಅವರನ್ನು ಎದುರಿಸಿ ಅವರ ಕೈಯಲ್ಲಿ ಬೇರೆ ರೀತಿಯಲ್ಲಿ ಹೇಳಿಕೆ ಕೊಡಿಸುವ ರೀತಿಯಲ್ಲಿ ಕೆಲಸ ಮಾಡುತ್ತಿದ್ದಾರೆ. ಘಟನೆ ನಡೆದ ಸ್ಥಳದಲ್ಲಿ ಮಹಜರು ಮಾಡಲು ಅವಕಾಶ ಕೊಡುತ್ತಿಲ್ಲ. ಇದು ಯಾಕೆ ಹೀಗೆ ಮಾಡುತ್ತಿದ್ದಾರೆ. ನಮ್ಮ ಕಾಂಗ್ರೆಸ್ ಕಾರ್ಯಕರ್ತರ ಮೇಲೆ ಕೇಸ್ ಹಾಕಿ ಅವರನ್ನು ಎದುರಿಸುವ ಕೆಲಸ ಮಾಡಿಸುತ್ತ ಇದ್ದಾರೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಈ ಹಿಂದೆ ಸಿಟಿ ರವಿ ಅವರು ಸಿದ್ದರಾಮುಲ್ಲಾ ಖಾನ್, ರಾಹುಲ್ ಗಾಂಧಿ ಅವರನ್ನು ಡ್ರಗ್ ಅಡಿಕ್ಟ್ ಎಂದು ಹೇಳಿಕೊಂಡು ಇರುತ್ತಿದ್ರು. ಅದ್ರೆ ಈಗ ಸಿಟಿ ರವಿ ಅವರೇ ಒಬ್ಬ ಡ್ರಗ್ ಅಡಿಕ್ಟ್‌ಗೆ ಒಳಗಾಗಿರಬೇಕು. ಇಂತಹ ಮನಸ್ಥಿತಿ ವ್ಯಕ್ತಿಯೇ ಡ್ರಗ್ ಅಡಿಕ್ಟ್ ಒಬ್ಬರಾಗಿದ್ದಾರೆ ಎಂದು ಗುಡುಗಿದ್ದಾರೆ.

ಸದನದಲ್ಲಿ ಹೊರಟ್ಟಿ ಮೇಲೆ ಬಿಜೆಪಿ ನಾಯಕರು ಪ್ರಭಾವ ಬೀರಿ ಪ್ರಕರಣವನ್ನು ತಿರುಚುವ ಕೆಲಸಕ್ಕೆ ಮುಂದಾಗಿದ್ದಾರೆ. ಹೊರಟ್ಟಿ ಅವರು ಮುಗಿದ ಅಧ್ಯಾಯ ಅನ್ನುತ್ತೀರಿ. ಅದರೆ, ಕಾಂಗ್ರೆಸ್ ಈ ಪ್ರಕರಣದಲ್ಲಿ ಕಾನೂನು ರೀತಿಯಲ್ಲಿ ಹೋರಾಟ ಮಾಡಲು ಮುಂದಾಗಿದೆ ಎಂದು ತಿಳಿಸಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com